ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 66 ಸಂಚಿಕೆ- 66 | PAGE- 8 ಪುಟ-8 | ಗುರುವಾರ 17.04.2025 | RS.2/- ಬೆಲೆ 2/-

### ಕಿತ್ತಾಡಿಕೊಳ್ಳುತ್ತಿದ್ದರೇ ನಿಮ್ಮ ಸರ್ಕಾರವನ್ನು ಮೋದಿ ಮುಗಿಸುತ್ತಾರೆ:

## ಸಿಎಂ,ಡಿಸಿಎಂಗೆ ಖರ್ಗೆ ಎಚ್ಚರಿಕೆ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಏ.16:ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಕೂಗು ಜೋರಾಗಿದೆ. ಇದರ ನಡುವೆಯೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಗೆ ಕಿವಿಮಾತು ಹೇಳಿದ್ದಾರೆ. ನಿಮ್ಮ ಸರ್ಕಾರವನ್ನು ಬೀಳಿಸಲು ನರೇಂದ್ರ ಮೋದಿ ಅವರು ಮುಂದಾಗಿದ್ದಾರೆ. ನೀವು, ನೀವೆ ಕಿತ್ತಾಡಿಕೊಳ್ಳುತ್ತಿದ್ದರೆ ಸರ್ಕಾರವನ್ನು ಮುಗಿಸುತ್ತಾರೆ ಹುಷಾರಾಗಿರಿ ಎಂದು ಉಭಯ ನಾಯಕರಿಗೂ ವೇದಿಕೆ ಮೇಲೆ ಎಚ್ಚರಿಕೆ ನೀಡಿದ್ದಾರೆ.ಕಲಬುರಗಿಯಲ್ಲಿ ನಡೆದ ವಿಭಾಗ ಮಟ್ಟದ ಉದ್ಯೋಗ ಮೇಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಖರ್ಗೆ ಅವರು, ಕರ್ನಾಟಕದಲ್ಲಿನ ಕಾಂಗ್ರೆಸ್ ಸರ್ಕಾರ ತೆಗೆಯಲು ಪ್ಲಾನ್ ನಡೆದಿದೆ. ಪ್ರಧಾನಿ ನರೇಂದ್ರ ಮೋದಿ ನಿಮ್ಮ ಸರ್ಕಾರವನ್ನು ಬೀಳಿಸುತ್ತಾರೆ. ನಿಮ್ಮಲ್ಲಿ ಏನೇ ಮನಸ್ತಾಪ ಇದ್ದರೂ ಒಗ್ಗಟ್ಟಾಗಿರಬೇಕು. ನೀವು ಹುಷಾರಾಗಿರಬೇಕು ಎಂದು ಹೇಳಿದರು. ಇದೇ ವೇಳೆ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಗಾಂಧಿ ಹಾಗೂ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಜಾರಿ ನಿರ್ದೇಶನಾಲಯ ಮೂಲಕ ಬೆದರಿಸಲು ಕೇಂದ್ರ ಸರ್ಕಾರ ನೋಡುತ್ತಿದೆ. ಇದಕ್ಕೆಲ್ಲಾ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಹೆದರುವುದಿಲ್ಲ ಎಂದು ಹೇಳಿದರು.ಪ್ರಧಾನಿ ನರೇಂದ್ರ ಮೋದಿಯವರು ಕಲ್ಯಾಣ ಕರ್ನಾಟಕಕ್ಕೆ ಯಾವುದೇ ಅಭಿವೃದ್ಧಿ ಕೆಲಸಗಳನ್ನು ಮಾಡಿಲ್ಲ, ಮಾಡುವುದೂ ಇಲ್ಲ. ಏಕೆಂದರೆ ನಾನು 1 ವರ್ಷದಲ್ಲಿ ಮಾಡಿದ ಅಭಿವೃದ್ಧಿ ಕೆಲಸಗಳನ್ನು ಕೇಂದ್ರ ಬಿಜೆಪಿ ಸರ್ಕಾರಕ್ಕೆ ಕಳೆದ 10 ವರ್ಷಗಳಿಂದ ಮಾಡುವುದಕ್ಕೆ ಸಾಧ್ಯವಾಗಿಲ್ಲ. ಕಡೇಚೂರಿನಲ್ಲಿ ರೈಲು ಬೋಗಿ ಕಾರ್ಖಾನೆ ನಿರ್ಮಾಣಕ್ಕಾಗಿ ಉಚಿತವಾಗಿ ಜಾಗ, ನೀರು, ವಿದ್ಯುತ್ ನೀಡಿದರು ಕೂಡ ಮೋದಿ ಸರ್ಕಾರ ಅನುದಾನ ಬಿಡುಗಡೆ ಮಾಡದೆ ನಿರ್ಲಕ್ಷಿಸುತ್ತಿದೆ. ಕಲಬುರಗಿಯಿಂದ ದೇಶದ ವಿವಿಧ ಭಾಗಗಳಿಗೆ 27ಕ್ಕೂ ಹೆಚ್ಚು ರೈಲುಗಳನ್ನು ತಂದಿದ್ದೇವೆ. ಆದರೆ ಕಲಬುರಗಿಯಿಂದ ಬೆಂಗಳೂರಿಗೆ ಹೆಚ್ಚುವರಿ ರೈಲುಗಳನ್ನು ಬಿಡಿ ಎಂದು ಮನವಿ ಮಾಡಿದರೂ ಸಹ ಕೇಂದ್ರ ಸರ್ಕಾರ ಸ್ಪಂದಿಸುತ್ತಿಲ್ಲ ಎಂದರು.

ಕಲಬುರಗಿ ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ಶ್ರೀನಿವಾಸ ಸರಡಗಿ ಗ್ರಾಮದ ಜನರು ಮುಕ್ತ ಮನಸ್ಸಿನಿಂದ ತಮ್ಮ ಜಮೀನುಗಳನ್ನು ಬಿಟ್ಟು-ಕೊಟ್ಟಿದ್ದಾರೆ. ಈಗ ನೋಡಿದರೆ ಇಲ್ಲಿಗೆ ವಿಮಾನಗಳೇ ಬರುತ್ತಿಲ್ಲ. ಕಲಬುರಗಿಗೆ ನಿರಂತರ ವಿಮಾನ ಸೇವೆ ಆರಂಭಿಸಲು ಮೋದಿ ಸರ್ಕಾರ ಯಾವುದೇ ಇಚ್ಛಾಶಕ್ತಿ ಪ್ರದರ್ಶಿಸುತ್ತಿಲ್ಲ. ಆದರೆ ಕೇಂದ್ರ ಸರ್ಕಾರಕ್ಕೆ ಆಸಕ್ತಿ ಇರುವುದು ಒಂದೇ ವಿಷಯದಲ್ಲಿ, ಅದು ವಿಪಕ್ಷ ನಾಯಕರ ಮೇಲೆ ಐಟಿ, ಇಡಿ ದಾಳಿಗಳನ್ನು ಮಾಡಿಸುವುದರಲ್ಲಿ ಮಾತ್ರ ನಿರತವಾಗಿದೆ ಎಂದು ಆರೋಪಿಸಿದರು.

## ರಾಜ್ಯದಲ್ಲಿ ನಿರುದ್ಯೋಗ ನಿವಾರಣೆಗೆ ಪಣ:ಸಿ.ಎಂ.



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಏ.16:ದೇಶದಲ್ಲಿ ನಿರುದ್ಯೋಗ ಅತೀ ದೊಡ್ಡ ಸಮಸ್ಯೆಯಾಗಿದ್ದರು ಕೇಂದ್ರ ಸರಿಯಾಗಿ ಸ್ಪಂದಿಸದೆ ಇರುವುದರಿಂದ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಅದರೆ ರಾಜ್ಯದಲ್ಲಿ ನಿರುದ್ಯೋಗ ನಿವಾರಣೆಗೆ "ಯುವ ನಿಧಿ" ಯೋಜನೆ ಜಾರಿ ಜೊತೆಗೆ ಯುವಕರಿಗೆ ಕೌಶಲ್ಯ ನೀಡುವ ಮೂಲಕ ನಿರುದ್ಯೋಗ ನಿವಾರಣೆಗೆ ಪಣ ತೊಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬುಧವಾರ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಇವುಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಕೆ.ಸಿ.ಟಿ ಕಾಲೇಜಿನ ಅವರಣದಲ್ಲಿ ಅಯೋಜಿಸಿದ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ ಉದ್ಘಾಟಿಸಿದಲ್ಲದೆ ಸಾಂಕೇತಿಕವಾಗಿ ಆಯ್ದ ಯುವಕರಿಗೆ ನೇಮಕಾತಿ ಪತ್ರ ವಿತರಿಸಿ ಅವರು ಮಾತನಾಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವರ್ಷಕ್ಕೆ 2 ಕೋಟಿ ಉದ್ಯೋಗ ಕೊಡ್ತೀನಿ ಅಂದಿದ್ದರು. ಇದುವರೆಗೆ 20 ಲಕ್ಷ ಜನರಿಗೆ ಉದ್ಯೋಗ ನೀಡಿಲ್ಲ. ಕೇಂದ್ರದಲ್ಲಿ ಹಾಗೂ ರಾಜ್ಯದಲ್ಲಿ ಹೂಡಿಕೆ ಹೆಚ್ಚಾದಷ್ಟೂ ಉದ್ಯೋಗ ಸೃಷ್ಟಿ ಹೆಚ್ಚಾಗುತ್ತದೆ. ಕೇಂದ್ರ ಸರ್ಕಾರ ದೇಶದ ಯುವ ಜನತೆಯನ್ನು ಸಂಪೂರ್ಣ ನಿರ್ಲಕ್ಷಿಸುತ್ತಿದೆ. ಆದರೆ ನಮ್ಮ ಸರ್ಕಾರ ಯುವ ಜನತೆ ಕೈಗೆ ಉದ್ಯೋಗ ನೀಡಿ ಅವರ ಬದುಕು ಕಟ್ಟುವ ಕೆಲಸ ಮಾಡುತ್ತಿದೆ ಎಂದರು.

ಕರ್ನಾಟಕದಲ್ಲಿ ನಿರುದ್ಯೋಗ ನಿವಾರಣೆಗೆ ನಮ್ಮ ಸರ್ಕಾರ ಉದ್ಯೋಗ ಮೇಳ ನಿರಂತರವಾಗಿ ಆಯೋಜಿಸುತ್ತಿದೆ. ಇದರ ಫಲವಾಗಿ ದೇಶದ ನಿರುದ್ಯೋಗ ಪ್ರಮಾಣ ಶೇ.18.9 ಇದ್ದರೆ, ಕರ್ನಾಟಕದ ಪ್ರಮಾಣ ಶೇ.2.5 ಇದೆ ಎಂದ ಅವರು, ನಾವು ನುಡಿದಂತೆ ನಡೆಯುತ್ತಾ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೇವೆ. ಇದರಲ್ಲಿ ಯುವ ನಿಧಿ ಕಾರ್ಯಕ್ರಮ ಕೂಡ ಸೇರಿದೆ. ನಿರುದ್ಯೋಗ ಭತ್ಯೆ ಜೊತೆಗೆ ಕೌಶಲ್ಯ ತರಬೇತಿ ನೀಡಿ ಉದ್ಯೋಗವನ್ನೂ ಒದಗಿಸುತ್ತಿದ್ದೇವೆ ಎಂದರು.

ಮಾರುಕಟ್ಟೆ ಆಧಾರಿತ ಕೌಶಲ್ಯ ನೀಡಿ ಉದ್ಯೋಗ ಸೃಜಿಸಲು ಸಚಿವ ಡಾ.ಶರಣಪ್ರಕಾಶ್ ಪಾಟೀಲ ಅವರಿಗೆ ಸೂಚಿಸಿದ್ದೇನೆ. ಹೀಗಾಗಿ ಇಂದಿಲ್ಲಿ ಉದ್ಯೋಗ ಮೇಳದಲ್ಲಿ ಬಂದವರಿಗೆಲ್ಲ ಕೆಲಸ ಸಿಗದೆ ಹೋದರು ನಿರಾಶರಾಗಬೇಡಿ. ನೋಂದಾಯಿತರಾದ ಎಲ್ಲರಿಗೂ ಉದ್ಯೋಗ ಸಿಕ್ಕೇ ಸಿಗುತ್ತದೆ. ಆ ನಿಟ್ಟಿನಲ್ಲಿ ಕೌಶಲ್ಯ ನೀಡಲಾಗುತ್ತದೆ ಎಂದು ಭರವಸೆ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ 2025-26ನೇ ಸಾಲಿಗೆ 5,000 ಕೋಟಿ ರೂ. ಅನುದಾನ ನೀಡಿದ್ದು, ಅಷ್ಟು ಹಣ ಖರ್ಚು ಮಾಡುವಂತೆ ಡಾ.ಅಜಯ್ ಸಿಂಗ್ ಅವರಿಗೆ ಸೂಚಿಸಿದ್ದು, ಅವರು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಸಿ.ಎಂ. ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕೈಗಾರಿಕೆ ಸ್ಥಾಪನೆಗೆ ಹೆಚ್ಚಿನ ಪ್ರೋತ್ಸಾಹ: ರಾಜ್ಯದಲ್ಲಿಯೆ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಉದ್ಯೋಗ ನೀಡುವ ಹೆಚ್ಚಿನ ಕೈಗಾರಿಕೆಗಳು ಸ್ಥಾಪನೆಗೆ ಉದ್ದಿಮೆದಾರರಿಗೆ ಹೆಚ್ಚಿನ ಪ್ರೋತ್ಸಾಹ ನೀಡಲು ಸರ್ಕಾರ ಸೂಕ್ತವಾಗಿ ಪರಿಗಣಿಸಲಿದೆ. ಅಲ್ಲದೆ ಕೌಶಲ್ಯ ನೀಡುವ ತರಬೇತಿ ಕೇಂದ್ರಗಳನ್ನು ಸಹ ತೆರೆಯಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

**ಕಲ್ಯಾಣದಲ್ಲಿ ಕೈಗಾರಿಕೆಗೆ ಒತ್ತು ಕೊಡಿ:** ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ ಖರ್ಗೆ ಮಾತನಾಡಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕೈಗಾರಿಕೆಗಳು ಇಲ್ಲದಿರುವುದರಿಂದ ಇಲ್ಲಿ ನಿರುದ್ಯೋಗ ಹೆಚ್ಚಾಗಿದೆ. ಈ ಭಾಗದ ಜನರಿಗೆ ಕೌಶಲ್ಯ ನೀಡುವ ನಿಟ್ಟಿನಲ್ಲಿ ಕೈಗಾರಿಕೆ, ತರಬೇತಿ ಕೇಂದ್ರಗಳು ಇಲ್ಲಿ ಹೆಚ್ಚಾಗಿ ತೆರೆಯಬೇಕು. ಕೈಗಾರಿಕೆಗಳು ಸ್ಥಾಪನೆಗೆ ಉದ್ದಿಮೆದಾರರಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಕೆಲಸವಾಗಬೇಕು ಎಂದು ರಾಜ್ಯ ಸರ್ಕಾರಕ್ಕೆ ಸಲಹೆ ನೀಡಿದರು.

1/3 ಮೆಜಾರಿಟಿ ಇಲ್ಲದಿದ್ದರು ಪ್ರದೇಶದ ಒಳಿತಿಗಾಗಿ ಸರ್ವ ಪಕ್ಷಗಳ

(2ನೇ ಪುಟ ನೋಡಿ)



ಬೀದರ:ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲು ಬೀದರಗೆ ಆಗಮಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯವರನ್ನು ವಿಮಾನ ನಿಲ್ದಾಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ,ಸಚಿವ ರಹೀಮ ಖಾನ್,ಸಂಸದ ಸಾಗರ ಖಂಡ್ರೆ,ಮಾಜಿ ಸಚಿವ ರಾಜಶೇಖರ ಪಾಟೀಲ ಪುಷ್ಪಗುಚ್ಛ ನೀಡಿ ಸ್ವಾಗತಿಸಿದರು.ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ,ಜಿ.ಪಂ.ಸಿಇಓ ಡಾ.ಗಿರೀಶ ಬದೋಲೆ ಹಾಗೂ ಇತರರು ಉಪಸ್ಥಿತರಿದ್ದರು.

## ಕಲಬುರಗಿಯಲ್ಲಿ ಅಭಿವೃದ್ಧಿಯ ಮಹಾಪೂರ:ಸಿದ್ದರಾಮಯ್ಯ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ,ಏ.16: ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರದ ಬಳಿ ಹಣ ಇಲ್ಲ ಎಂದು ವಿನಾಕಾರಣ ವಿರೋಧ ಪಕ್ಷಗಳು ಟೀಕೆ ಮಾಡುವ ಬದಲು ಕಲಬುರಗಿಗೆ ಬಂದು ನೋಡಿದರೆ ಅಭಿವೃದ್ಧಿ ಕಾರ್ಯ ಕಣ್ಣಿಗೆ ಕಾಣುತ್ತವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.ಬುಧವಾರ ಕಲಬುರಗಿ ನಗರದ ಜಿಮ್ಸ್ ಆಸ್ಪತ್ರೆ ಆವರಣದಲ್ಲಿ 216.53 ಕೊಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ ಮತ್ತು 6.20 ಕೋಟಿ ರೂ. ವೆಚ್ಚದಲ್ಲಿ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಬ್ರಾಕಿಥೆರಪಿ ವಿಕಿರಣ ಚಿಕಿತ್ಸೆ ಘಟಕ ಉದ್ಘಾಟನೆ ಹಾಗೂ 421.31 ಕೋಟಿ ರೂ. ಮೊತ್ತದ ವಿವಿಧ 8 ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಜೊತೆಗೆ ಆಯವ್ಯಯದಲ್ಲಿ ಘೋಷಿಸಿದ ಯೋಜನೆಗಳನ್ನು ಜಿಲ್ಲೆಗಳಲ್ಲಿ ಒಂದೊಂದಾಗಿ ಜಾರಿಗೆ ತರುತ್ತಿದ್ದೇವೆ. 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಇಂದು ಕಲಬುರಗಿಯಲ್ಲಿ 644 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಇದು ಅಭಿವೃದ್ಧಿ ಅಲ್ಲವೆ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು, ಅಭಿವೃದ್ಧಿಗೆ ನಮ್ಮ ಸರ್ಕಾರದಲ್ಲಿ ಹಣಕ್ಕೆ ಕೊರತೆ ಇಲ್ಲ. ಎಲ್ಲಾ ವರ್ಗದ ಜನರಿಗೆ, ಅವಕಾಶಗಳಿಂದ ವಂಚಿತರಾದ ಜನರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸಲು ನಮ್ಮ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದು ತಿಳಿಸಿದರು.ಪ್ರತೀ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು, ಟ್ರಾಮಾ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ ಇರಲೇಬೇಕು ಎನ್ನುವುದು ನಮ್ಮ ಸರ್ಕಾರದ ಗುರಿ.

(2ನೇ ಪುಟ ನೋಡಿ)

## ಬೀದರ್-ಬೆಂಗಳೂರು ವಿಮಾನ ಸೇವೆ ಮತ್ತೆ ಆರಂಭ; ಸಿಎಂ ಚಾಲನೆ




ಬೀದರ್:ಏ.16: ಸುಮಾರು ಒಂದೂವರೆ ವರ್ಷದ ಹಿಂದೆ ಸ್ಥಗಿತಗೊಂಡಿದ್ದ ಬೀದರ್ - ಬೆಂಗಳೂರು ವಿಮಾನ ಸೇವೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಮರು ಚಾಲನೆ ನೀಡಿದ್ದಾರೆ.ಇಂದು ಸಂಜೆ ಬೀದರ್ ವಿಮಾನ ನಿಲ್ದಾಣದಲ್ಲಿ ಸಿಎಂ ಸಿದ್ದರಾಮಯ್ಯ ಅವರು ಕೇಕ್ ಕತ್ತರಿಸಿ, ಬೋರ್ಡಿಂಗ್ ಪಾಸ್ ನೀಡವ ಮೂಲಕ ಬೀದರ್ - ಬೆಂಗಳೂರು ವಿಮಾನ ಸೇವೆಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್? ಬಿ. ಖಂಡ್ರೆ ಅವರು, "ಕೇಂದ್ರ ಸರ್ಕಾರ ಉಡಾನ್ ಸಬ್ಸಿಡಿ ನಿಲ್ಲಿಸಿತು. ಈ ಹಿಂದೆ ಡಬಲ್ ಎಂಜಿನ್ ಸರ್ಕಾರ ಇದ್ದರೂ ಏನೂ ಮಾಡಲಿಲ್ಲ. ನಮ್ಮ ಸರ್ಕಾರ ಸ್ಥಗಿತಗೊಂಡಿದ್ದ ಬೀದರ್- ಬೆಂಗಳೂರು ನಾಗರಿಕ ವಿಮಾನಯಾನ ಪುನಾರಂಭಿಸಿದೆ. ಇದಕ್ಕಾಗಿ ಕೆಕೆಆರ್?ಡಿಬಿಯಿಂದ ಈ ವರ್ಷ 14 ಕೋಟಿ ರೂ. ಮೀಸಲಿಡಲಾಗಿದೆ" ಎಂದರು.

ನಾಳೆಯಿಂದ ಬೀದರ್-ಬೆಂಗಳೂರು ನಡುವೆ ಸ್ಟಾರ್ ಏರ್‌ಲೈನ್ಸ್ ವಿಮಾನ ಹಾರಾಟ ನಡೆಸಲಿದೆ. ಒಂದು ತಿಂಗಳ ಹಿಂದಿನಿಂದಲೇ ಸ್ಟಾರ್ ಏರ್‌ಲೈನ್ಸ್ ಆನ್‌ಲೈನ್‌ನಲ್ಲಿ ವಿಮಾನದ ಟಿಕೆಟ್ ಬುಕ್ಕಿಂಗ್ ಕೂಡ ಆರಂಭಿಸಿತ್ತು.

ಸ್ಟಾರ್ ಏರ್‌ಲೈನ್ಸ್ ವಿಮಾನ ಪ್ರತಿ ದಿನ ಬೆಳಗ್ಗೆ 7.30ಕ್ಕೆ ಬೆಂಗಳೂರಿನಿಂದ ಬೀದರ್ ಕಡೆಗೆ ಸಂಚರಿಸಲಿದೆ. ಅದೇ ದಿನ ಬೆಳಗ್ಗೆ 9.10ಕ್ಕೆ ಬೀದರ್‌ನಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದೆ. ವಿಮಾನದ ಟಿಕೆಟ್ ಬುಕ್ಕಿಂಗ್ ಆರಂಭಗೊಂಡು ವಿಮಾನ ಹಾರಾಟ ನಡೆಸುತ್ತಿರುವುದಕ್ಕೆ ಸಾರ್ವಜನಿಕರು ಹರ್ಷ ವ್ಯಕ್ತಪಡಿಸಿದ್ದಾರೆ.

## 1ನೇ ತರಗತಿ ಮಕ್ಕಳ ದಾಖಲಾತಿ ವಯೋಮಿತಿ ಗೊಂದಲಕ್ಕೆ ತೆರೆ



ಬೆಂಗಳೂರು:ಏ.16: 5 ವರ್ಷ 5 ತಿಂಗಳು ತುಂಬಿದ ಮಕ್ಕಳು 1ನೇ ತರಗತಿಗೆ ಸೇರಲು ರಾಜ್ಯ ಸರ್ಕಾರ ಅವಕಾಶ ಕಲ್ಪಿಸಿದೆ. ವಯಸ್ಸಿನ ಮಿತಿ ಸಡಿಲಿಕೆ ಬಗ್ಗೆ ಸಚಿವ ಮಧು ಬಂಗಾರಪ್ಪ ತಿಳಿಸಿದರು.

1ನೇ ತರಗತಿ ಸೇರುವ ಮಕ್ಕಳ ವಯೋಮಿತಿ ಸಡಿಲಿಕೆ ಸಂಬಂಧ ಸುದ್ದಿಗೋಷ್ಠಿ ನಡೆಸಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿದರು.ಪೋಷಕರು ವಯೋಮಿತಿ ಗೊಂದಲದಲ್ಲಿ ಇದ್ದಾ-ರೆ. ಎರಡು ತಿಂಗಳು ರಿಯಾಯ್ತಿ ಕೊಡಬಹುದು.ದೇಶದಲ್ಲಿ ಈಗಾಗಲೇ 6 ವರ್ಷ ಇದೆ. ಈ ವರ್ಷ ಮಾತ್ರ ವಯಸ್ಸಿನ ಮಿತಿ ಸಡಿಲ ಮಾಡಲಾಗುವುದು. ಮುಂದಿನ ವರ್ಷದಿಂದ 1ನೇ ತರಗತಿಗೆ ಸೇರಲು 6 ವರ್ಷ ನಿಯಮ ಕಡ್ಡಾಯ ಎಂದು ತಿಳಿಸಿದರು.ಎಸ್‌ಇಪಿ ಅವರಿಂದ ವರದಿ ಕೇಳಿದ್ವಿ. ಅವರು ಮೊದಲು 6 ವರ್ಷ ಅಂತ ಹೇಳಿದ್ರು. ಆಮೇಲೆ ನಮ್ಮ ಇಲಾಖೆ ಅವರ ಜೊತೆ ಮಾತಾಡಿದ್ವಿ. ಎಸ್‌ಇಪಿ ಸೂಚನೆ ಮೇಲೆ 5 ವರ್ಷ 5 ತಿಂಗಳು ಆಗಿದ್ದರೆ ದಾಖಲಾತಿ ಮಾಡಬೇಕು. ಸಮೀಕ್ಷೆಗೆ ತಂತ್ರಜ್ಞಾನ ಬಳಕೆ ಮಾಡಿ ಮತ್ತೆ ಮಾಡಲಿ ಎಂದರು. ಯುಕೆಜಿ ಮುಗಿಸಿರಬೇಕು. 1ನೇ ತರಗತಿಗೆ 5 ವರ್ಷ 5 ತಿಂಗಳು ದಾಖಲಾತಿ ಮಿತಿ ಸಡಿಲಿಕೆ ಮಾಡಲಾಗಿದೆ. ಇದು ಕೇವಲ ರಾಜ್ಯಪಠ್ಯಕ್ರಮಕ್ಕೆ ಮಾತ್ರ ಅನ್ವಯ. ಐಸಿಎಸ್‌ಸಿ, ಸಿಬಿಎಸ್‌ಇ ಬೋರ್ಡ್ ಬಗ್ಗೆ ನಾವು ನಿರ್ಧಾರ ಮಾಡಲು ಆಗೊಲ್ಲ ಎಂದು ಸ್ಪಷ್ಟಪಡಿಸಿದರು. ವಯೋಮಿತಿ ಸಡಿಲ ಮಾಡುವುದಕ್ಕೆ ಎಲ್ಲರೂ ಒತ್ತಡ ಹಾಕಿದ್ದರು. ಮಕ್ಕಳನ್ನ ಮಿಷನ್ ರೀತಿ ಓದಿಸೋಕೆ ಪೋಷಕರು ಮುಂದಾಗಬಾರದು. ಮಕ್ಕಳಿಗೆ ಒತ್ತಡ ಹಾಕುವುದು ಸರಿಯಲ್ಲ. ಒತ್ತಡ ಇಲ್ಲದೆ ಮಕ್ಕಳು ಓದಬೇಕು ಎಂದು ಸಲಹೆ ನೀಡಿದರು.

## ಹಿಂದೂ ಟ್ರಸ್ಟ್‌ಗಳಲ್ಲಿ ಮುಸ್ಲಿಮರ ನೇಮಕಕ್ಕೆ ಅವಕಾಶ ನೀಡುತ್ತೀರಾ? ಕೇಂದ್ರಕ್ಕೆ ಸುಪ್ರೀಂ ಪ್ರಶ್ನೆ



ನವದೆಹಲಿ:ಏ.16: 2025ರ ವಕ್ಫ್ (ತಿದ್ದುಪಡಿ) ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಹಲವು ಅರ್ಜಿಗಳ ವಿಚಾರಣೆಯ ಸಂದರ್ಭದಲ್ಲಿ ಮುಸ್ಲಿಮರನ್ನು ಹಿಂದೂ ಧಾರ್ಮಿಕ ಟ್ರಸ್ಟ್‌ಗಳ ಭಾಗವಾಗಲು ಅನುಮತಿ ನೀಡಲಾಗುತ್ತದೆಯೇ? ಎಂದು ಸುಪ್ರೀಂ ಕೋರ್ಟ್ ಬುಧವಾರ ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದೆ.

ವಕ್ಫ್ ಮಸೂದೆ ವಿರುದ್ಧದ ಅರ್ಜಿಗಳ ವಿಚಾರಣೆ ಆರಂಭಿಸಿದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ, ಮತ್ತು ನ್ಯಾಯಮೂರ್ತಿಗಳಾದ ಸಂ-ಜಯ್ ಕುಮಾರ್ ಹಾಗೂ ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ತ್ರಿಸದಸ್ಯ ಪೀಠ, ನೂತನ ವಕ್ಫ್ ತಿದ್ದುಪಡಿ ಕಾಯ್ದೆಯಲ್ಲಿನ ವಿವಿಧ ನಿಯಮಗಳು, ವಿಶೇಷವಾಗಿ ಬಳಕೆದಾರರ ಆಸ್ತಿಯನ್ನು ಬಳಸಿಕೊಳ್ಳುವ ವಕ್ಫ್‌ಗೆ ರೂಪಿಸಲಾಗಿರುವ ನಿಯಮಗಳ ಕುರಿತು ಪ್ರಶ್ನಿಸಿತು.

ಅರ್ಜಿದಾರರ ಪರ ವಾದಿಸಿದ ಹಿರಿಯ ವಕೀಲ ಕಪಿಲ್ ಸಿಬಲ್, "ವಕ್ಫ್ ಮಂಡಳಿಯಲ್ಲಿ ಮುಸ್ಲಿಮೇತರರ ನೇಮಕಕ್ಕೆ ಅವಕಾಶ ನೀಡಿರುವುದು ಸಂವಿಧಾನದ 26ನೇ ವಿಧಿಯ ಉಲ್ಲಂಘನೆ"ಯಾಗಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರ ಹಿಂದೂ ಧಾರ್ಮಿಕ ದತ್ತಿ ಮಂಡಳಿಗಳಲ್ಲಿ ಮುಸ್ಲಿಮರ ನೇಮಕಕ್ಕೆ ಅವಕಾಶ ನೀಡುತ್ತದೆಯೆ?" ಎಂದು ನ್ಯಾಯಾಲಯ ತರಾಟೆಗೆ ತೆಗೆದುಕೊಂಡಿತು

"ಇನ್ನು ಮುಂದೆ ಮುಸ್ಲಿಮರನ್ನು ಹಿಂದೂ ದತ್ತಿ ಮಂಡಳಿಗಳ ಭಾಗವಾಗಲು ನೀವು ಅನುಮತಿಸುತ್ತೀರಾ?

(2ನೇ ಪುಟ ನೋಡಿ)

## ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ : ರಾಷ್ಟ್ರಪತಿಗಳ ಅಂಗಳಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.16:ರಾಜ್ಯ ಸರ್ಕಾರ ಮತ್ತು ರಾಜ್ಯಪಾಲರ ನಡುವೆ ನಡೆ-ಯುತ್ತಿದ್ದ ಸಂಘರ್ಷ ಈಗ ರಾಷ್ಟ್ರಪತಿಗಳ ಅಂಗಳಕ್ಕೆ ತಲುಪಿದೆ. ಮುಸ್ಲಿಮ್ ಸಮುದಾಯದ ಗುತ್ತಿಗೆದಾರರಿಗೆ ಗುತ್ತಿಗೆಯಲ್ಲಿ ಶೇ.4 ಮೀಸಲಾತಿ ಕಲ್ಪಿಸಿದ್ದ ಮಸೂದೆಯನ್ನು ರಾಜ್ಯಪಾಲ ಥಾವರ್ ಸಿಂಗ್ ಗೆಹ್ಲೋಟ್ ಅವರು ರಾಷ್ಟ್ರಪತಿಗಳಿಗೆ ಕಳುಹಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಕಳುಹಿಸಿದ ಪತ್ರದಲ್ಲಿ ರಾಜ್ಯಪಾಲರು ಸಂವಿಧಾನದಲ್ಲಿ ಧರ್ಮ ಆಧಾರಿತ ಮೀಸಲಾತಿ ನೀಡಲು ಅವಕಾಶವಿಲ್ಲ. ಈ ಬಗ್ಗೆ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಸಂವಿಧಾನದ ಆರ್ಟಿಕಲ್ 14,15,16 ಉಲ್ಲೇಖಿಸಿ ನಿರಾಕರಣೆ ಮಾಡಿದೆ ಎಂದು ಕೆಲ ತೀರ್ಪುಗಳನ್ನು ಉಲ್ಲೇಖಿಸಿದ್ದಾರೆ.

ಗುತ್ತಿಗೆ ಮೀಸಲಾತಿಯು ಈವರೆಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಪ್ರವರ್ಗ 1ರವರೆಗೆ ಅನ್ವಯವಾಗುತ್ತಿತ್ತು. ಈ ಸೌಲಭ್ಯವನ್ನು ಮುಸ್ಲಿಮರಿಗೆ (ಪ್ರವರ್ಗ 2ಬಿ) ವಿಸ್ತರಿಸುವ ನಿರ್ಧಾರವನ್ನು ರಾಜ್ಯ ಸರ್ಕಾರ ಕೈಗೊಂಡಿತ್ತು.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾರ್ಚ್ 7ರಂದು ಮಂಡಿಸಿದ ಬಜೆಟ್‌ನಲ್ಲಿ ಮೀಸಲಾತಿ ನೀಡುವ ಬಗ್ಗೆ ಘೋಷಣೆ ಮಾಡಿದ್ದರು. ವಿಪಕ್ಷಗಳ ವಿರೋಧದ ಮಧ್ಯೆ ಸರ್ಕಾರ ಬಜೆಟ್ ಅಧಿವೇಶನದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಕೆಟಿಪಿಪಿ) ಕಾಯ್ದೆಗೆ ತಿದ್ದುಪಡಿ ತರುವ ಮಸೂದೆಗೆ ಒಪ್ಪಿಗೆ ನೀಡಿತ್ತು.

ಮಸೂದೆ ಕಾಯ್ದೆಯಾಗಿ ಜಾ-ರಿಯಾದರೆ 2 ಕೋಟಿ ರೂ. ವೆಚ್ಚದ ಕಾಮಗಾರಿಗಳು, 1 ಕೋಟಿ ರೂ. ವರೆಗಿನ ಸರಕು ಮತ್ತು ಸೇವೆಗಳ ಪೂರೈಕೆಯ ಟೆಂಡರ್‌ನಲ್ಲಿ ಮುಸ್ಲಿಮರಿಗೆ ಶೇ.4 ಮೀಸಲಾತಿ ಸಿಗಲಿದೆ.



ಬಸವಕಲ್ಯಾಣ :– ತಾಲೂಕಿನ ಜೋಗೆವಾಡಿ ಗ್ರಾಮದ ಶ್ರೀ ಮಹದೇವ ಜಾತ್ರಾ ಮಹೋತ್ಸವ ನಿಮಿತ್ಯ ಜರುಗಿದ ಕಾಲಾ ಕಾರ್ಯಕ್ರಮಕ್ಕೆ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ತಮ್ಮ ಅಮೃತ ಹಸ್ತದಿಂದ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಮಹೇಶ ಪಾಟೀಲ, ಗೋವಿಂದ ಗುರೂಜಿ, ಮಾಧವ ಬೋಯನೆ, ಶ್ರೀಮಂತ ಜೋಗೆ, ನಾಗನಾಥ ಪಂಡಗೆ, ಲಖನ ಜೋಗೆ ಅಪ್ಪಣ್ಣ ಜನವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಅಣ್ಣಪ್ಪ ಚಿತ್ತಂಪಲ್ಲಿ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಗೀತೆ ಹಾಡಿದರು. (ಮಲ್ಲಮ್ಮ ನುಡಿ ಚಿತ್ರ)

# ಇಂದು ಕಸಾಪ ನೂತನ ಪದಾಧಿಕಾರಿಗಳ ಪದಗ್ರಹಣ ಮತ್ತು ಪರಿಷತ್ತಿನ ಕಾರ್ಯ ಚಟುವಟಿಕೆಗಳ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಪರಿಷತ್ತಿನ ಕಾರ್ಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಇಂದು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಅನೀಲಕುಮಾರ್ ಎಂ. ಸಿಂಧೆ ತಿಳಿಸಿದ್ದಾರೆ. ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇಂದು ಬೆಳಿಗ್ಗೆ 10:30 ಗಂಟೆಗೆ ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮವನ್ನು ಪ್ರಾಚಾರ್ಯ ಡಾ. ಜಯಕುಮಾರ



ಸಿಂಧೆ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ದಿವ್ಯ ಸಾನಿಧ್ಯ ಚಿಟಗುಪ್ಪ–ಚಾಂಗಲ್ಲೇರಾ ಹಿರೇಮಠ ಸಂಸ್ಥಾನದ ಪೂಜ್ಯ ಷ. ಬ್ರ. ಶ್ರೀ ಗುರುಲಿಂಗ ಶಿವಾಚಾರ್ಯರು ಹಾಗೂ ಹುಮನಾಬಾದ ಹಿರೇಮಠ ಸಂಸ್ಥಾನದ ಷ.ಬ್ರ.ಶ್ರೀ ರೇಣುಕಾ ಗಂಗಾಧರ ಶಿವಾಚಾರ್ಯರು ವಹಿಸಲಿದ್ದಾರೆ. ಕಸಾಪ ಜಿಲ್ಲಾಧ್ಯಕ್ಷ ಸುರೇಶ್ ಚನ್ನಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ತಹಶೀಲ್ದಾರರು ಹಾಗೂ ತಾಲೂಕ ದಂಡಾಧಿಕಾರಿ ಮಂಜುನಾಥ್ ಪಂಚಾಳ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ್, ಮಾಣಿಕ ನೇಳಗಿ ಹಿರಿಯ ಸಾಹಿತಿಗಳು ತಾಳಮಡಗಿ, ಪ್ರೊ. ಶಾಂತಕುಮಾರ್ ಪಾಟೀಲ್, ಕಸಾಪ ನಿಕಟ ಪೂರ್ವ ಅಧ್ಯಕ್ಷ ರಮೇಶ ಸಲಗರ, ಮಹಾರುದ್ರಪ್ಪ ಆಣದೂರ, ರಾಜಕುಮಾರ ಬೇಲೂರೆ, ರಾಜಶೇಖರ ಉಪ್ಪಿನ, ಅಶೋಕಕುಮಾರ ಮಹೇಂದ್ರಕರ, ರಾಜಪ್ಪಾ ಜಮಾದರ್, ಪ್ರೇಮಿಳಾ ರೆಡ್ಡಿ ಹಾಗೂ ತಾಲೂಕಿನ ಕನ್ನಡ ಪರ ಸಂಘಟನೆಯ ಅಧ್ಯಕ್ಷರು, ಪದಾಧಿಕಾರಿಗಳು, ಹೋರಾಟಗಾರರು, ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು ವಿಶೇಷ ಅಹ್ವಾನಿತರಾಗಿ ಭಾಗವಹಿಸಲಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕ ಅಧ್ಯಕ್ಷ ಅನೀಲಕುಮಾರ ಎಂ. ಸಿಂಧೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಬೇಡ್ಕರರ ಸಮಾಜಮುಖಿ ಬದುಕು ಅಳವಡಿಸಿಕೊಳ್ಳಿ: ಪ್ರೊ.ಜಾಲವಾದಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಡಾ.ಬಿ.ಆರ್. ಅಂಬೇಡ್ಕರ್ ಅವರು ಬಾಲ್ಯದಲ್ಲಿಯೇ ಜಾತಿ ವ್ಯವಸ್ಥೆಯ ನೋವನ್ನು ಅನುಭವಿಸಿದರು ಪ್ರತಿ ಹೆಜ್ಜೆಗೂ ಅಪಮಾನವನ್ನು ಸಹಿಸಿದರು ಇದೆಲ್ಲವನ್ನು ಮೆಟ್ಟಿನಿಂತು ಕಡು ಬಡತನದ ಮಧ್ಯೆಯೂ ಉನ್ನತ ವ್ಯಾಸಂಗವನ್ನು ಮಾಡಿ ತಮ್ಮ ಅಗಾಧ ಪ್ರತಿಭೆಯಿಂದ ಶ್ರೇಷ್ಠ ಸಂವಿಧಾನವನ್ನು ರಚಿಸಿ ವಿಶ್ವದಲ್ಲಿಯೇ ಗುರುತಿಸಿಕೊಂಡರು. ಅವರು ಜ್ಞಾನ ಮತ್ತು ಪ್ರತಿಭೆಗೆ ಅತಿ ಹೆಚ್ಚು ಮಹತ್ವ ಕೊಟ್ಟರು ಶಿಕ್ಷಣದಿಂದಲೇ ಸಮುದಾಯದ ಸಮಗ್ರ ಪ್ರಗತಿ ಸಾಧ್ಯ ಎಂದು ಅವರು ಬಲವಾಗಿ ನಂಬಿದ್ದರು. ಅವರ ಈ ಚಿಂತನೆಯನ್ನು ದಲಿತ ಸಮುದಾಯ ಅಳವಡಿಸಿಕೊಳ್ಳುವ ಅಗತ್ಯ ಇದೆ ಎಂದು ಕೂಡಗಿ ಸರ್ಕಾರಿ ಕಾಲೇಜ ಉಪನ್ಯಾಸಕ ಬಸವರಾಜ ಜಾಲವಾದಿ ಹೇಳಿದರು. ಪಟ್ಟಣದ ಡಾ. ಅಂಬೇಡ್ಕರ್ ವೃತ್ತದಲ್ಲಿ ಸೋಮವಾರ ತಾಲೂಕಾಡಳಿತ, ತಾಪಂ, ಸಮಾಜ ಕಲ್ಯಾಣ ಇಲಾಖೆ ಹಾಗೂ ಪುರಸಭೆ ಇವರ ಸಹಯೋಗದಲ್ಲಿ ಹಮ್ಮಿಕೊಂಡ ಡಾ.ಬಿ.ಆರ್. ಅಂಬೇಡ್ಕರ್ ಅವರ 134 ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅಂಬೇಡ್ಕರವರ ಕನಸು ಎಲ್ಲರಿಗೂ ಸಮಾನ ಹಕ್ಕುಗಳು ದೊರಕುವ ಸಮಾಜ ನಿರ್ಮಾಣವಾಗಬೇಕು ಎಂಬುದಾಗಿತ್ತು. ಮಹಿಳೆಯರಿಗೆ ಸಮಾನ ಗೌರವ ಶಿಕ್ಷಣ ಹಾಗೂ ಅವಕಾಶಗಳು ಸಿಗಬೇಕು ಎಂಬ ಅವರ ದೃಷ್ಟಿಕೋನವನ್ನು ಈಗಿನ ಸರ್ಕಾರ ಹಂತ ಹಂತವಾಗಿ ಸಾಕಾರಗೊಳಿಸುತ್ತಿದೆ ಮಹಿಳೆಯರು ಈಗ ಎಲ್ಲಾ ಕ್ಷೇತ್ರಗಳಲ್ಲಿ ಯಶಸ್ವಿಯಾಗಿ ಪಾಲ್ಗೊಳ್ಳುತ್ತಿದ್ದಾರೆ ಇದು ಅಂಬೇಡ್ಕರ್ ಅವರ ಬಹುದೊಡ್ಡ ಕೊಡುಗೆ–ಯಾಗಿದೆ ಎಂದರು. ಶಿಕ್ಷಣ ಸಂಘಟನೆ ಹಾಗೂ ಹೋರಾಟ ಇವು ಅಂಬೇಡ್ಕರರ ಮೂಲ ಸಿದ್ಧಾಂತವಾಗಿದ್ದವು. ಆದರೆ ನಾವಿಂದು ಶಿಕ್ಷಣ ಸಂಘಟನೆಯನ್ನು ಬಿಟ್ಟು ಕೇವಲ ಹೋರಾಟವನ್ನು ಮಾತ್ರ ಮಾಡುತ್ತಿದ್ದೇವೆ ಇದ–ರಿಂದ ಸಾಕಷ್ಟು ಸಮಸ್ಯೆಗಳು ಸೃಷ್ಟಿಯಾಗುತ್ತಿವೆ ಎಂದ ಅವರು ಮೊದಲು ಈ ಸಮಾಜ ತಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಬೇಕಾಗಿದೆ ಇದರ ಜೊತೆಗೆ ಅವರಿಗೆ ಉತ್ತಮ ಸಂಸ್ಕಾರಗಳನ್ನು ಕೊಟ್ಟು ಸ್ವಾಭಿಮಾನದ ಬದುಕನ್ನು ತಿಳಿಸಿಕೊಟ್ಟು ಹಕ್ಕುಗಳ ಹೋರಾಟದ ಕಿಚ್ಚು ಅವರಲ್ಲಿ ಬೆಳೆಸಬೇಕು. ಸಮಾಜದ ಒಗ್ಗಟ್ಟು ಕೆಡದಂತೆ ನೋಡಿಕೊಳ್ಳಬೇಕು ಒಗ್ಗಟ್ಟಿನಲ್ಲಿ ಶಕ್ತಿ ಇದೆ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ತೊ–ರೆದು ಒಂದು ಶ್ರೇಷ್ಠ ಕಾರ್ಯ ಸಾಧನೆಗಾಗಿ ಒಂದಾಗಿ ಕೆಲಸ ಮಾಡುವ ಅಗತ್ಯ ಇದೆ ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ತಹಸಿಲ್ದಾರ್ ಡಾ.ವಿನಯಾ ಹೂಗಾರ ಮಾತನಾಡಿ ಅಂಬೇಡ್ಕರರು ಒಂದು ಜಾತಿಗೆ ಸೀಮಿತರಲ್ಲ ಅವರು ಇಡೀ ದೇಶದ ಆಸ್ತಿಯಾಗಿದ್ದಾರೆ ಅವರ ಆದರ್ಶ ಬದುಕನ್ನು ನಾವೆಲ್ಲರೂ ಅನುಸರಿಸುವ ಅಗತ್ಯ ಇದೆ ಎಂದರು. ಇದೇ ಸಂದರ್ಭದಲ್ಲಿ 2023–24ನೇ ಸಾಲಿನಲ್ಲಿ ತಾಲೂಕಿಗೆ ದ್ವಿತೀಯ ಪಿಯುಸಿ ಹಾಗೂ ಎಸ್.ಎಸ್.ಎಲ್.ಸಿ.ಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ತಾಲೂಕ ಆಡಳಿತ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ತಹಶೀಲ್ದಾರ್ ಡಾ.ವಿನಯಾ ಹೂಗಾರ ಸಂವಿಧಾನ ಪೀಠಿಕೆ ಪಠಣ ಮಾಡಿದರು. ಪುರಸಭೆ ಅಧ್ಯಕ್ಷೆ ಜಬೇದಾ ಜಮಾದಾರ, ಪುರಸಭೆ ಮುಖ್ಯಾಧಿಕಾರಿ ಮೋಹನ ಜಾಧವ, ಸಮಾಜ ಕಲ್ಯಾಣ ಇಲಾಖೆಯ ಶಿವಲಿಂಗ ಹಚಡದ, ತಾಪಂ ಸಹಾಯಕ ನಿರ್ದೇಶಕಿ ಸುಜಾತಾ ಯಡ್ರಾಮಿ, ಪಿಎಸ್ಐ ಆರ್.ಎಸ್.ಭಂಗಿ, ಸಮಾಜದ ಮುಖಂಡರಾದ ಎಸ್.ಬಿ.ಕಟ್ಟಿಮನಿ, ಮುತ್ತಪ್ಪ ಚಮಲಾಪೂರ, ಬಸವರಾಜ ಕಟ್ಟಿಮನಿ, ಜೈ ಭೀಮ ಮುತ್ತಗಿ, ನಾಗೇಶ ಕಟ್ಟಿಮನಿ, ದೇವೇಂದ್ರ ಹಾದಿಮನಿ, ರವಿ ಕಟ್ಟಿಮನಿ, ಶಾಂತಪ್ಪ ತಮದೊಡ್ಡಿ, ಮಹೇಶ್ ಚಲವಾದಿ, ಗುರುಪ್ರಸಾದ್ ಗೊಟ–ಖಿಂಡಕಿ, ಸಿ.ಆರ್.ಸಿ.ರಾಜು ವಿಜಾಪುರ, ಸಮಾಜ ಕಲ್ಯಾಣ ಇಲಾಖೆಯ ಎಸ್.ಎನ್.ಮಲ್ಲಾಡೆ, ಎನ್.ವಿ.ಕೋರಿ.ಎಸ್.ಎಂ.ಕಲಬುರ್ಗಿ, ಎನ್.ಸಿ.ಗುಡಗುಂಟಿ, ಅನ್ನಪೂರ್ಣ ಪಾಟೀಲ, ವಿಶ್ವನಾಥ್ ಮಳಗಿ, ಮಂಜುನಾಥ ನರಸಣಗಿ, ನವೀನ ಇಜೇರಿ, ರಾಮನಗೌಡ ಬಂಟನೂರ, ಶ್ರೀನಿವಾಸ ಅಂಗಡಿ, ಸಂದೀಪ ಗೌಡರ, ಹಾಗೂ ಸಮಾಜದ ಗಣ್ಯರು ಹಿರಿಯರು ಇದ್ದರು.

# ರಾಯಚೂರ ವಾರ್ತಾ ಇಲಾಖೆಯಿಂದ ಪಂಚ ಗ್ಯಾರಂಟಿ ಯಶೋಗಾಥೆ ವಿಶೇಷ ಕಿರುಹೊತ್ತಿಗೆ ಪ್ರಕಟ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 16– ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಯಶೋಗಾಥೆ ಕುರಿತು ರಾಯಚೂರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಎಡೆದೊರೆ ನಾಡಲ್ಲಿ ಪಂಚ ಗ್ಯಾರಂಟಿ ಯಶೋಗಾಥೆ ನುಡಿದಂತೆ ನಡೆದಿದ್ದೇವೆ ಕಿರು ಹೊತ್ತಿಗೆಯನ್ನು ಪ್ರಕಟಿಸಲಾಗಿದೆ.

ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ, ಶಕ್ತಿ ಹಾಗೂ ಯುವನಿಧಿ ಯೋಜನೆಗಳು ಜಾರಿಯಾದ ಹಿನ್ನೆಲೆ, ಆಯಾ ಯೋಜನೆಗಳ ಆಶಯ, ಯೋಜನೆಗಳ ಉದ್ದೇಶ ಮತ್ತು ರಾಯಚೂರ ಜಿಲ್ಲೆಯಲ್ಲಿ ಆಯಾ ಯೋಜನೆಗಳ ಪ್ರಗತಿಯ ಅಂಕಿ ಅಂಶಗಳು ಮತ್ತು ಯೋಜನೆಗಳ ಅನುಕೂಲತೆಗಳನ್ನು ಪಡೆದುಕೊಂಡ ಕೆಲವು ಫಲಾನುಭವಿಗಳ ಅನಿಸಿಕೆಗಳು ಈ ಕಿರು ಹೊತ್ತಿಗೆಯಲ್ಲಿ ಪ್ರಕಟವಾಗಿವೆ.

ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಮತ್ತು ರಾಯಚೂರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರ ಸಂದೇಶಗಳು ಈ ಕಿರು ಹೊತ್ತಿಗೆಯಲ್ಲಿ ಪ್ರಕಟವಾಗಿವೆ.

**ಸಚಿವರಿಂದ ಬಿಡುಗಡೆ:**

ಎಡೆದೊರೆ ನಾಡಲ್ಲಿ ಪಂಚ ಗ್ಯಾರಂಟಿ ಯಶೋಗಾಥೆ ನುಡಿದಂತೆ ನಡೆದಿದ್ದೇವೆ ಎಂಬ ರಾಯಚೂರ ಜಿಲ್ಲೆಯ ಕಿರುಹೊತ್ತಿಗೆಯನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಇತ್ತೀಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇ–ರಿಯ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಬಿಡುಗಡೆಗೊಳಿಸಿದರು. ಈ ವೇಳೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಆಯುಕ್ತರಾದ ಗಜಾನನ ಬಾಳೆ, ಬಸವಣೆಪ್ಪಾ ಕಲಶೆಟ್ಟಿ ಸೇರಿದಂತೆ ಇತರರು ಇದ್ದರು.

# ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿ ನಿಮಿತ್ತ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಭಾರತ ರತ್ನ, ವಿಶ್ವ ಮಾನವ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134ನೇ ಜಯಂತಿ ನಿಮಿತ್ತ ಚಿಟಗುಪ್ಪಾ ತಾಲ್ಲೂಕಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸಿಂಹ ಸೇನೆ ರಾಜ್ಯ ಕಾರ್ಯದರ್ಶಿಗಳಾದ ಮಿಥುನ್ ಹಾಗೂ ತಾಲ್ಲೂಕಾಧ್ಯಕ್ಷ ದಿಲೀಪ್ ಔರದ್‌ಕರ್ ಇವರ ನೇತೃತ್ವದಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಲಾಯಿತ್ತು. ಈ ಸಂಧರ್ಭದಲ್ಲಿ ಚಿಟಗುಪ್ಪ ತಾಲೂಕಿನ ಸಮುದಾಯ ಆರೋಗ್ಯ ಕೇಂದ್ರ ಆಡಳಿತ ವೈದ್ಯಾಧಿಕಾರಿಗಳಾದ ಡಾ. ಹಿರಸ್ಕರ್, ಮತ್ತು ಆರ್. ಕೆ. ಎಸ್.ಕೆ. ಆಪ್ತಸಮಲೋಚಕರಾದ ನಂದುಕುಮಾರ, ಪ್ರಯೋಗ ಶಾಲಾ ತಜ್ಞರಾದ ಜಿಬೆಸ್ ಹಾಗೂ ಶುಶ್ರಧಿಕಾರಿಗಳು ದೇವಿಂದ್ರ, ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ಸಿಂಹ ಸೇನೆಯ ಸದಸ್ಯರಾದ ಮಹೇಶ್ .ಟೈಸನ ಕೊಡ್ಲಿ, ಆಕಾಶ, ದಿನೇಶ, ನವೀನ, ಅಮೃತ, ಆದರ್ಶ, ಪವನ. ಸ್ಟಾನಿಲ್. ಕರುಣ ಮತ್ತು ಸೇನಯ ಸದಸ್ಯರು ಇನ್ನಿತರರು ಇದ್ದರು.

# ಪ್ರವಾಸಿ ಮಾರ್ಗದರ್ಶಿ ತರಬೇತಿ ಅವಧಿ ಏಪ್ರಿಲ್ 28ರವರೆಗೆ ವಿಸ್ತರಣೆ

ರಾಯಚೂರು ಏಪ್ರಿಲ್ 16– ಪ್ರವಾಸೋದ್ಯಮ ಇಲಾಖೆಯಿಂದ 2024–25ನೇ ಸಾಲಿನ ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾವಂತ ನಿರುದ್ಯೋಗಿ ಅಭ್ಯರ್ಥಿಗಳಿಗೆ ಪ್ರವಾಸಿ ಮಾರ್ಗದರ್ಶಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಅವಧಿಯನ್ನು ಏಪ್ರಿಲ್ 28ರವರೆಗೆ ವಿಸ್ತರಿಸಲಾಗಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಕಿತ್ತೂರು ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟದ ಭಾಗದ 08 ಜಿಲ್ಲೆಗಳಲ್ಲಿ ಪ್ರವಾಸಿ ತಾಣಗಳನ್ನು ಉತ್ತೇಜಿಸಿ ಪ್ರಚಾರ ಪಡಿಸಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಒಂದು ತಿಂಗಳ ಪ್ರವಾಸಿ ಮಾರ್ಗದರ್ಶಿ ತರಬೇತಿ ನೀಡಲು ಹಾಗೂ ಸದರಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಜಾಕೆಟ್ ಹಾಗೂ ಒಂದು ಜೊತೆ ಸ್ಪೋರ್ಟ್ಸ್ ಶೂ ಒದಗಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ, ಪರಿಶಿಷ್ಟ ಜಾತಿ–11 ಹಾಗೂ ಪಂಗಡದ–09 ಗುರಿಯನ್ನು ನಿಗಧಿಪಡಿಸಲಾಗಿದ್ದು, ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ಕನಿಷ್ಠ 21 ರಿಂದ ಗರಿಷ್ಠ 48 ವಯೋಮಿತಿಯೊಳಗಿರಬೇಕು.

ಆಸಕ್ತರು ಅರ್ಜಿಗಳನ್ನು ಕಚೇರಿಯಿಂದ ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣ–ಕ್ಕೂ ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆ, ಗಣೇಶ ಗುಡಿ ಹತ್ತಿರ, ನಿಜಲಿಂಗಪ್ಪ ಕಾಲೋನಿ, ರಾಯಚೂರು ಜಿಲ್ಲೆ–584101, ಕಚೇರಿಗೆ ಕರ್ತವ್ಯದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜೇಂದ್ರ ಜಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾಲಹಳ್ಳಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 16– ಮಹಾ ಮಾನವತಾವಾದಿ, ಮಹಾ ದಾರ್ಶನಿಕ, ಜನಪರ ಚಿಂತಕ, ಸಂವಿಧಾನಶಿಲ್ಪಿಯಾದ ಡಾ.ಬಿ.ಆರ್. ಅಂಬೇಡ್ಕರ್ ಅವರು ಜಗತ್ತು ಕಂಡ ಮಹಾನ್ ಚಿಂತಕರಾಗಿದ್ದಾರೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಪ್ರಭುಲಿಂಗ ಅವರು ಹೇಳಿದರು.

ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿಯ ದಿವಂಗತ ತಿಮ್ಮಪ್ಪ ದಿವಾನ್ ಸರ್ಕಾರಿ ಪ್ರಥಮ



ದರ್ಜೆ ಕಾಲೇಜಿನಲ್ಲಿ ಏಪ್ರಿಲ್ 14ರಂದು ನಡೆದ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ ಮತ್ತು ಸಾಧನೆ ಗಮನಿಸಿದಾಗ ಒಬ್ಬ ವ್ಯಕ್ತಿ ಎಷ್ಟೊಂದು ಸಾಧನೆ ಮಾಡಲು ಸಾಧ್ಯವಿದೆಯಲ್ಲ ಎಂಬ ಬೆರಗು ಮೂಡಿಸುತ್ತದೆ. ಸಮಾಜದಲ್ಲಿ ಬೇರೂರಿದ್ದ ಭೇದ–ಭಾವ ಹೋಗಲಾಡಿಸಲು ಶ್ರಮಿಸಿದರು. ಜಾತಿವ್ಯವಸ್ಥೆಯ ವಿರುದ್ಧ ಹೋರಾಟ ನಡೆಸಿ ಸಮಾಜ ಸುಧಾರಣಾ ಕಾರ್ಯ ಮಾಡಿದರು ಎಂದರು.

ಮಹಾರಾಷ್ಟ್ರದ ರತ್ನಗಿರಿಯಲ್ಲಿ ಜನಿಸಿದ ಮಹಾನ್ ರತ್ನ ಡಾ.ಬಿ.ಆರ್ ಅಂಬೇಡ್ಕರ್ ಅವರು ಕಷ್ಟದ ಜೀವನ ನಡೆಸಿದರು. ಶತ ಶತಮಾನಗಳಿಂದಲೂ ನೊಂದ ಶೋಷಿತ ಕುಟುಂಬ ವರ್ಗದಲ್ಲಿ ಜನಿಸಿದ ಅಂಬೇಡ್ಕರ್ ಅವರು ವಿಶ್ವಮಟ್ಟದಲ್ಲಿ ಕಂಡ ಶ್ರೇಯಸ್ಸು ಗಮನಾರ್ಹ ಎಂದರು.

ಇದೇ ಸಂದರ್ಭದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಗುರಣ್ಣ ರೆಡ್ಡಿ, ಮುತ್ತಪ್ಪ, ಮಲ್ಲಿಕಾರ್ಜುನ, ಭಗವತಿ ಹಾಗೂ ಉಪನ್ಯಾಸಕರಾದ ಡಾ. ಮಾನಪ್ಪ, ಸಂತೋಷ, ಡಾ.ಮಂಜುಳಾ ಸೇರಿದಂತೆ ಇತರರು ಇದ್ದರು.

## ಡಾ. ಅಂಬೇಡ್ಕರ್ ರ 134ನೆಯ ಜಯಂತೋತ್ಸವದ ಪ್ರಯುಕ್ತ ಅನ್ನದಾಸೋಹ ಹಾಗೂ ಮಜ್ಜಿಗೆ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಆ.16:ವಿಶ್ವಜ್ಞಾನಿ, ಜ್ಞಾನದಸಂಕೇತ,ಭಾರತರತ್ನ, ಭಾರತಭಾಗ್ಯವಿಧಾತ,ಸಂವಿದ ...ಾನಶಿಲ್ಪಿ,ಆಧುನಿಕ ಭಾರತದ ತಂದೆ,ಸಮಾನತೆಯ ಹರಿಕಾರ ಬೋಧಿಸತ್ವ ಪರಮ ಪೂಜ್ಯ ಡಾಕ್ಟರ್ ಬಾಬಾ ಸಾಹೇಬ್ ಭೀಮರಾವ ಅಂಬೇಡ್ಕರರವರ 134ನೆಯ ಜಯಂತೋತ್ಸವದ ಪ್ರಯುಕ್ತ ಮಹಾನಾಯಕ ರಕ್ಷಣಾ ವೇದಿಕೆ ಬೀದರ ಜಿಲ್ಲಾ ಘಟಕದ ವತಿಯಿಂದ ಅನ್ನದಾಸೋಹ ಹಾಗೂ ಮಜ್ಜಿಗೆ ವಿತರಣೆ ಕಾರ್ಯಕ್ರಮವನ್ನು ಮಾಡಲಾಯಿತು ಸಂದರ್ಭದಲ್ಲಿ .ಜಿಲ್ಲಾ ಅಧ್ಯಕ್ಷರಾದ ಗೋಪಾಲ್ ದೊಡ್ಡಿ.ಎನ್.ಎಸ್ ಯು.ಐ ರಾಷ್ಟ್ರೀಯ ಸಂಯೋಜಕರು ಬೀದರ್ ವಕ್ಸ ಬೋರ್ಡ್ ಚೇರ್ಮನ್ ಎಂ.ಡಿ ಫೆರೋಸ್ ಖಾನ್ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಮ್ರಾನ್ ಖಾನ್. ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷ ರಮೇಶ್ ಬಿರಾದಾರ್. ಎಸ್ ಟಿ ಸೆಲ್ ಜಿಲ್ಲಾಧ್ಯಕ್ಷ ರಾಕೇಶ್ ಕುರುಬಳಗಿ ನಾಗಪ್ಪ ಗೌಡಂಪಳಿಕರ್ ಸಲೀಂ.ಯುತ್ ಕಾಂಗ್ರೆಸ್ ಬೀದರ್ ದಕ್ಷಿಣ ಅಧ್ಯಕ್ಷ ಇಮ್ರಾನ್ ಖಾನ್ ರಾಕೇಶ್.ನಾಗೇಶ್ ರಾಯಣ್ಣ. ದಿಲೀಪ್ ರೇಖಿ ಹರ್ಷಿತ್ ದಾಂಡೇಕರ್ ಜೈ ಭೀಮ್ ಮಿಟಾರೆ ಪ್ರಲ್ಹಾದ ದೊಡ್ಡಿ ಪ್ರವೀಣ್ ದೊಡ್ಡಮನಿ ದಿಲೀಪ್ ಮೀರಾ ಗಂಜ್ಕರ್ ಶರಣು ದುಕಾನದಾರ್ ಪ್ರವೀಣ್ ಮೈಪತಿಕರ್ ಪ್ರದೀಪ್ ದೊಡ್ಡಮನಿ ಉಪಸ್ಥಿತರಿದ್ದರು.

## ನಾಳೆಯಿಂದ ಆನಂದವಾಡಿಯಲ್ಲಿ ಕಳಸಾರೋಹಣ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.16: ತಾಲೂಕಿನ ಆನಂದವಾಡಿಯಲ್ಲಿಹನುಮಾನ ದೇವರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಮಹಾದೇವ ಮಂದಿರದ ಕಳಸಾರೋಹಣ ಕಾರ್ಯಕ್ರಮ ಏ.18 ರಿಂದ 20ರ ವರೆಗೆ ನಡೆಯಲಿದೆ.

ಬೆಳಿಗ್ಗೆ 8 ಗಂಟೆಗೆ ಬೀರದೇವರ ಮಂದಿರದ ಕುಂಭಕಳಸಮೆರವಣಿಗೆ ನಡೆಯಲಿದೆ. ನಂತರ ಬೆಳಿಗ್ಗೆ 11ಕ್ಕೆ ಡೋಣಗಾಪೂರ ಬಸಯ್ಯ ಸ್ವಾಮಿ ನೇತೃತ್ವದಲ್ಲಿ ರುದ್ರಾಭಿಷೇಕ ಪೂಜೆ ನೆರವೇರಲಿದೆ.

ಮಧ್ಯಾಹ್ನ 2ಗಂಟೆಗೆ ಹನುಮಾನ ಮಂದಿರ ಉದ್ಘಾಟನೆ ಕಾರ್ಯಕ್ರಮ ನಡೆಯಲಿದ್ದು, ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.

ಹಲಬರ್ಗಾ ಶರಣಗಿರಿ ಮಠದ ಮಹಿಳಾ ಜಗದ್ಗುರು ಬಸವಾಂಜಲಿ ತಾಯಿ ನೇತೃತ್ವ ವಹಿಸಲಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.ಹನುಮಾನ ಮಂದಿರದ ಅಧ್ಯಕ್ಷ ಬಾಬುರಾವ ಭೂರೆ ಅಧ್ಯಕ್ಷತೆ ವಹಿಸಲಿದ್ದಾರೆ.

ವಿಧಾನ ಪರಿಷತ್ ಸದಸ್ಯ ಮಾರುತಿರಾವ ಮುಳೆ, ಗ್ರಾಪಂ ಸದಸ್ಯರಾದ ಜಗದೇವಿ, ಶರಣಪ್ಪ ಕಂಟೆಪ್ಪ ಭಾಗವಹಿಸಲಿದ್ದಾರೆ. ಹಿರಿಯ ಸಾಹಿತಿ ಗಣಪತಿ ಭೂರೆ ಪ್ರಾಸ್ತಾವಿಕವಾಗಿ ಮಾತನಾಡಲಿದ್ದಾರೆ. ಇದೇವೇಳೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಸನ್ಮಾನಿಸಲಾಗುತ್ತಿದೆ.

ಸಾಯಂಕಾಲ 7 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಭಾತಂಬ್ರಾ ಗ್ರಾಮದ ಜಗದ್ಗುರು ನಿರಂಜನ ಸಂಸ್ಥಾನ ಮಠದ ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ,ಬಸವಾಂಜಲಿ ತಾಯಿ, ಸಿದ್ರಾಮೇಶ್ವರ ಪಟ್ಟದ್ದೇವರು ಭಾಗವಹಿಸಲಿದ್ದಾರೆ.

ರಾತ್ರಿ 8 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

19ರಂದು ಬೆಳಿಗ್ಗೆ 8ಗಂಟೆಗೆ ಬಸಯ್ಯ ಸ್ವಾಮಿ ನೇತೃತ್ವದಲ್ಲಿ ರುದ್ರಾಭಿಷೇಕ ಪೂಜೆ ನಡೆಯಲಿದೆ.

ಸಂಜೆ 7 ಗಂಟೆಗೆ ಪ್ರವಚನ ಕಾರ್ಯಕ್ರಮ ನಡೆಯಲಿದ್ದು ಹಿರೇಮಠ ಸಂಸ್ಥಾನ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಮಾತೆ ಬಸವಾಂಜಲಿ ತಾಯಿ ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಹಲವರನ್ನು ಸನ್ಮಾನಿಸಲಾಗುತ್ತಿದೆ.

ರಾತ್ರಿ 8ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ. 20 ರಂದು ಬೆಳಿಗ್ಗೆ 8 ಗಂಟೆಗೆ ರುದ್ರಾಭಿಷೇಕ, ಬೆಳಿಗ್ಗೆ 10.30 ಗಂಟೆಗೆ ಹನುಮಾನ ಮಂದಿರದ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಮಹಾದೇವ ಮಂದಿರದ ಕಳಸಾರೋಹಣ ನಡೆಯಲಿದೆ. ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ, ಬಸವಾಂಜಲಿ ತಾಯಿ, ಸಿದ್ರಾಮೇಶ್ವರ ಪಟ್ಟದ್ದೇವರು, ಮಾಜಿ ಶಾಸಕ ಪ್ರಕಾಶ ಖಂಡ್ರೆ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ರಾತ್ರಿ 8ಗಂಟೆಗೆ ಡಾ.ಬಸವಲಿಂಗ ಅವಧೂತರು ಪ್ರವಚನ ನೀಡಲಿದ್ದಾರೆ. ರಾತ್ರಿ 10 ಗಂ–ಟೆಗೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ.

ಸನ್ಮುಖಪ್ಪ ಭೂರೆ, ಶಿವರಾಜ ಭೂರೆ, ಶಿವಕುಮಾರ ಭೂರೆ, ಚಾಮುಂಡೇಶ್ವರಿ ಶಿವಕಾಂತ ಮದಕಟ್ಟಿ ಪ್ರಸಾದ ದಾಸೋಹ ವಹಿಸಿ ಕೊಂಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ದೋಷರಹಿತ ಮೌಲ್ಯಮಾಪನಕ್ಕೆ ಆದ್ಯತೆ ಇರಲಿ : ಮನೋಹರ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಏ.16:ದೋಷರಹಿತ ಮೌಲ್ಯಮಾಪನಕ್ಕೆ ನಮ್ಮೆಲ್ಲರ ಆದ್ಯತೆ ಇರಲಿ ಎಂದು ಮುಖ್ಯ ಮೌಲ್ಯಮಾಪಕ ಮನೋಹರ ಬಿರಾದಾರ ಹೇಳಿದರು.

ಬೀದರಿನ ಕರ್ನಾಟಕ ಕಾಲೇಜಿನಲ್ಲಿ ನಡೆಯುತ್ತಿರುವ ಎಸ್ಎಸ್ಎಲ್‌ಸಿ ಮೌಲ್ಯಮಾಪನ ಪರೀಕ್ಷಾ ಕೇಂದ್ರದ ಗಣಿತ ಮೌಲ್ಯಮಾಪನ ಕಾರ್ಯದ ಮೌಲ್ಯಮಾಪಕರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಸಹಾಯಕ ಮೌಲ್ಯಮಾಪಕರು ವಿದ್ಯಾರ್ಥಿಗಳ ಬರಹಕ್ಕೆ ಸರಿಯಾಗಿ ನ್ಯಾಯ ಒದಗಿಸಬೇಕು. ಯಾವುದೇ ರೀತಿಯ ತಪ್ಪುಗಳನ್ನು ಮಾಡದೇ ಸರಿಯಾದ ಉತ್ತರಕ್ಕೆ ಸರಿಯಾದ ಅಂಕ ನೀಡಬೇಕು. ಉಪ ಮುಖ್ಯ ಮೌಲ್ಯಮಾಪಕರು ಸಹಾಯಕ ಮೌಲ್ಯಮಾಪಕರ ಎಲ್ಲಾ ಪತ್ರಿಕೆಗಳನ್ನು ಸರಿಯಾಗಿ ವೀಕ್ಷಿಸಿ, ಅವುಗಳಲ್ಲಿರುವ ತಪ್ಪುಗಳನ್ನು ಕಂಡು ಹಿಡಿದು, ತಿದ್ದಬೇಕು ಎಂದು ಸಲಹೆ ನೀಡಿದರು. ಪರೀಕ್ಷಾ ಕೇಂದ್ರಕ್ಕೆ ಸರಿಯಾದ ಸಮಯಕ್ಕೆ ಹಾಜರಾಗಬೇಕು. ತಡವಾಗಿ ಹಾಜರಾಗಿ, ಅವಸರದ ಮೌಲ್ಯಮಾಪನ ಸರಿಯಾದ ಕ್ರಮವಲ್ಲ. ದೋಷಮುಕ್ತ ಮೌಲ್ಯಮಾಪನದಿಂದ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಿಕೊಡುವ ಕಾರ್ಯವಾಗಬೇಕು ಎಂದು ಹೇಳಿದರು. ಪತ್ರಿಕೆ ಪಾಲಕ ಕುಶಾಲರಾವ ಯರನಾಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರದೀಪಕುಮಾರ ಘಂಟೆ, ಕಿರಣಕುಮಾರ ಭಾಟಸಿಂಗೆ, ಗಂಗಾಧರ, ಸೋಮಲಿಂಗ ವಡ್ಡೆ, ಬಸವರಾಜ ಮಂಗಳೂರೆ, ಸಂಜೀವಕುಮಾರ ಹೆಡಗಾಪೂರೆ, ಸತೀಶ ಸಿದ್ದೇಶ್ವರೆ, ಶಿವಕುಮಾರ ಮಾಶೆಟ್ಟಿ, ಸುರೇಶ ಪ್ರಭಾ, ಸುರೇಶ ಮೊಸಾಳೆ ಉಪಸ್ಥಿತರಿದ್ದರು.

## ಗೃಹ ಬಂಧನದಲ್ಲಿರಿಸಿದ ಕೆಂಪೆನೋರ್‌ರನ್ನು ಕೂಡಲೇ ಬಿಡುಗಡೆ ಮಾಡಿ: ಡಾ.ಜೇಮ್ಸ್



ಮಲ್ಲಮ್ಮ ನುಡಿ ವಾರ್ತೆ

ಬೀದರ.ಆ.16:ಸ್ವಾಮಿದಾಸ ಕೆಂಪೆನೋರ್ ಯಾವ ದೇಶದ್ರೋಹದ ಕೆಲಸ ಮಾಡಿಲ್ಲ. ಈ ದೇಶದ ಬೆನ್ನೆಲುಬು ಎಂದರೆ ರೈತರು ಹಾಗೂ ಕಾರ್ಮಿಕರು. ಅವರ ಪರವಾಗಿ ಮಾತಾಡಿದ್ರೆ ಹೋರಾಟಗಾರರು ಹಾಗೂ ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆ ಸಂಸ್ಥಾಪಕ ಅಧ್ಯಕ್ಷ ಸ್ವಾಮಿದಾಸ ಕೆಂಪೆನೋರ್ ಅವರನ್ನು ಪೋಲಿಸರು ಗೃಹ ಬಂಧನದಲ್ಲಿರಿಸಿದ್ದು ಸಂವಿಧಾನದ ಆಶೆಯಗಳಿಗೆ ವಿರೂದ್ಧವಾದ ಧೋರಣೆ ಇದಾಗಿದೆ. ಈ ಕೂಡಲೇ ಅವರನ್ನು ಎಲ್ಲಿ ಇರಿಸಿದ್ದರು ತಕ್ಷಣ ಬಿಡುಗಡೆ ಮಾಡಬೇಕು. ಇಲ್ಲದಿದ್ದರೆ ಬೀದಿಗಿಳಿದು ಉಗ್ರ ಹೋರಾಟ ನಡೆಸಲಾಗುವುದೆಂದು ಸೇನೆ ಜಿಲ್ಲಾಧ್ಯಕ್ಷ ಡಾ.ಜೇಮ್ಸ್ ಇಸ್ಲಾಂಪುರ ಹೇಳಿದ್ದಾರೆ. ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 2024ರ ನವೆಂಬರ್ 1ರಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಕಾರಂಜಾ ಮುಳುಗಡೆ ಸಂತ್ರಸ್ತರ ಹೋರಾಟ ಸಮಿತಿಯನ್ನು ಬೆಂಬಲಿಸಿ ಹಾಗೂ ಬೀದರ ಸಹಕಾರ ಸಕ್ಕರೆ ಕಾರ್ಖಾನೆಯ ಕಾರ್ಮಿಕರಿಗೆ ಯಾವುದೇ ವೇತನವಿಲ್ಲದೇ ಬೀದಿ ಪಾಲಾಗಿರುವ ವಿಷಯ ಸಚಿವರ ಗಮನಕ್ಕೆ ತಂದಿರುವ ನಮ್ಮ ಸೇನೆ ಸಂಸ್ಥಾಪಕ ಅಧ್ಯಕ್ಷರಿಗೆ ಅಂದು ಸಹ ಅವರ ಮೇಲೆ ಸುಳ್ಳು ಕೇಸ್ ದಾಖಲಿಸಿ ಅರೆಷ್ಟ್ ಮಾಡಿದ್ದರು. ಜಿಲ್ಲಾ ಉಸ್ತುವಾರಿ ಸಚಿವರು ಅಂದು ಸಂಘಟನೆಗಳು ಭಯೋತ್ಪಾದಕರು ಎಂಬ ರೀತಿಯಲ್ಲಿ ಮಾತನಾಡಿದ್ದರು. ಸಚಿವರು ಮಾತನಾಡಿರುವುದು ತಪ್ಪು ಎಂದು ಹೇಳುವ ಅಧಿಕಾರ ನಮಗಿಲ್ಲದಾಯಿತೆ ಈ ಜಿಲ್ಲೆಯಲ್ಲಿ? ಎಂದು ಪ್ರಶ್ನೆ ಮಾಡಿರುವ ಅವರು, ಇಲ್ಲಿ ಹುಕುಮಶಾಹಿ ಆಡಳಿತ ನಡೆಯುತ್ತಿದೆ, ಜಿಲ್ಲಾಡಳಿತ, ಜಿಲ್ಲಾ ಪೋಲಿಸ್ ಇಲಾಖೆ ಸಚಿವರ ಕೈಗೊಂಬೆಗಳಂತೆ ವರ್ತಿಸುತ್ತಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ ಎಂದು ದೂರಿದರು. ಸ್ವಾಮಿದಾಸ ಕೆಂಪೆನೋರ್ ಒಬ್ಬ ಸ್ವಾಭಿಮಾನಿ ಹೋರಾಟಗಾರ. ನಮ್ಮ ಸಂವಿಧಾನಿಕ ಹಕ್ಕನ್ನು ಕಬಳಿಸಲು ಹೊರಟಿರುವುದು ನಿಜಕ್ಕೂ ಖಂಡನಾರ್ಹ. ಕಾರಂಜಾ ಸಂತ್ರಸ್ತರ ಸಮಸ್ಯೆ ಹಾಗೂ ಬಿ.ಎಸ್.ಎಸ್.ಕೆ ಕಾರ್ಮಿಕರ ವೇತನದ ಬಗ್ಗೆ ಸರ್ಕಾರ ಇಲ್ಲಿ ವರೆಗೆ ಯಾವುದೇ ಸಮಸ್ಯೆ ಬಗೆಹರಿಸಿಲ್ಲ. ಈ ವಿಚಾರವಾಗಿ ಇಂದು ಸಿಎಂ ಜಿಲ್ಲೆಗೆ ಆಗಮಿಸುತ್ತಿದ್ದು, ಕಪ್ಪು ಪಟ್ಟಿ ಧರಿಸಿ ಅವರಿಗೆ ಮನವಿ ಸಲ್ಲಿಸಲು ನಿರ್ಧರಿಸಲಾಗಿದೆ. ಇಡೀ ಜಿಲ್ಲೆಯಿಂದ ನಮ್ಮ ಸೇನೆ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವರು. ಇದೇ ವಿಚಾರವನ್ನು ಪೋಲಿಸ್ ಗುಪ್ತಚರ ಇಲಾಖೆಗೆ ತಿಳಿಸಿದ್ದ ಕೆಂಪೆನೋರ್ ಅವರನ್ನು ಇಂದು ಬೆಳಿಗ್ಗೆ 5 ಗಂಟೆಗೆ ಮನೆಯಿಂದಲೇ ಎತ್ತೊಯ್ದು ಗೃಹ ಬಂಧನದಲ್ಲಿರಿಸಿರುವ ಪೋಲಿಸರ ಕ್ರಮವನ್ನು ಉಗ್ರವಾಗಿ ಖಂಡಿಸಲಾಗುವುದೆಂದು ಎಚ್ಚರಿಸಿದರು. ಸೇನೆಯ ಸಂಸ್ಥಾಪಕ ಉಪಾಧ್ಯಕ್ಷ ಮಸ್ತಾನ್ ಮುಲ್ಲಾ ಮಾತನಾಡಿದರು.

ದಲಿತ ರಕ್ಷಣಾ ಹೋರಾಟ ಸಮಿತಿ ಜಿಲ್ಲಾ ಉಪಾಧ್ಯಕ್ಷ ಸಂತೋಷ ಹಳ್ಳಿಖೇಡ್, ಹುಮನಾಬಾದ್ ತಾಲೂಕಾಧ್ಯಕ್ಷ ರಾಜು ಮುಗನೂರ್, ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆ ಜಿಲ್ಲಾ ಉಪಧ್ಯಕ್ಷರಾದ ಅಂಬಾದಾಸ ಬೇಲುರೆ, ಸ್ವಾಮಿದಾಸ ಚಿಲ್ಲರ್ಗಿ, ಸಂಯೋಜಕರಾದ ಶಿವರಾಜ ನೆಲವಾಳಕರ್, ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ಕಮಲ ಹಸನ್ ಬಾವಿದೊಡ್ಡಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶ್ರೀನಾಥ ದರ್ಗಾ, ವೆಂಕಟೇಶ ಚಿದ್ರಿ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಸಂವಿಧಾನ ರಕ್ಷಣೆ ನಮ್ಮೆಲ್ಲರ ಹೊಣೆ:ಸಚಿವ ಈಶ್ವರ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.16:ಸಂವಿಧಾನವನ್ನು ನಾವು ರಕ್ಷಿಸಿದರೆ, ನಮ್ಮನ್ನು ಸಂವಿಧಾನ ರಕ್ಷಿಸುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಮಂಗಳವಾರ ಆಯೋಜಿಸಿದ್ದ ಸಂವಿಧಾನ ಸಂರಕ್ಷಣಾ ಪಡೆ ಸ್ವಾಗತ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರಜಾತಂತ್ರವ್ಯವಸ್ಥೆ,ಅಂಬೇಡ್ಕರ್ ಪರಿಕಲ್ಪನೆ, ಸಂವಿಧಾನಕ್ಕೆ ಅಪಾಯ ಎದುರಾದಾಗ ಅದನ್ನು ರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಸಂವಿಧಾನ ಸಂರಕ್ಷಣಾ ಪಡೆ ರಾಜ್ಯದಲ್ಲಿ ಸಂವಿಧಾನ ರಕ್ಷಣೆ ಬಗ್ಗೆ ಜಾಗೃತಿ ಮೂಡಿಸುತ್ತಿರುವುದು ಉತ್ತಮ ಕಾರ್ಯ ಎಂದು ತಿಳಿಸಿದರು.

ಮಾಜಿ ಶಾಸಕ ಪ್ರಕಾಶ ಖಂಡ್ರೆ ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಸರ್ವರಿಗೂ ಸಮಾನತೆ ಕಲ್ಪಿಸಿದ್ದಾರೆ. ಅಂತಹ ಸಂವಿಧಾನ ದುರುಪಯೋಗ ಆಗುತ್ತಿರುವುದು ಕಳವಳಕಾರಿ ಸಂಗತಿ. ಎಲ್ಲರೂ ಸೇರಿ ಸಂವಿಧಾನ ಆಶಯಗಳನ್ನು ಪಾಲಿಸಬೇಕು ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಭಾರತ ಸಂವಿಧಾನ ವಿಶ್ವಕ್ಕೆ ಮಾದರಿಯಾಗಿದೆ. ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ಸಂವಿಧಾನಕ್ಕೆ ಅಪಾಯ ಆಗದಂತೆ ನೋಡಿಕೊಳ್ಳುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ತಿಳಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ,

ವಿಶ್ವಕ್ರಾಂತಿ ದಿವ್ಯಪೀಠದ ಅಧ್ಯಕ್ಷ ಓಂಪ್ರಕಾಶ ರೊಟ್ಟೆ, ಸಂವಿಧಾನ ಸಂರಕ್ಷಣಾ ಪಡೆ–ಯ ದುರ್ಗೇಶ, ಹೇಮಂತ, ಸರೋವರ ಬೆಂಕಿಕೇರೆ, ಶರಣು, ಗೀತಾ ಸೇರಿದಂತೆ ಹಲವರು ಇದ್ದರು.

ಭಾರತದ ಸಂವಿಧಾನ ಸರ್ವರಿಗೂ ಸಮಾನತೆ ಕಲ್ಪಿಸಿದೆ. ಹಾಗಾಗಿ ದೇಶದ ಪ್ರತಿಯೊಬ್ಬ ಪ್ರಜೆ ಸಂವಿಧಾನವನ್ನು ಗೌರವಿಸಿ ಅದರ ಆಶಯದಂತೆ ನಡೆದುಕೊಳ್ಳಬೇಕು.

**– ಪ್ರಕಾಶ ಖಂಡ್ರೆ ಮಾಜಿ ಶಾಸಕರು ಭಾಲ್ಕಿ**

ದಾವಣಗೆರೆಯಲ್ಲಿ ಏ.26 ರಂದು ಸಂರಕ್ಷಕರ ಸಮಾವೇಶ ನಡೆಯಲಿದ್ದು, ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸಿ ಈ ಸಮಾವೇಶಗೊಳಿಸಬೇಕು.

**–ಓಂಪ್ರಕಾಶ ರೊಟ್ಟೆ ಅಧ್ಯಕ್ಷರು ವಿಶ್ವಕ್ರಾಂತಿ ದಿವ್ಯಪೀಠ ಬೀದರ್**

## ಹೊಸಳ್ಳಿ: ವಿದ್ಯುತ ತಗುಲಿ ಮೃತಪಟ್ಟ ಮಕ್ಕಳ ಮನೆಗೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಏ.16: ಕೊಪ್ಪಳ ತಾಲೂಕಿನ ಹೊಸಳ್ಳಿ ಗ್ರಾಮದಲ್ಲಿನ ಇಬ್ಬರು ಮಕ್ಕಳು ಕಾಲುವೆಯಲ್ಲಿ ಈಜಾಡಲು ತೆರಳಿ ವಿದ್ಯುತ ತಗುಲಿ ಮೃತರಾದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ಜಿ ರಾಮತ್ನಾಳ ಮೃತ ಬಾಲಕರ ಮನೆಗೆ ಬೇಟಿ ನೀಡಿ ನೊಂದ ಪಾಲಕರಿಗೆ ಸಾಂತ್ವನ ಹೇಳಿದರು. ಹೊಸಳ್ಳಿ ಗ್ರಾಮದ ಮಕ್ಕಳು ಮೃತಪಟ್ಟ ಘಟನೆಯು ಏಪ್ರಿಲ್ 8 ರಂದು ವರದಿಯಾದ ಹಿನ್ನಲೆಯಲ್ಲಿ, ಏ.15 ರಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ಜಿ ರಾಮತ್ನಾಳ ಬಾಲಕರ ಮನೆಗೆ ಹಾಗೂ ಮಕ್ಕಳು ಮೃತಪಟ್ಟ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಕ್ಕಳ ರಕ್ಷಣೆಯ ಕುರಿತು ಚರ್ಚಿಸಿದರು. ಸಭೆಯಲ್ಲಿ ಮಾತನಾಡಿದ ಅವರು ಮಕ್ಕಳ ಜೀವವು ಅತ್ಯಮೂಲ್ಯವಾದದ್ದು, ಮಕ್ಕಳು ತಮ್ಮ ಬೇಸಿಗೆಯ ರಜೆಯನ್ನು ಅನುಭವಿಸುವುದರೊಂದಿಗೆ ಸುರಕ್ಷಿತವಾಗಿರುವುದು ಅತ್ಯವಶ್ಯಕವಾಗಿದೆ. ಬೇಸಿಗೆ ರಜೆ ಅವಧಿಗಳು ಈಗಾಗಲೇ ಆರಂಭಗೊಂಡಿವೆ, ಮಕ್ಕಳು ರಜೆಯ ದಿನಗಳಲ್ಲಿ ಕ್ರೀಡಾ ಚಟುವಟಿಕೆಗಳಲ್ಲಿ ಮತ್ತು ಈಜು ಕಲಿಯಲು ಅಥವಾ ಈಜಾಡಲು ಹೋಗುವ ಸಂದರ್ಭಗಳು ಅಧಿಕವಾಗಿದ್ದು, ವಿದ್ಯುತ ಅಪಘಾತದಿಂದ ಹಾಗೂ ನೀರಿನಲ್ಲಿ ಉಸಿರುಗಟ್ಟಿ ಜೀವವನ್ನು ಕಳೆದುಕೊಳ್ಳುವ ಪ್ರಸಂಗಗಳು ಜರುಗುತ್ತಿವೆ, ಈ ರೀತಿಯ ಘಟನೆಗಳು ಮರುಕಳಿಸದಂತೆ ಮಕ್ಕಳಸ್ನೇಹಿ ವಾತಾವರಣವನ್ನು ನಿರ್ಮಾಣ ಮಾಡಬೇಕಾಗಿದ್ದು. ಆದ್ದ–ರಿಂದ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ನದಿ, ಕಾಲುವೆ, ಹಳ್ಳ ಮತ್ತು ಬಾವಿಗಳ ಹತ್ತಿರ "ನೀರು ಆಳವಿದೆ, ಎಚ್ಚರಿಕೆ" ಎಂಬ ಫಲಕಗಳನ್ನು ಅಳವಡಿಸುವುದು ಹಾಗೂ ಸ್ಥಳೀಯ ಜೀವರಕ್ಷಕ ಸಾಧನಗಳಾದ ನೀರಿನ ಟ್ಯೂಬ್, ಹಗ್ಗವನ್ನು ತೇಲಿಬಿಡುವುದು ಅಥವಾ ಅಳವಡಿಸುವ ಮೂಲಕ ಮಕ್ಕಳ ಹಾಗೂ ಮಾನವ ಜೀವಗಳನ್ನು ರಕ್ಷಿಸಬಹುದಾಗಿದ್ದು ಈ ಕುರಿತು ಕ್ರಮವಹಿಸುವಂತೆ ಹಾಗೂ "ಮಕ್ಕಳ ರಕ್ಷಣೆ ನಮ್ಮೆಲ್ಲರ ಮತ್ತು ಸಮುದಾಯದ ಹೊಣೆಯಾಗಿದ್ದು, ಎಲ್ಲರೂ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು ಈ ಸಂದರ್ಭದಲ್ಲಿ ಕೊಪ್ಪಳ ತಹಶೀಲ್ದಾರ್ ವಿಠ್ಠಲ ಚೌಗಲಾ, ಕೊಪ್ಪಳ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ,

ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ಹೊಸಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಸುರೇಶ ಛಲವಾದಿ, ಕೊಪ್ಪಳ ಪ್ರಭಾರಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶರಣಪ್ಪ, ಮುನಿರಾಬಾದ್

ಆರಕ್ಷಕ ಉಪ–ನಿರೀಕ್ಷಕ ಸುನೀಲ ಎಚ್., ಕೊಪ್ಪಳ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಸಂತೋಷ ಕುಮಾರ, ಹೊಸಳ್ಳಿ ಪಂಚಾಯತ ಅಭಿವೃದ್ಧಿ ಅಧಿಕಾರಿ ವಿರೇಶ ಜಿ. ಸೇರಿದಂತೆ

ಕರ್ನಾಟಕ ನೀರಾವರಿ ನಿಗಮ ನಿಯಮಿತ ಮುನಿರಾಬಾದ್ ಉಪವಿಭಾಗದ ಅಧಿಕಾರಿಗಳು ಹಾಗೂ ಮತ್ತಿತರರಿದ್ದರು.

## ಹಂಪಿ ಉತ್ಸವದಲ್ಲಿ ಕರಾಟೆ ಪ್ರದರ್ಶಿಸಿದ ಅಗಸ್ತ್ಯನಿಗೆ 15 ಸಾ. ರೂ. ಗೌರವ ಧನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಏ.16: ಜಿಲ್ಲೆಯ ಗೌರಿ ಅಂಗಳದ ಬಾಲಕ ಅಗಸ್ತ್ಯನಿಗೆ ಹಂಪೆ ಉಸ್ತವದಲ್ಲಿ ಭಾಗವಹಿಸಿದ್ದಕ್ಕೆ ವಿಜಯನಗರ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬುಧವಾರ 15 ಸಾವಿರ ರೂ. ಚೆಕ್ ವಿತರಿಸಲಾಯಿತು.

ಹಂಪೆ ಉತ್ಸವದಲ್ಲಿ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ ಉತ್ತಮ ಪ್ರದರ್ಶನ ನೀಡಿ ಸೈ ಎನ್ನಿಸಿಕೊಂಡಿರುವ ಅಗಸ್ತ್ಯ ಅರಕೇರಿಗೆ ಭಾಗ್ಯನಗರ ಪಪ ಉಪಾಧ್ಯಕ್ಷರಾದ ಹೊನ್ನೂರ ಸಾಬ ಬಯಾಪುರ,ಕಲಂ ಪಬ್ಲಿಕ್ ಸ್ಕೂಲ್ ಅಧ್ಯಕ್ಷರಾದ ಮೋಹಮ್ಮದ ಅಲಿಮುದ್ದಿನ ಹಾಗೂ ಪ್ರಾಚಾರ್ಯರಾದ ರೂಹಿ ಅವರು ಅಭಿನಂದಿಸಿದರು.

# ಇಂದು ವಕ್ಫ ತಿದ್ದುಪಡಿ ಮಸೂದೆ ವಿರುದ್ಧ ಧರಣಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ವಕ್ಫ್ ತಿದ್ದುಪಡಿ ಮಸೂದೆ ಮುಸ್ಲಿಂ ಸಮುದಾಯದ ವಕ್ಫ್ ಆಸ್ತಿಯನ್ನು ಕಬಳಿಸಲು ಕೇಂದ್ರ ಸರಕಾರ ಮಾಡಿದ ಇದೊಂದು ಕುತಂತ್ರವಾಗಿದೆ ಎಂದು ಜಂಟಿ ಕ್ರಿಯಾ ಸಮಿತಿ ವಹೀದಮೀಯಾ ಅವರು ಕಿಡಿ-ಕಾರಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ನಡೆದ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು ಮುಸ್ಲಿಂ ಸಮುದಾಯದ ಧಾರ್ಮಿಕ ಆಚರಣೆಗಳು ಹಾಗೂ ಅವರ ವೈಯಕ್ತಿಕ ಕಾನೂನುಗಳಿಗೆ ಧಕ್ಕೆ ಉಂಟು ಮಾಡುವುದಾಗಿದೆ. ಕೇಂದ್ರ ಸರ್ಕಾರವು ಈ ಹಕ್ಕನ್ನು ಹತ್ತಿಕ್ಕಲು ಸಮುದಾಯವನ್ನು ಇಕ್ಕಟ್ಟಿಗೆ ಸಿಲುಕಿಸಿ ವಕ್ಫ್ ಆಸ್ತಿಯನ್ನು ಲಪಟಾಯಿಸುವಂತಾಗಿದೆ ಎಂದು ಹೇಳಿದರು

ಈ ವಕ್ಫ್ ಆಸ್ತಿಯ ಸಾವಿರಾರು ವರ್ಷಗಳ ಧಾರ್ಮಿಕ ಇತಿಹಾಸವನ್ನು ಹೊಂದಿದೆ. ವಕ್ಫ್ ಆಸ್ತಿ ಮುಸ್ಲಿಂ ಸಮುದಾಯದ ವ್ಯಕ್ತಿಗಳು / ಸಮಾಜ ಧತ್ತಿ ಮಾದರಿಯಲ್ಲಿ ಆಸ್ತಿಯನ್ನು ದಾನದ ರೂಪದಲ್ಲಿ ಹರಿದು ಬಂದ ಆಸ್ತಿಯಾಗಿದೆ. ಯಾವುದೇ ಸರ್ಕಾರದ ಅಥವಾ ಇತರ ಸಮುದಾಯದ ಆಸ್ತಿಯಲ್ಲಾ, ಇದನ್ನು ಮುಸ್ಲಿಂ ಸಮುದಾಯ ಮಸೀದಿಗಳು, ಖಬರಸ್ತಾನ, ದರ್ಗಾ, ಅಶೂರಖಾನಾ ಶಾಲೆಗಳು ಇದಕ್ಕಾಗಿ ಬಳಸಲಾಗುತ್ತದೆ. ಈ ಆಸ್ತಿಯಿಂದ ಬಂದ ಹಣವನ್ನು ಸಮುದಾಯದ ಬಡಜನ ಉದ್ಧಾರ ಹಾಗೂ ಇತರ ಸಮಾಜದ ಒಳಿತಿಗಾಗಿ ಬಳಸಲಾಗುತ್ತದೆ. ಇದು ವಕ್ಫ್ ಆಸ್ತಿಯನ್ನು ಮಾರುವಂತಿಲ್ಲ. ಹಾಗೂ ದಾನದ ರೂಪದಲ್ಲಿ ಇತರರಿಗೆ ದಾನವನ್ನು ಸಹ ಮಾಡುವಂತಿಲ್ಲ. ಮುಸ್ಲಿಂ ಸಮುದಾಯದ ಧಾರ್ಮಿಕ ಚಟುವಟಿಕೆಗಳಿಗೆ ಸಹ ಉತ್ತಮ ರೀತಿಯಲ್ಲಿ ಬಳಕೆಯಾಗುತ್ತಿರುವುದು ಎಲ್ಲರಿಗೆ ಗೊತ್ತಿರುವ ಸಂಗತಿಯಾಗಿದೆ.

ಹೊಸ ತಿದ್ದುಪಡಿ ಮಸೂದೆಯಿಂದ ಸರಕಾರವು ಎಲ್ಲಾ ಹಂತದ ಜವಾಬ್ದಾರಿಗಳು ಹಾಗೂ ಅಧಿಕಾರವನ್ನು ವಕ್ಫ್ ಮಂಡಳಿಯಿಂದ ಕಿತ್ತುಕೊಂಡು ತಾವು ಅಧಿಕಾರದಲ್ಲಿ ಹಸ್ತಕ್ಷೇಪವನ್ನು ಮಾಡಿ ನಿರಂಕುಶ ಆಡಳಿತ ನಡೆಸುವ ಹುನ್ನಾರವಾಗಿದೆ. ಇದು ಸಂವಿಧಾನದ ವಿರುದ್ಧವಾದ ಮಸೂದೆಯಾಗಿದೆ. ಸಂವಿಧಾನದ 14ನೇ ವಿಧಿ, 25, 26 ವಿಧಿ ಸಂಪೂರ್ಣವಾದ ದುರುಪಯೋಗವಾಗಿದೆ. ಮತ್ತು ಸಂವಿಧಾನಕ್ಕೆ ಮಾರಕವಾಗಿದೆ. ಮತ್ತು ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ ಎಂದರು.

ಈ ಮಸೂದೆಯನ್ನು ತಕ್ಷಣವೇ ಹಿಂಪಡೆಯಬೇಕು ಎಂದು ಒತ್ತಾಯಿಸಿ ಸಾಂಕೇತ ಒಂದು ದಿನದ ಧರಣಿ ಸತ್ಯಾಗ್ರಹವನ್ನು ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ನಾಳೆ ಏಪ್ರಿಲ್ 17 ರಂದು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ನಂತರ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಯವರಿಗೆ ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷರಾದ ಜಿಲಾನಿಸಾಬ್ ಅಫಘಾನ, ಅಲಹಜ್ ಗುಲಾಮ ಮಹಿಬೂಬಸಾಬ, ಎಸ್. ಮುಫ್ತಿ ಮುನೀರ ಅಹಮದಸಾಬ, ಸ್ವಾಲೆ ಅಲ್ ಹಾಜರಿ, ಮನಸೂರ ಅಫಘಾನ, ಇರ್ಫಾನ ಬಾದಲ್, ಡಾ॥ ರಫೀಕ್ ಸೌದಾಗರ, ಜಿ.ಹಫೀಜ್ ಪಟೇಲ್, ಅಬ್ದುಲ್ ರಜಾಕ್

ಸದ್ದಾಂ ಹುಸೇನ್, ಸೇರಿದಂತೆ ಅನೇಕರು ಇದ್ದರು

# ಸರಕಾರಿ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷರ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಸರ್ಕಾರಿ ಹೊರಗುತ್ತಿಗೆ ಹೊರಗುತ್ತಿಗೆ ನೌಕರರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಸಮಸ್ಯೆ ಬಗೆಹರಿಸಲು ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದು ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಸುಧಾಕರ ಅವರು ಆದೇಶಿಸಿದರು.

ನಗರದ ಗುರುನಾನಕ್ ಕಾಲೋನಿಯಲ್ಲಿ ವೈಷ್ಣವಿ ಕನ್ವೇಷನ್ ಸಭಾಂಗಣದಲ್ಲಿ ನಡೆದ ಹೊರಗುತ್ತಿಗೆ ನೌಕರರ ಸಂಘದ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯದ ವಿವಿಧ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಸಾವಿ ರಾರು ನೌಕರರು ಸೇವೆ ಸಲ್ಲಿಸುತ್ತಿದ್ದಾರೆ. ಅವರಿಗೆ ಯಾವುದೇ ರೀತಿ ಯ ಸಕಾಲಕ್ಕೆ ಸಹಾಯಧನ ಹಾಗೂ ಸೇವಾ ಭದ್ರತೆಯಿಲ್ಲ. ಮುಂಬರುವ ದಿನಗಳಲ್ಲಿ ನಾವೆಲ್ಲರೂ ಒಗ್ಗಟ್ಟಾಗುವ ಮೂಲಕ ಸಂಘಟನೆ ಬಲಿಷ್ಟ ಮಾಡುವುದರ ಜತೆಗೆ ಸರಕಾರದ ಮಟ್ಟದಲ್ಲಿ ನ್ಯಾಯ ಕೇಳೋಣ ಎಂದು ತಿಳಿಸಿದರು.

ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷ ಲಕ್ಷ್ಮಣ ರಾಠೋಡ ಮಾತನಾಡಿ, ಬೀದರ ಜಿಲ್ಲೆಯಲ್ಲಿ ನೌಕರರ ಸಂಘವು ಬಲಿಷ್ಠವಾಗಿ ಮಾಡಲು ಎಲ್ಲರೂ ಸಹಕರಿಸಬೇಕು ರಾಜ್ಯಾಧ್ಯಕ್ಷರು ನನಗೆ ಜಿಲ್ಲಾಧ್ಯಕ್ಷರಾಗಿ ನೇಮಕ ಮಾಡಿದಾರೆ ಅದನು ನಾನು ಅಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸುತ್ತೇನೆ.

ಜಿಲ್ಲಾ ಘಟಕದ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು. ಜಿಲ್ಲಾಧ್ಯಕ್ಷರಾಗಿ ಲಕ್ಷ್ಮಣ ರಾಠೋಡ, ಉಪಾಧ್ಯಕ್ಷರಾಗಿ ಶ್ರೀದೇವಿ, ಮಾಣಿಕ, ಸತೀಶ್ ಪಾಟೀಲ್, ಅನಿಲಕುಮಾರ, ಸಾಜಿದ, ಪ್ರಧಾನ ಕಾರ್ಯದರ್ಶಿಯಾಗಿ ಅವಿನಾಶ್, ಖಜಾಂಚಿ ಮಹಾದೇವ ಮಂಠಾಳೆ, ಸಂಘಟನಾ ಕಾರ್ಯದರ್ಶಿ ಲೋಕೇಶ್, ರೇಖಾ, ಹರಿದೇವ ಹಾಗೂ ತಾಲೂಕಿನ ಅಧ್ಯಕ್ಷರಾದ ಔರಾದ್ ಶಿವಕುಮಾರ್ ಲಾಧ, ಬೀದರ್ ಶಿವಕುಮಾರ್ ಸೇನಾ, ಬಸವಕಲ್ಯಾಣ ಜಗದೀಶ್ ಪಾಟೀಲ್, ಹುಮನಾಬಾದ್ ಸಂದೀಪ್, ಭಾಲ್ಕಿ ಅಮರ್ ಮಜಗೆ, ಸೇವೆ ಸಲ್ಲಿಸುತ್ತಿರುವ ಈ ಸಂದರ್ಭದಲ್ಲಿ 36 ಇಲಾಖೆಯ ನೂರಾರು ಸದಸ್ಯರು ಉಪಸ್ಥಿತರಿದ್ದರು.

ಗಂಗನಾಳ ಗ್ರಾಮದಲ್ಲಿ 24*7 ಕುಡಿಯುವ ನೀರು ಸರಬರಾಜು: ಘೋಷಣೆ.

# ನೀರು ಮಿತವಾಗಿ ಬಳಸಿ ಉಳಿಸಿ.



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ.ಜನಸಮುದಾಯದವರು ಸರ್ಕಾರಿ ಯೋಜನೆಗಳನ್ನು ತಮ್ಮದು ಎಂದುಕೊಂಡು ನಿರ್ವಹಣೆ ಮಾಡಿದರೆ ಸರ್ಕಾರದ ಎಲ್ಲ ಜನಪರ ಯೋಜನೆಗಳು ಸಾರ್ಥಕತೆ ಪಡೆಯುತ್ತವೆ. ನೀರನ್ನು ಅವಶ್ಯಕತೆತಕ್ಕಂತೆ ಹಿತ-ಮಿತವಾಗಿ ಬಳಸಿಕೊಳ್ಳಬೇಕೆಂದು ಗ್ರಾಮ ಪಂಚಾಯಿತಿ ಅಧ್ಯಕ್ಷೆ ತಿಪ್ಪವ್ವ ಸಕ್ರೆಪ್ಪ ಸಗರ ಜನರಿಗೆ ಕಿವಿಮಾತು ಹೇಳಿದರು.

ತಾಲೂಕಿನ ನಾಗನಟಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಗನಾಳ ಗ್ರಾಮದಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು, ನೈರ್ಮಲ್ಯ ಇಲಾಖೆ, ಜಲಜೀವನ ಮಿಷನ್ ಯೋಜನೆಯಡಿ.ದಿನದ 24 ಗಂಟೆಯೂ ಶುದ್ಧ ಕುಡಿಯುವ ನೀರು ಸರಬರಾಜು ಗ್ರಾಮ ಘೋಷಣೆ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಲಜೀವನ್ ಮಿಷನ್ ಕಾಮಗಾರಿ ಬಹುಪಾಲು ಎಲ್ಲ ಗ್ರಾಮಗಳಲ್ಲಿ ನಡೆಯುತ್ತಿದ್ದು, ಇದರ ಉದ್ದೇಶ ಸರ್ವರಿಗೂ ಪ್ರತಿದಿನ 24 ಗಂಟೆಯೂ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದಾಗಿದೆ. ಯೋಜನೆಯ ಸಫಲತೆಗೆ ಜನರ ಸಹಕಾರ ಅತ್ಯಗತ್ಯ. ಆದರೆ ಗ್ರಾಮದಲ್ಲಿ ಕೆಲ ಕಿಡಿಗೇಡಿಗಳು ನಲ್ಲಿಗಳನ್ನು ಕಿತ್ತು ಹಾಕುತ್ತಿರುವದು ದುರದೃಷ್ಟಕರ ಸಂಗತಿ. ಪ್ರತಿಯೊಬ್ಬ ಗ್ರಾಮಸ್ಥರು ಜಲಜೀವನ ಮಿಷನ್‌ನಂತಹ ಉತ್ತಮ ಯೋಜನೆಯನ್ನು ಉತ್ತಮ ರೀತಿಯಲ್ಲಿ ಜವಾಬ್ದಾರಿಯುತವಾಗಿ ನೋಡಿಕೊಳ್ಳಬೇಕು ಎಂದು ಗ್ರಾಮಸ್ಥರಿಗೆ ಹೇಳಿದರು.

ಇದೇ ವೇಳೆ ಮಾತನಾಡಿದ ಸಾಮಾಜಿಕ ಅಭಿವೃದ್ಧಿ ಸಮಾಲೋಚಕರ ಜಿಲ್ಲಾ ತಾಂತ್ರಿಕ ಘಟಕದ ಕಾಶಿನಾಥ ಕಲಾಲ್ ಅವರು, ನೀರು ಅತ್ಯ ಮೂಲ್ಯವಾದ ಸಂಪತ್ತು ಗಂಗನಾಳ ಗ್ರಾಮವು 24ಥ7 ಶುದ್ದ ಕುಡಿಯುವ ನೀರು ಸರಬರಾಜು ಗ್ರಾಮವಾಗಿ ಆಯ್ಕೆ ಮಾಡಿ ಇಂದು ಉದ್ಘಾಟನೆಗೊಳ್ಳುತ್ತಿರುವುದು ಗಂಗನಾಳ ಗ್ರಾಮಸ್ಥರಿಗೆ ಹೆಮ್ಮೆಯ ದಿನ ಎಂದು ಹೇಳಬಹುದು, ಜಲ ಜೀವನ ಮಿಷನ್ ಯೋಜನೆ ಅಡಿಯಲ್ಲಿ 24ಥ7 ನೀರು ಸರಬರಾಜು ಕಾರ್ಯಕ್ರಮದ ಉದ್ದೇಶ, ಆಗುವ ಉಪಯೋಗಗಳು, ನೀರು ನಿರ್ವಹಣೆಯಲ್ಲಿ ಗ್ರಾಮ ಪಂಚಾಯತಿಯ ಪಾತ್ರ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಜವಬ್ದಾರಿಗಳ ಕುರಿತು ಜನರಿಗೆ ತಿಳಿಸಿಕೊಟ್ಟರು.

ಈ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೆಂಕಣ್ಣ ದೇವಾಪುರ ಅವರು, ನೀರು ಪ್ರತಿಯೊಬ್ಬ ಸಾರ್ವಜನಿಕರ ಆಸ್ತಿ. ನೈಸರ್ಗಿಕ ಕೊಡುಗೆಯಾಗಿದ್ದು, ನೀರಿನ ಸಂರಕ್ಷಣೆ ಎಲ್ಲರ ಹೊಣೆಯಾಗಿದೆ. .ದೈನಂದಿನ ಚಟುವಟಿಕೆಯಲ್ಲಿ ನೀರು ಪಾತ್ರ ಬಹುಮುಖ್ಯವಾಗಿದ್ದು, ಜಲಮೂಲ ಸಂರಕ್ಷಣೆಗೆ ಜನ ಸಮುದಾಯ ಕೈ ಜೋಡಿಸಬೇಕಿದೆ. 24*7 ನೀರು ಸರಬರಾಜು ಯೋಜನೆಯನ್ನು ಪ್ರತಿಯೊಬ್ಬರು ಜವಾಬ್ದಾರಿಯಿಂದ ನಿರ್ವಹಣೆ ಮಾಡಿಕೊಳ್ಳಬೇಕು. ನೀರು ನಮಗೆ ಮಾತ್ರವಲ್ಲದೆ ಮುಂದಿನ ಪೀಳಿಗೆಗೂ ಸಂರಕ್ಷಿಸಿ ಒದಗಿಸಬೇಕಾಗಿದೆ. ಪಂಚಾಯಿತಿಗೆ ಬರುವ ಅನುದಾನವನ್ನು ಸದ್ಬಳಕೆ ಮಾಡಿಕೊಂಡು ಗ್ರಾಮ ಅಭಿವೃದ್ಧಿಗೆ ನಾಂದಿ ಆಡಬೇಕು ಎಂದರು.

ಇದೆ ವೇಳೆ ಆಂಜನೇಯ ಹೆಚ್. ನಾಯಕ, ಎಂ&ಇ ಸಮಾಲೋಚಕರು, ಜಿಲ್ಲಾ ತಾಂತ್ರಿಕ ಘಟಕ ಯಾದಗಿರಿ ಇವರು ಪ್ರತಿಜ್ಞಾವಿಧಿಯನ್ನು ಬೋಧಿಸಿದರು

.ಕಾರ್ಯಾಕ್ರಮದಲ್ಲಿ ನಾಗನಟಗಿ ಗ್ರಾಮ ಪಂಚಾಯತಿಯ ಎಲ್ಲಾ ಸರ್ವಸದಸ್ಯರು, ಗ್ರಾ.ಕು.ನೀ.ಉಪ-ವಿಭಾಗದ ಕಿರಿಯ ಅಭಿಯಂತರರಾದ ಚೆನ್ನವೀರಸ್ವಾಮಿ, ಜೆಜೆಎಂ ಯೋಜನಾ ವ್ಯವಸ್ಥಾಪಕ ರಾಜಶೇಖರ, ಗುತ್ತಿಗೆದಾರ ಶಿವಪ್ಪ ನಾಯಕ ಹಾಗೂ ಗ್ರಾಮದ ಮುಖಂಡರು ಹಾಗೂ ಡಿ.ಟಿ.ಎಸ್.ಯು.ತಂಡ, ಪ್ರತಿನಿಧಿ, ಐ ಎಸ್ ಎ ಸಿಬ್ಬಂದಿಗಳು ಭಾಗವಹಿಸಿದ್ದರು. ಹಣಮಂತ ಜಾಧವ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಶ್ರೀ ಬಸವ ಜಯಂತ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಣೆಗೆ ನಿರ್ಧಾರ



ಯಾದಗಿರಿ ಏ.16-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ,ನಗರಸಭೆ, ವೀರಶೈವ ಮಹಾಸಭಾ, ವಿವಿಧ ಸಂಘ ಸಂಸ್ಥೆಗಳು ಹಾಗೂ ಇಲಾಖೆಗಳ ಸಹಯೋಗದಲ್ಲಿ

ಜಿಲ್ಲೆಯಲ್ಲಿ ಏ.30ರಂದು ಶ್ರೀ ಬಸವ ಜಯಂತ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಶ್ರೀ ಬಸವ ಜಯಂತ್ಯೋತ್ಸವ ಆಚರಣೆ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಬರುವ ಏಪ್ರೀಲ್ 30 ರ ಬೆಳಿಗ್ಗೆ 10-30 ಗಂಟೆಗೆ ಈ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಆಚರಿಸಲು ನಿರ್ಧರಿಸಲಾಗಿದ್ದು, ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಂದು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಂಜೆ ವೀರಶೈವ ಕಲ್ಯಾಣ ಮಂಟಪದಿಂದ ಆರಂಭಿಸುವ ಮೆರವಣಿಗೆ ಮಾರ್ಗದ ಕುರಿತು ಮುಂಚಿತವಾಗಿ ತಿಳಿಸಬೇಕು.ಜಿಲ್ಲಾ ,ಗ್ರಾಮ ಪಂಚಾಯತ್, ತಾಲೂಕ ಮಟ್ಟ ಹಾಗೂ ಶಾಲಾ, ಕಾಲೇಜು, ಕಚೇರಿಯಲ್ಲಿ ಜಯಂತಿ ಆಚರಣೆಗೆ ಕ್ರಮ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಕಳೆದ ಎರಡು ವರ್ಷಗಳಲ್ಲಿ ಲೋಕಸಭಾ, ವಿಧಾನ ಸಭಾ ಚುನಾವಣೆ ಗಳ ಹಿನ್ನೆಲೆಯಲ್ಲಿ ಮಹನೀಯರ ಜಯಂತಿ ಸರಳವಾಗಿ ಆಚರಿಸಲಾಗಿದೆ.ಈ ಬಾರಿ ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಿರಬೇಕು.ಜಯಂತಿಯಂದು ಸೂಕ್ತ ಪೋಲಿಸ್ ಬಂದೋಬಸ್ತ್, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಇನ್ನಿತರ ವ್ಯವಸ್ಥೆಗೋಳನ್ನು ಅಚ್ಚುಕಟ್ಟಾಗಿ

ಮಾಡಲು ಅವರು ಸೂಚಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ವಿಜಯಕುಮಾರ್ ಮಡ್ಡೆ, ಸರ್ಕಾರಿ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರು ಸುಭಾಷ್ ಚಂದ್ರ ಕೌಲಗಿ, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಚನ್ನಪ್ಪಗೌಡ, ಪ್ರಧಾನ ಕಾರ್ಯದರ್ಶಿ ಡಾ.ಸಿದ್ದರಾಜ ರೆಡ್ಡಿ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ, ವೀರಶೈವ ಸಮಾಜದ ಅಧ್ಯಕ್ಷ ಅಯ್ಯಣ್ಣ ಹುಂಡೆಕಾರ್, ರೈತ ಮುಖಂಡ ಚನ್ನಾರೆಡ್ಡಿಗೌಡ, ವೀರಶೈವ ಮಹಾಸಭಾ ಯುವ ಅಧ್ಯಕ್ಷ ಸುರೇಶ್ ಜಾಕಾ,

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ, ಸಮಾಜದ ಮುಖಂಡರು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಆಡಂಬರದ ಆಚರಣೆಗಿಂತ ಅವಶ್ಯಕತೆಯುಳ್ಳವರಿಗೆ ಆಸರೆ ಆಗಬೇಕು-ರಾಜೇಶ್ವರಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ :- ಶಹಾಪುರ ತಾಲೂಕಿನ ಸರ್ಕಾರಿ ಪ್ರೌಢ ಶಾಲೆ ಹೊತಪೇಟೆಯಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134 ನೇ ಜಯಂತಿಯನ್ನು ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ ಶ್ರೀ ಅನಿಲ್ ತೆಜಪ್ಪ, ವ್ಯವಸ್ಥಾಪಕರು ವರ್ಲ್ಡ್ ವಿಷನ್ ಇಂಡಿಯಾ, ಮಕ್ಕಳನ್ನು ಉದ್ದೇಶಿಸಿ ಮಾತನಾಡಿದರು. ಡಾಕ್ಟರ್ ಭೀಮರಾವ್ ಅಂಬೇಡ್ಕರ್ ಅವರ ಬಾಲ್ಯ ಜೀವನವನ್ನು ಕುರಿತು ಮಾತನಾಡಿದರು ಮತ್ತು ಅವರ ಕಲಿಕೆಯಲ್ಲಿರುವ ಆಸಕ್ತಿಯನ್ನು ಮಕ್ಕಳು ಕೂಡ ಅಳವಡಿಸಿಕೊಳ್ಳಬೇಕೆಂದು ಮಕ್ಕಳಿಗೆ ಕರೆ ನೀಡಿದರು. ಅವರ ಸರಳತೆ, ಸತತ ಪ್ರಯತ್ನ ಮತ್ತು ಪ್ರಾಮಾಣಿಕತೆಯನ್ನು ಮಾದರಿಯಾಗಿ ಇಟ್ಟುಕೊಳ್ಳಬೇಕೆಂದು ಎಚ್ಚರಿಕೆ ನೀಡಿದರು. ಇದೇ ಸಂದರ್ಭದಲ್ಲಿ ಓಲ್ಡ್ ವಿಜನ್ ಇಂಡಿಯಾ ಸಂಸ್ಥೆ ವತಿಯಿಂದ ವಿದ್ಯಾರ್ಥಿನಿಯರಿಗೆ ಸೈಕಲ್ ಗಳನ್ನು ವಿತರಿಸಿದರು. ಶ್ರೀಮತಿ ರಾಜೇಶ್ವರಿ ಮುಖ್ಯ ಗುರುಗಳು ಮಾತನಾಡಿ ಆಡಂಬರದ ಆಚರಣೆಗಿಂತ ಅವಶ್ಯಕತೆ ಉಳ್ಳವರಿಗೆ ಆಸರೆ ಆಗಬೇಕೆಂದು ಕರೆಕೊಟ್ಟರು. ದಾನಿಗಳು ತಮ್ಮ ವಿವಾಹ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಿಕೊಂಡು ಹಣವನ್ನು ಉಳಿತಾಯ ಮಾಡಿ ಬಡ ಮಕ್ಕಳಿಗೆ ಸೈಕಲ್ ಗಳನ್ನು ಕಾಣಿಕೆಯಾಗಿ ಕೊಟ್ಟಿದ್ದಕ್ಕಾಗಿ ದಾನಿಗಳಿಗೆ ಧನ್ಯವಾದಗಳು ಅರ್ಪಿಸಿದರು ಮತ್ತು ವರ್ಲ್ಡ್ ವಿಷನ್ ಇಂಡಿಂ-ಯಾ ಸಂಸ್ಥೆಯವರು ಮಾಡಿದ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪ್ರಶಂಸಿಸಿದರು. ಮಕ್ಕಳು ಪ್ರತಿದಿನ ಶಾಲೆಗೆ ಬರಲು ಅನುಕೂಲವಾಗುವಂತೆ ಮಕ್ಕಳಿಗೆ ಸೈಕಲ್ ಗಳನ್ನು ವಿತರಿಸಲಾಯಿತು. ಸಹ ಶಿಕ್ಷಕರಾದ ಶ್ರೀ ನಾಗಣ್ಣ ಯಲಗಟ್ಟಿ ಅವರು ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆದರ್ಶ ಜೀವನವನ್ನು ಕುರಿತು ಮಕ್ಕಳಿಗೆ ಮತ್ತು ಪೋಷಕರಿಗೆ ಉಪನ್ಯಾಸ ಮಾಡಿದರು.

ಈ ಕಾರ್ಯಕ್ರಮದಲ್ಲಿ ಎಸ್ ಡಿ ಎಂ ಸಿ ಅಧ್ಯಕ್ಷರಾದ ಮಾರುತಿ ನಾಟಕ ಜೀವರಾಜ್ ಅಯ್ಯಣ್ಣ ಗ್ರಾಮ ಪಂಚಾಯಿತಿ ಸದಸ್ಯರಾದ ಬಸವರಾಜ್ ಮಡಿನಾಳ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಧರ್ಮಣ್ಣ ಯಾದವ್ ಉಪಾಧ್ಯಕ್ಷ ಬಾಬುರಾವ್ ಗ್ರಾಮದ ಹಿರಿಯರಾದ ಭೀಮಣ್ಣ ಯಾದಗಿರಿ ನಿಂಗಣ್ಣ ಕಲ್ಲೂರ್, ಮುರಿಗೆಪ್ಪ ಸಾಹುಕಾರ, ಶರಣಪ್ಪ ಮಡಿವಾಳ, ಭಾಷೆ ಕುರೇಶಿ, ರಾಬರ್ಟ್, ಅಶೋಕ್, ಪೋಷಕರು ಮತ್ತು ಎಸ್ಡಿಎಂಸಿಯ ಸದಸ್ಯರುಗಳು ಗ್ರಾಮಸ್ಥರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು ಭಾಗವಹಿಸಿದರು. ಅಯ್ಯಣ್ಣ ವಿಶ್ವಕರ್ಮ ಸಹ ಶಿಕ್ಷಕರು ಕಾರ್ಯಕ್ರಮವನ್ನು ನಿರೂಪಿಸಿದರು.

# ಮೌಲಾನಾ ಆಜಾದ ಆಂಗ್ಲ ಮಾಧ್ಯಮ ಮಾದರಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.16-2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ ಆಂಗ್ಲ ಮಾಧ್ಯಮ ಮಾದರಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಈ ಮಾದರಿ ಶಾಲೆಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯಕ್ಕೆ ಶೇ. 75 ಮತ್ತು ಇತರೆ ವರ್ಗಗಳ ವಿದ್ಯಾರ್ಥಿಗಳಿಗೆ ಶೇ. 25 ರಷ್ಟು ಸ್ಥಾನಗಳು ಮೀಸಲಿಡಲಾಗಿದೆ. ಅರ್ಹ ಅಭ್ಯರ್ಥಿಗಳುಃಣಣಠಿ:// ಜಿತಛಿಟಿಜಿಃಣಾ ಜಡಿತುಭಿಜ. ಇಚಿಡಿಟಿಚಿಣಚಿಞಚಿ.ರಂತ. ಟಿ ವೆಬ್‌ಸೈಟ್‌ದಲ್ಲಿ 2025ರ ಮೇ 10 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಉಚಿತ ಸೇವೆ ಬಳಸಿಕೊಳ್ಳಲು ತಮ್ಮ ಸಮೀಪದ ಮೌಲಾನಾ ಆಜಾದ ಮಾದರಿ ಶಾಲೆ, ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮತ್ತು ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 827779990 ಹಾಗೂ ಕಲಬುರಗಿ ಜಿ.ಡಿ.ಎ ಕಛೇರಿ ಮೊದಲನೇ ಮಹಡಿಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-247260 ಹಾಗೂ https://sevasindhuservice.karnataka.gov.in ವೆಬ್ ಸೈಟ್‌ಗೆ ಸಂಪರ್ಕಿಸಲು ಕೋರಲಾಗಿದೆ.

# ಮೌಲಾನಾ ಆಜಾದ್ ಶಾಲೆಗಳ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 16- ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ 2025-26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ರಾಯಚೂರಿನ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆಗಳು, ಆಶ್ರಯ ಕಾಲೋನಿ, ಹಾಷ್ಮಿಯ ಆವರಣ, ಬೆರೋನ್ ಕಿಲ್ಲಾ-3, ಬೆರೋನ್ ಕಿಲ್ಲಾ-4, ದೇವದುರ್ಗ ತಾಲ್ಲೂಕಿನ ಗೌರಂಪೇಟೆ, ಜಾಲಹಳ್ಳಿ ಮತ್ತು ಗಬ್ಬೂರು, ಅರಕೇರಾ ತಾಲ್ಲೂಕಿನ ಅರಕೇರಾ, ಮಾನವಿ ತಾಲ್ಲೂಕಿನ ಮಾನವಿ, ಲಿಂಗಸೂಗೂರು ತಾಲ್ಲೂಕಿನ ಲಿಂಗಸೂಗೂರು, ಮಸ್ಕಿ ತಾಲ್ಲೂಕಿನ ಮಸ್ಕಿ, ಸಿರವಾರ ತಾಲ್ಲೂಕಿನ ಸಿರವಾರ ಮತ್ತು ಸಿಂಧನೂರು ತಾಲ್ಲೂಕಿನ ಸಿಂಧನೂರು, ಪಿಡಬ್ಲ್ಯೂಡಿಕ್ಯಾಂಪ್, ದಿದ್ದಿಗಿ, ಸಿಂಗಾಪೂರು ಮತ್ತು ಸಾಲಗುಂದ ಶಾಲೆಗೆ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿಡಲಾಗಿದ್ದು, ಪ್ರಸ್ತುತ ಕರ್ನಾಟಕದ ಸರ್ಕಾರದ ಅಥವಾ ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳು ಮತ್ತು ಪ್ರ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಆನ್‌ಲೈನ್ (ಸೇವಾಸಿಂಧು:ಫಜಙಣಜಃಣಣಠಿ:// ಜತಛಿಟಿಜಿಃಣಾ ಜಡಿತುಭಿಜ. ಇಚಿಡಿಟಿಚಿಣಚಿಞಚಿ.ರಂತ.ಟಿ) ಮೂಲಕ ಮೇ.10ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990, 08022535902, ರಾಯಚೂರು ಮೊ.ನಂ: 9986311262, 9886891883, 9611811169, 8660476921, ಮಾನವಿ, ಮೊ.ನಂ; 8971757620, ಸಿರವಾರ:ಮೊ.ನಂ: 7975922835, ದೇವದುರ್ಗ: ಮೊ.ನಂ: 8310846415, 9945121187, ಅರಕೇರಾ ಮೊ.ನಂ: 8073274117, ಲಿಂಗಸೂಗೂರು, ಮತ್ತು ಮಸ್ಕಿ ಮೊ.ನಂ:8880939711 ಸಿಂಧನೂರು ಮೊ.ನಂ: 9741050010, 9980432449ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಪ್ರಿಲ್ 27ರಂದು ಜಾಗೃತಿ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 16 : ಇಲ್ಲಿನ ಕಾರ್ಮಿಕ ಭವಿಷ್ಯ ನಿಧಿ ಸಂಘಟನೆಯಿಂದ ಏಪ್ರಿಲ್ 27ರ ಬೆಳಿಗ್ಗೆ 9.30 ಗಂಟೆಗೆ ರಾಯಚೂರು ನಗರದ ಲಯನ್ಸ್ ಕ್ಲಬ್ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆ, ಕೆ ಇ ಬಿ ಕಾಲೋನಿ ಹಿಂಭಾಗದಲ್ಲಿ ಆಪ್ಕೆ ನಿಕತ್ 2.0 ಜಾಗೃತಿ ಶಿಬಿರ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದ್ದು, ಎಲ್ಲಾ ಉದ್ಯೋಗದಾತರು, ನೌಕರರು ಮತ್ತು ಪಿಂಚಣಿದಾರರು ಭಾಗವಹಿಸಿ ಕಾರ್ಯಕ್ರಮದ ಲಾಭವನ್ನು ಪಡೆಯಬಹುದಾಗಿದೆ. ಇಪಿಎಫ್ ಮತ್ತು ಎಂಪಿ ಕಾಯ್ದೆ 1952ರ ನಿಬಂಧನೆಗಳನ್ನು ಉತ್ತಮವಾಗಿ ಅರ್ಥ ಮಾಡಿಕೊಳ್ಳಲು ಮಧ್ಯಸ್ಥಗಾರರು, ಸದಸ್ಯರು ಮತ್ತು ಉದ್ಯೋಗದಾತರಿಗಾಗಿ ಇಪಿಎಫ್‌ಓ ನಡುವೆ ನಿಕಟ ಸಂವಹನಕ್ಕಾಗಿ ಜಿಲ್ಲಾ ಜಾಗೃತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ಭವಿಷ್ಯ ನಿಧಿ ಅಥವಾ ಪಿಂಚಣಿ ಇತ್ಯಾದಿ ಸಂಬಂಧಿಸಿದ ಕುಂದುಕೊರತೆಗಳು, ಪ್ರಶ್ನೆಗಳನ್ನು ಕಾರ್ಯಕ್ರಮದಲ್ಲಿ ಬಗ್ಗೆಹರಿಸಿಕೊಳ್ಳಬಹುದಾಗಿದೆ ಎಂದು ಪಿಎಫ್ ಪ್ರಾದೇಶಿಕ ಕಚೇ-ರಿಯ ಸಹಾಯಕ ಪಿಎಫ್ 1ನೇ ಆಯುಕ್ತರು ಹಾಗೂ ಉಸ್ತುವಾರಿ ಅಧಿಕಾರಿಗಳಾದ ಕೆ.ವಿ.ಪ್ರವೀಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ಯಾರಂಟಿ ಯೋಜನೆಗಳ ಅರಿವು ಮತ್ತು ಪ್ರಚಾರ ಮೂಡಿಸುವ ಕಾರ್ಯವಾಗಬೇಕು: ಜಿಲ್ಲಾಧ್ಯಕ್ಷ ಚಿದಾನಂದಪ್ಪ ಕೆ.ಇ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.16–ರಾಜ್ಯಸರ್ಕಾರದ ಪಂಚಗ್ಯಾರಂಟಿಯೋಜನೆಗಳಿಂದ ಬಡಜನರಏಳ್ಗೆಗೆಪೂರಕವಾಗಿದ್ದು, ಯೋಜನೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಗ್ರಾಪಂ ಮಟ್ಟದಲ್ಲಿಗ್ಯಾರಂಟಿಯೋಜನೆಗಳ ಅರಿವುಮತ್ತುಪ್ರಚಾರಮೂಡಿಸುವ ಕಾರ್ಯವಾಗಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನಪ್ರಾಧಿಕಾರದಜಿಲ್ಲಾಧ್ಯಕ್ಷ ಚಿದಾನಂದಪ್ಪ ಕೆ.ಇ ಅವರು ಹೇಳಿದರು.

ನಗರದಜಿಲ್ಲಾಪಂಚಾಯತ್‌ನ ಹಳೆಯನಜೀರ್‌ಸಭಾಂಗಣದಲ್ಲಿ ಬುಧವಾರಏರ್ಪಡಿಸಿದ್ದಜಿಲ್ಲಾ ಮಟ್ಟದಗ್ಯಾರಂಟಿಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಡುಬಡವರುಮತ್ತುಅಹಾಯಕ ಕುಟುಂಬಗಳಿಗಾಗಿಯೇನೆರವು ನೀಡಲು ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಈಗಾಗಲೇ ಗ್ಯಾರಂಟಿ ಯೋಜನೆಗಳಿಂದ ಸಾಕಷ್ಟು ಪ್ರಮಾಣದ ಅರ್ಹರು ಇದರ ಲಾಭ ಪಡೆಯುತ್ತಿದ್ದಾರೆ. ಅದೇರೀತಿಯಾಗಿಹೊರಗುಳಿದ ಅರ್ಹ ಫಲಾನುಭವಿಗಳನ್ನು ಗುರುತಿಸಿ,ಗ್ಯಾರಂಟಿಯೋಜನೆಗಳ ಲಾಭತಲುಪಿಸಲುಅಧಿಕಾರಿಗಳು ಪ್ರಾಮಾಣಿಕಪ್ರಯತ್ನಮಾಡಬೇಕು ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿಗ್ಯಾರಂಟಿಯೋಜನೆಗಳನ್ನು ಜಿಲ್ಲೆಯಲ್ಲಿಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಶೇ.100ರಷ್ಟುಪ್ರಗತಿ ಸಾಧಿಸಬೇಕು ಎಂದರು.ಗೃಹಲಕ್ಷ್ಮೀಯೋಜನೆಯಡಿ ನೋಂದಣಿಯಾದಫಲಾನುಭವಿಗಳಿಗೆ ಆಗಸ್ಟ್2023ರಿಂದ ಡಿಸೆಂಬರ್ 2024 ರವರೆಗೆ ರೂ.2,000 ರಂತೆ ಒಟ್ಟು 43,92,946 ಫಲಾನುಭವಿಗಳಿಗೆ ಮಾಹೆವಾರು ಒಟ್ಟು 878,58,92,000 ರೂ. ಗಳು ಸರ್ಕಾರದಿಂದ ನೇರವಾಗಿ ಫಲಾನುಭವಿಗಳ ಖಾತೆಗಳಿಗೆ ವರ್ಗಾವಣೆ ಮಾಡಲಾಗಿದೆ. 2025 ರ ಜನವರಿ ತಿಂಗಳ ಹಣವು ಪಾವತಿಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್ ಅವರು ಸಭೆಗೆ ತಿಳಿಸಿದರು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮ್ಮೈರ್ ಅವರು ಪ್ರತಿಕ್ರಿಯಿಸಿ, ಗೃಹಲಕ್ಷ್ಮೀಯೋಜನೆಯಡಿ ನೋಂದಾಯಿಸಿಕೊಂಡ ಫಲಾನುಭವಿಗಳಲ್ಲಿ ಎನ್‌ಪಿಸಿಐ ಸಮಸ್ಯೆ,ತೀರಿಹೋದವರು ಮತ್ತು ಐಟಿ–ಜಿಎಸ್‌ಟಿ ಸಂಬಂಧಿತ ಕಾರಣಗಳಿಂದ ಸೌಲಭ್ಯ ವಂಚಿತರಾದ ಫಲಾನುಭವಿಗಳ ನಿಖರಮಾಹಿತಿಕಂಡುಕೊಳ್ಳಬೇಕು. ಇದರಿಂದ ಯೋಜನೆಯ ಹಣ ಪೋಲಾಗದಂತೆ ತಡೆಯಬಹುದು ಎಂದು ತಿಳಿಸಿದರು. ಎನ್‌ಪಿಸಿಐ ಲಿಂಕ್ ಆಗದ ಫಲಾನುಭವಿಗಳು ಮತ್ತು ಫಲಾನುಭವಿಗಳ ವಯೋಸಹಜದಿಂದ ಮರಣ ಹೊಂದಿದವರ ಮಾಹಿತಿ ಗುರುತಿಸಲು ತಾಪಂ ಇಒ,ಗ್ರಾಪಂ ಪಿಡಿಒ ಮತ್ತು ಲೀಡ್ ಬ್ಯಾಂಕ್ ಅಧಿಕಾರಿಗಳನ್ನೊಂಡು ಗ್ರಾಪಂ ಮಟ್ಟದಲ್ಲಿ ವಿಶೇಷ ಕ್ಯಾಂಪೇನ್‌ಗಳನ್ನು ಆಯೋಜಿಸಬೇಕು ಎಂದು ನಿರ್ದೇಶನ ನೀಡಿದರು.

ಅನ್ನಭಾಗ್ಯ ಯೋಜನೆಯಡಿ ಜುಲೈ2023ರಿಂದ ಡಿಸೆಂಬರ್ 2024ರವರೆಗೆ ಜಿಲ್ಲೆಯಲ್ಲಿ ಒಟ್ಟು 1,81,10,436 ಫಲಾನುಭವಿಗಳಿಗೆ ಇದುವರೆಗೂ ಒಟ್ಟು 292.29 ಕೋಟಿ ರೂ.ಗಳ ಸಹಾಯಧನ ನೀಡಲಾಗಿದೆ. 2025ರ ಜನವರಿ ಮಾಹೆಯ ಡಿಬಿಟಿಯ ಅನುದಾನ ಬಿಡುಗಡೆಯಾಗಿಲ್ಲ,ಉಳಿದ ಫೆಬ್ರವರಿ ಮತ್ತು ಮಾರ್ಚ್ ಮಾಹೆಯ ಹೆಚ್ಚುವರಿ ಅಕ್ಕಿಯನ್ನು ರಾಜ್ಯ ಸರ್ಕಾರವು ನಿರ್ದೇಶನದಂತೆ ಅಕ್ಕಿ ವಿತರಿಸಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನಾ ಅವರು ಸಭೆಗೆ ತಿಳಿಸಿದರು.

ಅಧ್ಯಕ್ಷರಾದ ಚಿದಾನಂದಪ್ಪ ಅವರು ಮಾತನಾಡಿ, ಜಿಲ್ಲೆಯಲ್ಲಿ ಹೆಚ್ಚಾಗಿ ಅಕ್ರಮ ಪಡಿತರ ಸಾಗಾಣೆ ಸಂಬಂಧಿಸಿದಂತೆ ಪ್ರಕರಣಗಳು ದಾಖಲಾಗುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕಿದೆ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಒಟ್ಟು 3,18,885 ಅರ್ಹ ಗ್ರಾಹಕರಿದ್ದು, ಅದರಲ್ಲಿ ಈವರೆಗೆ (ಮಾ.31 ರ ವರೆಗೆ) 2,82,956 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದಾರೆ. 35,929 ಗ್ರಾಹಕರು ನೋಂದಾಯಿಸಲು ಬಾಕಿಯಿದ್ದಾರೆ. ಸರ್ಕಾರವು 2023ರ ಆಗಸ್ಟ್ನಿಂದ 2025ರ ಮಾರ್ಚ್ವರೆಗೆ ಒಟ್ಟು 277.02 ಕೋಟಿ ರೂ. ಪಾವತಿಸಿದೆ ಎಂದು ಜೆಸ್ಕಾಂ ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ಇದಕ್ಕೆ ಅಧ್ಯಕ್ಷರು ಪ್ರತಿಕ್ರಿಯಿಸಿ, ಜಿಲ್ಲೆಯಲ್ಲಿಅನಧೀಕೃತವಾಗಿವಿದ್ಯುತ್ ಸಂಪರ್ಕ ಪಡೆಯುತ್ತಿರುವವರನ್ನು ಗುರುತಿಸಿ ವಿದ್ಯುತ್ ಮೀಟರ್ ಸಂಪರ್ಕ ಪಡೆಯಲು ತಿಳಿಸಬೇಕು. ಬಾಡಿಗೆ ಮನೆ ಬದಲಾಯಿಸುವವರ ಯೋಜನೆ ಪಡೆಯಲು ಲಿಂಕಿಂಗ್ ಮತ್ತು ಡಿ–ಲಿಂಕಿಂಗ್ ಮಾಹಿತಿಯು ಸಹ ಪೂರಕವಾಗಿರಬೇಕು ಎಂದು ಜೆಸ್ಕಾಂ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಶಕ್ತಿಯೋಜನೆಯಡಿ ಬಳ್ಳಾರಿ ವಿಭಾಗದ ಸಾರಿಗೆ ಇಲಾಖೆಯ ಬಸ್‌ಗಳಲ್ಲಿ ಜೂನ್–2023 ರಿಂದ ಮಾರ್ಚ್–2025 ರವರೆಗೆ ಮಹಿಳಾ ವಯಸ್ಕರು ಮತ್ತು ಹೆಣ್ಣುಮಕ್ಕಳು ಸೇರಿ ಒಟ್ಟು 4,52,37,755 ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, 167,99,61,992ರೂ.ಗಳು ಸಾರಿಗೆ ಆದಾಯ ಹೊಂದಲಾಗಿದೆ ಎಂದು ಕ.ಕ.ಸಾರಿಗೆ ಸಂಸ್ಥೆಯ ಬಳ್ಳಾರಿ ವಿಭಾಗೀಯನಿಯಂತ್ರಣಾಧಿಕಾರಿಗಳು ತಿಳಿಸಿದರು.

ಯುವನಿಧಿ ಯೋಜನೆಯಡಿ ಫೆಬ್ರವರಿ–2025 ಮಾಹೆವರೆಗೆ ಜಿಲ್ಲೆಯ 7,618 ನಿರುದ್ಯೋಗಿ ಅಭ್ಯರ್ಥಿಗಳು ನೋಂದಾಯಿಸಿದ್ದು, ಈವರೆಗೆ 9,79,38,000 ರೂ. ಫಲಾನುಭವಿಗಳಿಗೆ ಜಮೆ ಮಾಡಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿಗಳು ಸಭೆಗೆ ತಿಳಿಸಿದರು.

ಇದಕ್ಕೆ ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮ್ಮೈರ್ ಅವರು ಮಾತನಾಡಿ, ನಿರುದ್ಯೋಗಿ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಿದಲ್ಲಿ ಅವುಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡಬೇಕು. ಕಾಲೇಜು ಮಟ್ಟದಲ್ಲಿ ವಿಶೇಷ ನೋಂದಣಿ ಶಿಬಿರ ಆಯೋಜಿಸಬೇಕು. ಹೆಚ್ಚು ಅರ್ಹ ನಿರುದ್ಯೋಗ ಅಭ್ಯರ್ಥಿಗಳು ನೋಂದಾಯಿಸಿಕೊಳ್ಳುವಂತೆ ಜಾಗೃತಿ ಮತ್ತು ಅರಿವು ಮೂಡಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಅಧ್ಯಕ್ಷರು ಮಾತನಾಡಿ, ಅಧಿಕಾರಿಗಳು ತಮ್ಮ ಸೇವಾ ಮನೋಭಾವದಿಂದ ಕೆಲಸ ನಿರ್ವಹಿಸಬೇಕು. ಸರ್ಕಾರ ಯೋಜನೆಗಳನ್ನು ಜನಸಾಮಾನ್ಯರಿಗೆ ಅರ್ಹ ಫಲಾನುಭವಿಗಳನ್ನು ಗುರುತಿಸಿ ಸಕಾಲದಲ್ಲಿ ಅವರಿಗೆ ಸೇವೆ ಒದಗಿಸಿದಾಗ ಮಾತ್ರ ಯೋಜನೆಗಳಿಗೆ ಸಾರ್ಥಕತೆ ದೊರಕುತ್ತದೆ. ಇದರಿಂದ ಸಾರ್ವಜನಿಕ ವಲಯದಲ್ಲಿ ಸರ್ಕಾರದ ಮೇಲೆ ಉತ್ತಮ ಅಭಿಪ್ರಾಯ ಮೂಡುತ್ತದೆ ಎಂದರು.

**ಗ್ಯಾರಂಟಿಫಲಾನುಭವಿಗಳೊಂದಿಗೆ ಸಂವಾದಕಾರ್ಯಕ್ರಮಆಯೋಜಿಸಿ:**

ರಾಜ್ಯಸರ್ಕಾರಜಾರಿಗೊಳಿಸಿರುವ ಪಂಚಗ್ಯಾರಂಟಿಯೋಜನೆಗಳನ್ನು ಅರ್ಹಫಲಾನುಭವಿಗಳಿಗೆತಲುಪಿಸಲು ಮತ್ತುವಂಚಿತರಾಗದಂತೆಮಾಡಲು ಗ್ಯಾರಂಟಿಯೋಜನೆಗಳ ಬಗೆಗಿನ ತಾಂತ್ರಿಕದೋಷಗಳನ್ನುನಿವಾರಿಸಲು ಗ್ರಾಮ ಸಭೆಗಳಂತೆ ಆಯಾ ಗ್ರಾಮ ಪಂಚಾಯತ್ ಮಟ್ಟದಲ್ಲಿ ಗ್ಯಾರಂಟಿ ಫಲಾನುಭವಿಗಳೊಂದಿಗೆ ಸಂವಾದ ಕಾರ್ಯಕ್ರಮ ಆಯೋಜಿಸಬೇಕು ಎಂದು ಐದು ತಾಪಂ ಇಒಗಳಿಗೆ ಜಿಪಂ ಸಿಇಒ ಮತ್ತು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಆಶಾ ಲತಾ ಸೋಮಪ್ಪ,ಬಳ್ಳಾರಿ ತಾಲ್ಲೂಕು ಅಧ್ಯಕ್ಷ ಗೋನಾಳ್ ನಾಗಭೂಷಣಗೌಡ,ಕುರುಗೋಡು ತಾಲ್ಲೂಕು ಅಧ್ಯಕ್ಷ ನಾಗೇನಹಳ್ಳಿ ಮಲ್ಲಿಕಾರ್ಜುನ,ಆಹಾರ,ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನಾ, ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ರಂಗನಾಥಬಾಬು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್‌ಬಾನ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿಗಳು ಸೇರಿದಂತೆ ಐದು ತಾಲ್ಲೂಕುಗಳ ತಾಪಂ ಇಒ ಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಏ.28 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.16–ಕಾರ್ಮಿಕರ ಭಷ್ಯಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಅಂಶದಡಿ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮವನ್ನು ಏ.28 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಬಳ್ಳಾರಿಯ ವೇಣಿವೀರಾಪುರ ರಾಯಲ್‌ಸ್ಟೀಲ್ಸ್‌ಕಾರ್ಖಾನೆಯಲ್ಲಿ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ಭವಿಷ್ಯ ನಿಧಿಯ ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ.ಪ್ರವೀಣ್ ಅವರು ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರರ ಕುಂದು ಕೊರತೆ ಪರಿಹಾರ, ಮಾಹಿತಿ ವಿನಿಮಯ ಮಾಡಿಕೊಳ್ಳಬಹುದು.

ಉದ್ಯೋಗದಾತರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರುವ ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು ಹಾಗೂ ಸುಧಾರಣೆ ಕ್ರಮಗಳ ಕುರಿತು ಮಾಹಿತಿ ಒದಗಿಸುವ ಕಾರ್ಯಕ್ರಮವಾಗಿದೆ.

ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಏ.28 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ. 20 ರಂದು ಕೊಪ್ಪಳ ಕಿರು ಜಾತ್ರೆ : ಮುತ್ತುಸ್ವಾಮಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಕಿರು ಜಾತ್ರೆ 2025,ಕೊಪ್ಪಳ ಕೋಗಿಲೆ ಸೀಸನ್–5 ಗ್ರಾಂಡ್ ಫಿನಾಲೆ ಹಾಗೂ ಕೊಪ್ಪಳ ಕಿರು ಜಾತ್ರೆ ಸೀಸನ್–2 ರ ಮಜಾ ಭಾರತ, ಕನ್ನಡ ಕೋಗಿಲೆ, ಸರಿಗಮಪ ಹಾಗೂ ಇನ್ನೂ ಅನೇಕ ಕಲಾವಿದರಿಂದ ಅದ್ದೂರಿ ಕಾರ್ಯಕ್ರಮ ಇದೇ ಏಪ್ರಿಲ್ 20 ರ ರವಿವಾರದಂದು ಸಂಜೆ 6 ಗಂಟೆಗೆ ನಗರದ ತಾಲೂಕು ಕ್ರೀಡಾಂಗಣ ನಡೆಯಲಿದೆ ಎಂದು ಕೊಪ್ಪಳ ಕಿರುಜಾತ್ರೆ ಸಂಘಟಕರಾದ ಮುತ್ತುಸ್ವಾಮಿ ನರೇಗಲ್ ಮಠ, ಶರಣಪ್ಪ ಸಜ್ಜನ್ ಹೇಳಿದರು.

ಅವರು ಬುಧವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಕಾರ್ಯಕ್ರಮದಲ್ಲಿ ವಿಶೇಷ ಆಹ್ವಾನಿತರಾಗಿ ಸಚಿವರಾದ ಶಿವರಾಜ್ ತಂಗಡಗಿ , ಮಾಜಿ ಸಂಸದ ಸಂಗಣ್ಣ ಕರಡಿ, ಆಗಮಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಕೆ.ರಾಘವೇಂದ್ರ ಹಿಟ್ನಾಳ್ ವಹಿಸಲಿದ್ದು, ಉದ್ಘಾಟನೆಯನ್ನು ಸಂಸದ ಕೆ.ರಾಜಶೇಖರ್ ಹಿಟ್ನಾಳ್ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ ಜೆಡಿಎಸ್ ಮುಖಂಡ ಸಿ.ವಿ. ಚಂದ್ರಶೇಖರ್, ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್, ಸೇರಿದಂತೆ ಅನೇಕರು ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ಚಲನಚಿತ್ರ ತಾರೆ ಹರ್ಷಿಕಾ ಪೂಣಚ್ಚ, ಕಾಮಿಡಿ ಕಿಲಾಡಿಗಳು, ಧಾರವಾಹಿಯ ಕಿರುತೆರೆ ನಟರು ಆಗಮಿಸಲಿದ್ದು ಡಿಕೆಡಿ, ನೃತ್ಯ ತಂಡ ಹಾಗೂ ಬಂಜಾರ ನೃತ್ಯ ತಂಡದವರು, ಕೊಪ್ಪಳದಲ್ಲಿ ಪ್ರಪ್ರಥಮ ಬಾರಿಗೆ ಲೈವ್ ಮ್ಯೂಸಿಕ್ ಮಾನಸಾ ಹೊಳ್ಳ ಹಾಗೂ ಮೈಸೂರು ತಂಡದಿಂದ ಅದ್ದೂರಿ ಕಾರ್ಯಕ್ರಮಗಳು, ನೀಡಲಿದ್ದು ಜನತೆ, ಅಭಿಮಾನಿಗಳು ಕಾರ್ಯಕ್ರಮವನ್ನು ವೀಕ್ಷಿಸಿ ಯಶಸ್ವಿಗೊಳಿಸೋಣ ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಆಗಮಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಶಿವಕುಮಾರ್ ಕೋಣಂಗಿ, ಅಜ್ಜಪ್ಪಸ್ವಾಮಿ ಚೆನ್ನವಡಯರ ಮಠ, ಪಾಂಡು ಕೆ.ಎಸ್, ಶ್ಯಾಮ್ ಬೆಣಗಿ ಉಪಸ್ಥಿತರಿದ್ದರು.

# ಜಾತಿ ಜನಗಣತಿ ಹೊಟ್ಟೆ ತುಂಬಿದವರಿಂದ ವಿರೋಧ: ಶಾಂತಮಯ ಸ್ವಾಮೀಜಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಕಾಂತರಾಜ್ ವರದಿಯನ್ನು ಸಚಿವ ಸಂಪುಟದ ಮುಂದೆ ತರಲಿರುವ ಸಿಎಂ ಸಿದ್ದರಾಮಯ್ಯನವರ ನಿರ್ಧಾರವನ್ನು ಹಾಲುಮತಗುರುಪೀಠದ ಸರೂರ. ಅಗತೀರ್ಥದ ಪರಮಪೂಜ್ಯಶ್ರೀ ರೇವಣಸಿದ್ದೇಶ್ವರ ಶಾಂತಮಯ ಮಹಾಸ್ವಾಮಿಗಳು ಸ್ವಾಗತಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಹಸಿದವರು ವರದಿಯಾವಾಗಬಿಡುಗಡೆಆಗುತ್ತೂ ಅಂತ ಕಾಯುತ್ತಿದ್ದಾರೆ. ಕೆಲವು ಸಮುದಾಯಗಳ ಮುಖಂಡರು ರಾಜಕೀಯ ಕಾರಣಕ್ಕಾಗಿ ವಿರೋಧಿಸುತ್ತಿದ್ದಾರೆ.ಇನ್ನುವರದಿಯೇ ಬಹಿರಂಗಗೊಂಡಿಲ್ಲ ಮೊದಲೇ ವಿರೋಧ ಮಾಡುತ್ತಿರುವುದು ಸರಿಯಲ್ಲ ವರದಿ ಬಂದ ಮೇಲೆ ತಮ್ಮ ಆಕ್ಷೇಪಗಳನ್ನು ಮತ್ತು ಆ ವರದಿಯಲ್ಲಿನ ದೋಷಗಳನ್ನು ಸರಕಾರದ ಗಮನಕ್ಕೆ ತರಲು ಎಲ್ಲರಿಗೂ ಅವಕಾಶವಿದೆ ರಾಜ್ಯದಲ್ಲಿ ಹಿಂದುಳಿದ ಅನೇಕ ಸಮುದಾಯಗಳು ಆರ್ಥಿಕವಾಗಿ ಶೈಕ್ಷಣಿಕವಾಗಿ ಸಾಮಾಜಿಕವಾಗಿ ಅತ್ಯಂತ ಹಿಂದುಳಿದಿವೆ ಸ್ವತಂತ್ರ ಸಿಕ್ಕು 75 ವರ್ಷಗಳೆ ಕಳೆದರೂ ಹಿಂದುಳಿದ ವರ್ಗದ ಜನರ ಸ್ಥಿತಿ ಬದಲಾಗಿಲ್ಲ ಕಾಂತರಾಜ ವರದಿಯು ನೈಜತೆಯಿಂದ ಕೂಡಿದೆ ವರದಿ ಬಿಡುಗಡೆಗಾಗಿ ಕುರುಬ, ಈಡಿಗ, ಕೊರಮ, ಕೊರಚ, ಮಡಿವಾಳ, ಗೊಲ್ಲ, ವಿಶ್ವಕರ್ಮ, ಸವಿತಾ ,ತಿಗಳ, ಜನಾಂಗದ ದೇವಗಾಂವ,ಭೋವಿ ,ಲಂಬಾಣಿ, ಗಾಣಿಗ, ಕುಂಬಾರ, ಉಪ್ಪಾರ ,ಬೆಸ್ತ, ಛಲವಾದಿ, ಹೇಳವ, ಸೇರಿದಂತೆ ಇನ್ನಿತರ ಸಮುದಾಯಗಳು ಕಾಯುತ್ತಿವೆ ಆದರೆ ಹೊಟ್ಟೆ ತುಂಬಿದವರು ವಿರೋಧಿಸುತ್ತಿದ್ದಾರೆ. ಹಸಿದವರು ವರದಿಬಿಡುಗಡೆಗಾಗಿಕಾಯುತ್ತಿದ್ದಾರೆ. ಆದ್ದರಿಂದ ಎಲ್ಲರೂ ಒಮ್ಮತದಿಂದ ಸಹಕಾರ ನೀಡಿ ವರದಿ ಬಿಡುಗಡೆ ಮಾಡುವಂತೆ ಪರಮಪೂಜ್ಯಶ್ರೀ ರೇವಣಸಿದ್ದೇಶ್ವರ ಶಾಂತಮಯ ಮಹಾಸ್ವಾಮಿಗಳು ರಾಜ್ಯಸರ್ಕಾರಕ್ಕೆ ಒತ್ತಾಯಿಸಿದ್ದಾರೆ.



# ಇಂದು ವಿಶೇಷ ಆಯ್ಕೆ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.16–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2025–26ನೇ ಸಾಲಿನ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ 8ನೇ ತರಗತಿ ಮತ್ತು ಪ್ರಥಮ ಪಿಯುಸಿ ಮಟ್ಟದ ಅರ್ಹ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಪ್ರವೇಶಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಈಗಾಗಲೇ ಜಿಲ್ಲಾ ಹಾಗು ವಿಭಾಗ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗಿದ್ದು, ಆಯ್ಕೆ ಶಿಬಿರಗಳಲ್ಲಿ ವಿವಿಧ ಕಾರಣಗಳಿಂದ ಭಾಗವಹಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶ ನೀಡಲು ಬಳ್ಳಾರಿ ಜಿಲ್ಲೆಯಲ್ಲಿ ಫುಟ್ಬಾಲ್ ಕ್ರೀಡೆಗೆ ಏ.17 ರಂದು ನಗರದ ಬಿಡಿಎಎ ಫುಟ್‌ಬಾಲ್ ಮೈದಾನದಲ್ಲಿ ವಿಶೇಷ ಆಯ್ಕೆ ಶಿಬಿರ ಆಯೋಜಿಸಲಾಗುವುದು.

ಆಯ್ಕೆಪ್ರಕ್ರಿಯೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳ ದೈಹಿಕ ಪರೀಕ್ಷೆಯನ್ನು ನಡೆಸಲಾಗುವುದು. ಭಾಗವಹಿಸುವ ಕ್ರೀಡಾ ಪಟುಗಳು 7ನೇ ತರಗತಿ,10 ತರಗತಿ ವ್ಯಾಸಂಗ ಮಾಡುತ್ತಿರುವ ಕ್ರೀಡಾಪಟುಗಳು ಆಯ್ಕೆಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬಹುದು.

8 ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಪ್ರಸ್ತುತ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, 8 ನೇ ತರಗತಿ ಪ್ರವೇಶಕ್ಕೆ ಜೂನ್ 2025 ಕ್ಕೆ ಅನ್ವಯವಾಗುವಂತೆ 14 ವರ್ಷ ವಯಸ್ಸು ಹೊಂದಿರಬೇಕು. ಪ್ರಥಮ ಪಿಯುಸಿ ಪ್ರವೇಶ ಬಯಸುವ ಅಭ್ಯರ್ಥಿಗಳ ವಯಸ್ಸು ಜೂನ್ 2025 ಕ್ಕೆ ಅನ್ವಯವಾಗುವಂತೆ 18 ವರ್ಷ ವಯಸ್ಸು ಹೊಂದಿರಬೇಕು.

ಈ ಪ್ರಕ್ರಿಯೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ ಇಲಾಖೆಯಿಂದ ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಹಾಕಿ ತರಬೇತುದಾರರಾದ ಎಂ.ಜಾಕೀರ್ (ಮೊ.9036335986) ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ. 18 ರಂದು ಕೋರ ಚಿತ್ರ ಬಿಡುಗಡೆ : ಸಿದ್ದು ಮಣ್ಣಿನವರ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅಂಬೇಡ್ಕರ್ ಸೇನೆಯ ರಾಜ್ಯಾಧ್ಯಕ್ಷ ಪಿ. ಮೂರ್ತಿ ಅವರು ನಿರ್ಮಿಸಿ ಅಭಿನಯಿಸಿದ ಚಲನಚಿತ್ರ ಇದೇ ಏಪ್ರಿಲ್ 18ರಂದು ಬಿಡುಗಡೆಗೊಳ್ಳಲಿದ್ದು ಚಿತ್ರವನ್ನು ಪ್ರೇಕ್ಷಕರು ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ವೀಕ್ಷಿಸಿ ಯಶಸ್ವಿಗೊಳಿಸುವಂತೆ ಅಂಬೇಡ್ಕರ್ ಸೇನೆಯ ಕೊಪ್ಪಳ ಜಿಲ್ಲಾ ಅಧ್ಯಕ್ಷ ಸಿದ್ದು ಮಣ್ಣಿನವರ್ ಮನವಿ ಮಾಡಿದರು.

ಅವರು ಬುಧವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಕೋರ ಚಲನಚಿತ್ರವು ಗ್ರಾಮೀಣ ಸೋಗಾಡಿನ, ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಸುಂದರ ಚಿತ್ರವಾಗಿದ್ದು, ಸಮಾಜಕ್ಕೆ ಸಂದೇಶವನ್ನು ನೀಡುವ ಉತ್ತಮ ಚಿತ್ರವಾಗಿದೆ,

ಈ ಚಿತ್ರವು ರಾಜ್ಯಾದಾದ್ಯಂತ ಇದೇ ಏಪ್ರಿಲ್ 18ರಂದು ಬಿಡುಗಡೆಗೊಳ್ಳಲಿದ್ದು, ಕೊಪ್ಪಳದ ಶ್ರೀ ಶಿವ ಚಿತ್ರಮಂದಿರದಲ್ಲಿ ಚಿತ್ರ ಬಿಡುಗಡೆಗೊಂಡು ಪ್ರದರ್ಶನಗೊಳ್ಳಲಿದ್ದು ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಪ್ರೇಕ್ಷಕರು, ಅಭಿಮಾನಿಗಳು ಚಿತ್ರವನ್ನು ವೀಕ್ಷಿಸಿ ಯಶಸ್ವಿಗೊಳಿಸಿ ಚಿತ್ರ ನೂರು ದಿನವನ್ನು ಪೂರೈಸಲಿ ಎಂದು ಶುಭ ಹಾರೈಸಿದರು.

ಸುದ್ದಿಗೋಷ್ಠಿಯಲ್ಲಿ ಅಂಬೇಡ್ಕರ್ ಸೇನೆಯ ಮುಖಂಡರಾದ ರಮೇಶ್ ದೊಡ್ಡಮನಿ, ಯಂಕಪ್ಪ ಹೊಸಳ್ಳಿ, ನಿಂಗಪ್ಪ ಗದ್ದಿ, ವೀರಭದ್ರಪ್ಪ ನಾಯಕ ವಕೀಲರು, ಮರಿಸ್ವಾಮಿ ಪೂಜಾರ ಉಪಸ್ಥಿತರಿದ್ದರು.

# ಬೆಳೆ ಹಾನಿಯ ಬಗ್ಗೆ ಇನ್ಸೂರೆನ್ಸ್ ಕಂಪನಿಗೆ ಮಾಹಿತಿ ನೀಡಿ: ಟಿ.ಎಸ್.ರುದ್ರೇಶಪ್ಪ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2024–25ನೇ ಸಾಲಿನ ಬೇಸಿಗೆ ಹಂಗಾಮಿನಲ್ಲಿ ಬೆಳೆವಿಮೆ ಯೋಜನೆಯಡಿ ಹೆಚ್ಚಿನ ಮಳೆ ಅಥವಾ ಗಾಳಿಯಿಂದ ಉಂಟಾಗಿರುವ ಬೆಳೆ ಹಾನಿಯ ಬಗ್ಗೆ ಇನ್ಸೂರೆನ್ಸ್ ಕಂಪನಿ, ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಮಾಹಿತಿ ನೀಡುವಂತೆ ಕೊಪ್ಪಳ ಜಂಟಿಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಅವರು ತಿಳಿಸಿದ್ದಾರೆ.

ಏ. 10 ರಂದು ಕೊಪ್ಪಳ ಜಿಲ್ಲೆಯ ವಿವಿಧ ಭಾಗಗಳಲ್ಲಿ ಭಾರೀ ಮಳೆಯಾಗಿದೆ. ಉದಾಹರಣೆಗೆ, ಕೊಪ್ಪಳ ಜಿಲ್ಲೆಯ ಬೆಣಕಲ್, ಭಾನಾಪುರ ಮತ್ತು ಹಲಗೇರಿ ಗ್ರಾಮಗಳಲ್ಲಿ 65 ರಿಂದ 75 ಮಿ.ಮೀ. ಮಳೆಯಾಗಿದ್ದು, ಗಂಗಾವತಿ ಹಾಗೂ ಕಾರಟಗಿ ತಾಲ್ಲೂಕಿನ ಹಣವಾಳ, ಬೇವಿನಾಳ, ಚಿಕ್ಕಡಣಕನಕಲ್ ಮತ್ತು ಹುಲಿಕಲ್ ಗ್ರಾಮಗಳಲ್ಲೂ ಸಹ 35 ರಿಂದ 50 ಮಿ.ಮೀ. ಮಳೆಯಾಗಿದೆ.

ಈ ರೀತಿಯ ಮಳೆಯಿಂದಾಗಿ ರೈತರ ಜಮೀನಿನಲ್ಲಿರುವ ಬೇಸಿಗೆ ಬೆಳೆ ನಷ್ಟವಾಗಿದ್ದರೆ, ಬೆಳೆವಿಮೆಗೆ ನೋಂದಾಯಿಸಿಕೊಂಡಿರುವ ರೈತರು ವಿಮೆಗೆ ನೋಂದಾಯಿಸಿದ ಬೆಳೆಗಳ ವಿವರ, ಹಾನಿಯ ಪ್ರಮಾಣ ಮತ್ತು ಹಾನಿಗೆ ಕಾರಣವಾದ ಪರಿಸ್ಥಿತಿಯನ್ನು ಘಟನೆ ಸಂಭವಿಸಿದ 72 ಗಂಟೆಗಳ ಒಳಗೆ ಟಾಟಾ ಎಐಜಿ ಇನ್ಸೂರೆನ್ಸ್ ಕಂಪನಿಯ ಟೋಲ್ ಫ್ರೀ ಸಂಖ್ಯೆ 1800–209–3536 & 9148442314 ಕ್ಕೆ ಸಂಪರ್ಕಿಸಬಹುದು ಅಥವಾ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಕೊಪ್ಪಳ ಜಿಲ್ಲಾ ಕೃಷಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಏಪ್ರಿಲ್ 19 ರಂದು ಗ್ರಾಹಕರ ಕುಂದುಕೊರತೆ ಸಭೆ

ಕಲಬುರಗಿ,ಏ.16–ಕಲಬುರಗಿ ಗ್ರಾಮೀಣ ವಿಭಾಗೀಯ ಕಚೇರಿ–2ರ ವ್ಯಾಪ್ತಿಯಲ್ಲಿ ಬರುವ ಜೇವರ್ಗಿ, ಯಡ್ರಾಮಿ, ಶಹಾಬಾದ, ಚಿತ್ತಾಪುರ ಹಾಗೂ ಕಾಳಗಿ ಜೆಸ್ಕಾಂ ಉಪವಿಭಾಗಗಳ ಕಚೇರಿಯಲ್ಲಿ ಇದೇ ಏಪ್ರಿಲ್ 19 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ವಿದ್ಯುತ್ ಸಾಕ್ಷರತಾ ದಿನ ಹಾಗೂ ಗ್ರಾಹಕರ ಕುಂದು ಕೊರತೆ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

# ವಿದ್ಯುತ್ ಗ್ರಾಹಕರ ಸಂವಾದ, ಎಸ್‌ಒಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 16– ವಿದ್ಯುತ್ ಗ್ರಾಹಕರ ಸಂವಾದ, ಎಸ್‌ಒಪಿ ಸಭೆಯು 2025ರ ಏಪ್ರಿಲ್ 19ರ ಶನಿವಾರ ರಂದು ಆಯೋಜಿಸಲಾಗಿದೆ ಎಂದು ಯಾದಗಿರಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು(ವಿ)ರಾಘವೇಂದ್ರ ಅವರು ತಿಳಿಸಿದ್ದಾರೆ.

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ನಿರ್ದೇಶನದಂತೆ ಕಾರ್ಯ ಮತ್ತು ಪಾಲನಾ ಯಾದಗಿರಿ ಹಾಗೂ ಗುರುಮಠಕಲ್ ಉಪ ವಿಭಾಗಗಳಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಎಸ್‌ಒಪಿಯನ್ನು ಏರ್ಪಡಿಸಲಾಗಿದೆ. ಕಾರ್ಯ ಮತ್ತು ಪಾಲನಾ ವಿಭಾಗ, ಯಾದಗಿರಿ ವ್ಯಾಪ್ತಿಗೆ ಒಳಪಟ್ಟಂತೆ ಯಾದಗಿರಿ ವಿಭಾಗದಿಂದ ಯಾದಗಿರಿ, ಗುರುಮಠಕಲ್ ಉಪ ವಿಭಾಗದಲ್ಲಿ ಅಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತ ಅಧೀಕ್ಷಕ ಅಭಿಯಂತರರು (ವಿ) ಅಧ್ಯಕ್ಷತೆಯಲ್ಲಿ ನಡೆಯಲಿದೆ. ಆಸಕ್ತರು ಈ ಸಭೆಗೆ ಹಾಜರಾಗಿ ತಮ್ಮ ಅಹವಾಲು ಸಲ್ಲಿಸಬೇಕು, ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯು ಈ ಮೂಲಕ ವಿನಂತಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾತಿ ಸಮೀಕ್ಷೆ – ವಿಶ್ವಕರ್ಮ ಸಮಾಜಕ್ಕೆ ಅನ್ಯಾಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.16 – ಜಾತಿ ಸಮೀಕ್ಷೆಯಲ್ಲಿ ವಿಶ್ವ ಕರ್ಮ ಸಮಾಜಕ್ಕೆಅನ್ಯಾಯವಾಗಿದೆಎಂದು ಅಖಿಲ ಕರ್ನಾಟಕ ವಿಶ್ವ ಬ್ರಾಹ್ಮಣ ಮಠಾಧಿಪತಿಗಳು ಹಾಗೂ ಪೀಠಾಧಿಪತಿಗಳ ಒಕ್ಕೂಟದ ಗೌರವಾಧ್ಯಕ್ಷರಾದ ಅನಂತ ವಿಭೂಸಿತ ಶಿವಸುಜ್ಞಾನತೀರ್ಥ ಮಹಾಸ್ವಾಮಿಗಳು ಹೇಳಿದರು. ನಗರದಲ್ಲಿಬುಧವಾರಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗ ಸಿದ್ಧಪಡಿಸಲಾಗಿರುವ ಜಾತಿ ಸಮೀಕ್ಷೆ ಯಲ್ಲಿ ವಿಶ್ವಕರ್ಮ ಸಮಾಜದ ಅಂಕಿ ಅಂಶಗಳು ತಪ್ಪಾಗಿವೆ. ಈಗಿನ ಮಾಹಿತಿಯಲ್ಲಿ ನಮ್ಮ ಜನಾಂಗ ಕೇವಲ 15 ಲಕ್ಷ ಎಂದು ನಮೂದಿಸಿದೆ. ಆದರೆ ಇದು ಸತ್ಯಕ್ಕೆದೂರವಾಗಿದೆ. ನಮ್ಮ ಜನಾಂಗ ರಾಜ್ಯದಲ್ಲಿ ಸುಮಾರು 40 ಲಕ್ಷಕ್ಕೂ ಹೆಚ್ಚು ಜನರು ಇದ್ದಾರೆ ಎಂದು ಹೇಳಿದರು. ರಾಜ್ಯದ ಪ್ರತಿ ಗ್ರಾಮದಲ್ಲಿಯೂ ವಿಶ್ವಕರ್ಮ ಬ್ರಾಹ್ಮಣರ ಕುಟುಂಬಗಳು ಇವೆ. ಇದರಲ್ಲಿ ಪಂಚ ವೃತ್ತಿಯೊಂದಿಗೆ ನಮ್ಮ ಜನಾಂಗ ಗುರುತಿಸಿಕೊಂಡಿದ್ದು ಇದನ್ನು ಸರಿಯಾಗಿ ಗುರುತಿಸದೇ ಅಂದಾಜಿನಲ್ಲಿ ಅಂಕಿ ಸಂಖ್ಯೆಯನ್ನು ದಾಖಲೆ ಮಾಡಿದ್ದಾರೆ. ಇದನ್ನು ಪುನರ್ ಪರಿಶೀಲನೆ ಮಾಡಿ ನೈಜವಾದ ಅಂಕಿ ಸಂಖ್ಯೆಯನ್ನು ನಮೂದಿಸಬೇಕು ಎಂದು ಅವರು ಒತ್ತಾಯಿಸಿದರು.

ದೇಶದ ಬೆನ್ನೆಲಬು ರೈತರಾದರೆ ರೈತರ ಬೆನ್ನೆಲಬು ವಿಶ್ವಕರ್ಮ ಜನಾಂಗ. ರೈತಾಪಿ ಜನಾಂಗಕ್ಕೆ ಕೃಷಿ ಕಾರ್ಯಕ್ಕೆ ಬೇಕಾಗುವ ಉಪಕರಣಗಳನ್ನು ಬಡಿಗ ಹಾಗೂ ಕಮ್ಮಾರ ನಿರ್ಮಿಸಿಕೊಡುತ್ತಾನೆ. ಜಾತಿ, ಮತ, ಪಂಥಗಳನ್ನು ಲೆಕ್ಕಿಸದೇ ಗುಡಿ ಗೋಪುರಗಳಿಗೆ ಮೂರ್ತಿಗಳನ್ನು ಕೊಟ್ಟು ದೇವ ಶಿಲ್ಪಿಗಳೆನಿಸಿದವರು ನಾವು. ಹೀಗಾಗಿ ಸಮಾಜಕ್ಕೆ ನಮ್ಮ ಜನಾಂಗದ ಕೊಡುಗೆ ಅಪಾರವಾಗಿದೆ. ಹೀಗಿದ್ದೂ ಜಾತಿ ಸಮೀಕ್ಷೆಯಲ್ಲಿ ನಮ್ಮ ಸಮಾಜದ ಅಂಕಿ ಸಂಖ್ಯೆ ಗುರುತಿಸುವಲ್ಲಿ ಅನ್ಯಾಯವಾಗಿದೆ. ಕೂಡಲೇ ಸರ್ಕಾರ ಈಗಿನ ಜಾತಿ ಸಮೀಕ್ಷೆ ಪರಿಶೀಲನೆ ಮಾಡಿ ಸತ್ಯದ ವರದಿಯನ್ನು ನೀಡಬೇಕು ಎಂದು ಆಗ್ರಹಿಸಿದ ಶಿವಸುಜ್ಞಾನತೀರ್ಥ ಸ್ವಾಮಿಗಳು, ಸರಿಯಾದ ವರದಿ ಬರದಿದ್ದರೆ ಮುಂದಿನ ದಿನಗಳಲ್ಲಿ ನಮ್ಮ ಸಮಾಜ ಹೋರಾಟ ಮಾಡ ಬೇಕಾಗುತ್ತದೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ರಾಮಚಂದ್ರ ಮಹಾಸ್ವಾಮಿಗಳು, ಜಗನ್ನಾಥ ಮಹಾಸ್ವಾಮಿಗಳು, ಕಾಳಹಸ್ತಿ ಮಹಾಸ್ವಾಮಿಗಳು, ದೇವೇಂದ್ರ ಮಹಾಸ್ವಾಮಿಗಳು ಉಪಸ್ಥಿತರಿದ್ದರು.

# ನೀರು ಶುದ್ದೀಕರಣ ಘಟಕ ಕಾಮಗಾರಿ ಪರಿಶೀಲಿಸಿದ ಸಿಇಓ ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.16 –ಬಾದಾಮಿ ತಾಲೂಕಿನ ತೋಗುಣಶಿ ಗ್ರಾಮದಲ್ಲಿ ನಡೆಯುತ್ತಿರುವ ನೀರು ಶುದ್ದೀಕರಣ ಘಟಕದ ಕಾಮಗಾರಿ ಸ್ಥಳಕ್ಕೆ ಬುಧವಾರ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸ್ಥಳೀಯ ಅಧಿಕಾರಿಗಳು, ಅಭಿಯಂತರರು ಮತ್ತು ಗುತ್ತಿಗೆದಾರರೊಂದಿಗೆ ಕಾಮಗಾರಿ ಕುರಿತು ಮಾತುಕತೆ ನಡೆಸಿ ಕಾಮಗಾರಿ ಗುಣಮಟ್ಟ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು. ಗ್ರಾಮೀಣ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಈ ಘಟಕ ಬಹಳ ಮುಖ್ಯವಾಗಿದೆ ಎಂದರು ಅವರು ತಿಳಿಸಿದರು. ನಂತರ ಆಡಗಲ್ಲ ಗ್ರಾಮ ಪಂಚಾಯತಿಗೆ ಭೇಟಿ ನೀಡಿದ ಕುರೇರ, ಗ್ರಾಮೀಣ ಆಡಳಿತ ವ್ಯವಸ್ಥೆಗಳ ಕಾರ್ಯಕ್ಷಮತೆ, ಅಭಿವೃದ್ಧಿ ಯೋಜನೆಗಳ ಅನುಷ್ಠಾನ ಮತ್ತು ಸಾರ್ವಜನಿಕ ಸೇವೆಗಳ ಲಭ್ಯತೆಗಳನ್ನು ಪರಿಶೀಲಿಸಿದರು. ಬೇಲೂರು ಗ್ರಾಮದಲ್ಲಿರುವ ಇಂ-ಟೆಕ್ ಜಾಕ್‌ವೆಲ್ ತಾಣಕ್ಕೆ ಭೇಟಿ ನೀಡಿದ ಸಿಇಓ, ನೀರು ಸಂಗ್ರಹ ಮತ್ತು ವಿತರಣೆ ಪ್ರಕ್ರಿಯೆಯಲ್ಲಿ ಸದ್ಯದ ಸ್ಥಿತಿಗತಿ, ಕಾರ್ಯಪದ್ಧತಿ ಮತ್ತು ಭವಿಷ್ಯದ ಅಗತ್ಯತೆಗಳ ಬಗ್ಗೆ ಸಮೀಕ್ಷೆ ಮಾಡಿದರು. ಇತ್ತೀಚಿನ ಜನಸಂಖ್ಯಾ ಬೆಳವಣಿಗೆ ಅನುಗುಣವಾಗಿ ನೀರು ಪೂರೈಕೆ ವ್ಯವಸ್ಥೆಯನ್ನು ಸುಧಾರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ವಂದೆ, ಬಾದಾಮಿ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಆರ್.ಎಸ್.ಬಂಡಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲಾ ವ್ಯಾಪ್ತಿಯ ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಏ. 16–ಪ್ರಸಕ್ತ 2025–26ನೇ ಸಾಲಿಗೆ ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿನ ಪ್ರತಿಷ್ಠಿತ ಶಾಲೆಗಳಿಗೆ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಅರ್ಹತಾ ಪರೀ-ಕ್ಷೆ ಮೂಲಕ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ತಿಳಿಸಿದ್ದಾರೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು 2024–25ನೇ ಸಾಲಿನ 5ನೇ ತರಗತಿಯಲ್ಲಿ ಕಡ್ಡಾಯವಾಗಿ ಶೇ. 60 ರಷ್ಟು ಅಂಕಗಳನ್ನು ಪಡೆದಿರಬೇಕು. ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ಸೇರಿ 2.50 ಲಕ್ಷ ರೂ. ದೊಳಗಿರಬೇಕು. ಸರ್ಕಾರಿ ನೌಕರರ ಮಕ್ಕಳು ಈ ಯೋಜನೆಗೆ ಅರ್ಹರಿರುವುದಿಲ್ಲ. ವಿಶೇಷ ವರ್ಗಗಳಿಗೆ ಸೇರಿರುವ ಮಕ್ಕಳು ಕಡ್ಡಾಯವಾಗಿ ಸಂಬಂಧಿಸಿದ ಪ್ರಾಧಿಕಾರದಿಂದ/ಅಧಿಕಾರಿಗಳಿಂದ ಪ್ರಮಾಣಪತ್ರ ಪಡೆದು (ಕೋವಿಡ್–19 ದಿಂದ ತಂದೆ/ ತಾಯಿಯನ್ನು ಕಳೆದುಕೊಂಡ ಮಕ್ಕಳು, ಜೀತ ವಿಮುಕ್ತ ಮಕ್ಕಳು, ಪೌರಕಾರ್ಮಿಕರ ಮಕ್ಕಳು, ಸಫಾಯಿ ಕರ್ಮಚಾರಿ ಮಕ್ಕಳು, ಸ್ಮಶಾನ ಭೂಮಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಮಕ್ಕಳು, ದೇವದಾಸಿಯರ ಮಕ್ಕಳು, ಅಂಗವಿಕಲ ಮಕ್ಕಳು, ಯೋಜನಾ ನಿರಾಶ್ರಿತರ ಮಕ್ಕಳು, ಮಾಜಿ ಸೈನಿಕರ ಮಕ್ಕಳು, ಸಾಲದ ಬಾದೆಯಿಂದ ಆತ್ಮಹತ್ಯೆಯಿಂದ ಮೃತರಾದ ರೈತರ ಮಕ್ಕಳು ಇತ್ಯಾದಿ ವಿಶೇಷ ವರ್ಗಗಳಾಗಿರುತ್ತವೆ) ಸಲ್ಲಿಸಬೇಕು.

ಈ ಪ್ರತಿಷ್ಠಿತ ಶಾಲೆಗಳಿಗೆ ವಿದ್ಯಾರ್ಥಿಗಳನ್ನು ಅರ್ಹತಾ ಪರೀಕ್ಷೆ ಮೂಲಕ ಆಯ್ಕೆ ಮಾಡಲಾಗುತ್ತಿದ್ದು, ಅರ್ಜಿ ಸಲ್ಲಿಕೆಗೆ ಮೇ 3 ರಂದು ಕೊನೆಯ ದಿನವಾಗಿದೆ. ಮೇ 5 ರಂದು ಅರ್ಜಿಯ ಪರಿಶೀಲನೆ, ಮೇ 9 ರಂದು ಪ್ರವೇಶ ಪರೀಕ್ಷೆ ಜರುಗಲಿದೆ. ಮೇ 13 ರಂದು ಪ್ರವೇಶ ಪರೀಕ್ಷೆಯ ಫಲಿತಾಂಶ ಘೋಷಣೆ ಮಾಡಲಾಗುತ್ತದೆ. ಮೇ 17 ರಂದು ವಿದ್ಯಾರ್ಥಿಗಳನ್ನು ಕೌನ್ಸಲಿಂಗ್ ಮೂಲಕ ಆಯ್ಕೆ ಮಾಡಲಾಗುತದೆ. ಮೇ 31 ರಂದು ಆಯ್ಕೆಯಾದ ಶಾಲೆಗೆ ದಾಖಲಾಗಲು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

## ಹಲವಾರು ಅನುಮಾನ ಮೂಡಿಸುತ್ತಿರುವ ವಿದ್ಯಾರ್ಥಿನಿ ಆತ್ಮಹತ್ಯೆ ಪ್ರಕರಣ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದಲ್ಲಿ ಅತ್ಯಂತ ಸುಸಜ್ಜಿತ ಹಾಗೂ ಉತ್ತಮ ಶಿಕ್ಷಣ ಹೊಂದಿರುವ ಶಾಲೆ ಎಂದು ಹೆಸರುವಾಸಿಯಾಗಿರುವ ಹೊಸಪೇಟೆ ರಸ್ತೆಯಲ್ಲಿರುವ ಎಸ್ ಎಫ್ ಎಸ್ ಶಾಲೆಯ ಎಂಟನೇ ತರಗತಿ ವಿದ್ಯಾರ್ಥಿನಿ ನಿರೀಕ್ಷಾ

26/03/2025ರಂದು ಜಿಲ್ಲಾ ಆಸ್ಪತ್ರೆಯ ಹಿಂದುಗಡೆ ಇರುವ ಸರ್ಕಾರಿ ವಸತಿ ಗೃಹದಲ್ಲಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿದೆ ಎಂಬ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ವಿಷಯ ಸಾರ್ವಜನಿಕ ವಲಯದಲ್ಲಿ ಹರಿದಾಡಿದ್ದು ಹಲವಾರು ಪತ್ರಿಕೆಯಲ್ಲೂ ಸಹ ಇದೇ ರೀತಿ ಪ್ರಕಟಗೊಂಡಿರುತ್ತದೆ. ಆದರೆ ಮಕ್ಕಳ ರಕ್ಷಣಾ ಆಯೋಗದವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನೀಡಿರುವ ಮನವಿಯಲ್ಲಿ ಮೇಲೆ ಕಡಿಮೆ ಹಂತ ಬಂದಿದ್ದಕ್ಕೆ 8ನೇ ತರಗತಿ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ನಮೂದಿಸಿದ್ದು ಕೆಳಗಡೆ ಪಾಲಕರ ಹೇಳಿಕೆ ನಮೂದಿಸಿದ್ದು ಅದರಲ್ಲಿ ಪೋಷಕರು ತಮ್ಮ ಮಗಳು ಉತ್ತಮವಾಗಿ ವಿದ್ಯಾಭ್ಯಾಸ ಮಾಡುವುದಲ್ಲದೆ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಸಹ ಗಳಿಸುತ್ತಿದ್ದಳು ಆದರೆ ಶಾಲೆಯವರು ಯಾವ ಕಾರಣಕ್ಕಾಗಿ ನಮ್ಮ ಮಗಳು ಪರೀಕ್ಷೆಯಲ್ಲಿ ನಕಲು ಮಾಡುತ್ತಿದ್ದಳು ಎಂದು ತಿಳಿಸಿದ್ದಾರೆ ಎಂಬುದರ ಬಗ್ಗೆ ಮಾಹಿತಿ ಇಲ್ಲ ಆ ದಿನದಂದು ಪೋಷಕರು ಶಾಲೆಯ ಬಳಿ ಹೋಗಿ ಶಾಲೆಯ ಶಿಕ್ಷಕರು ಮತ್ತು ಪ್ರಾಂಶುಪಾಲರನ್ನು ಭೇಟಿ ಮಾಡಲು ಪ್ರಯತ್ನಿಸಿದರು ಅದು ಸಾಧ್ಯವಾಗಲೇ ಇಲ್ಲ ಎಂದು ತಿಳಿಸಿದ್ದು. ಮೃತ ವಿದ್ಯಾರ್ಥಿನಿಯ ಪೋಷಕರು ಸದರಿ ಘಟನೆಗೆ ಸಂಬಂಧಿಸಿದಂತೆ ತಮ್ಮ ಮಗಳನ್ನು ವಿಚಾರಿಸಿದಾಗ ತನ್ನನ್ನು ನಕಲು ಮಾಡುತ್ತಿದ್ದೀಯಾ ಎಂಬ ಕಾರಣಕ್ಕೆ ಒಂದು ಗಂಟೆಗಳ ಕಾಲ ಪ್ರತ್ಯೇಕ ಕೊಠಡಿಯಲ್ಲಿ ಕೂಡಿಹಾಕಿದ್ದು ಹಾಗೂ ನನಗೆ ಮಾನಸಿಕವಾಗಿ ಸಾಕಷ್ಟು ಹಿಂಸೆ ನೀಡಿದ್ದಾರೆ ಎಂದು ತಿಳಿಸಿರುತ್ತಾರೆ. ಆದರೆ ನಾನು ಯಾವುದೇ ನಕಲು ಮಾಡಿರುವುದಿಲ್ಲ ಎಂಬ ವಿಷಯವನ್ನು ಪೋಷಕರಿಗೆ ತಿಳಿಸುತ್ತಾಳೆ ಎಂದು ಪೋಷಕರು ಆಯೋಗದ ಸದಸ್ಯರಿಗೆ ತಿಳಿಸಿದ್ದಾರೆ ಎಂದು ಮಕ್ಕಳ ರಕ್ಷಣಾ ಆಯೋಗದ ಸದಸ್ಯರು ಹಾಗೂ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಪೊಲೀಸ್ ನಿರೀಕ್ಷಕರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಮಕ್ಕಳ ರಕ್ಷಣಾಧಿಕಾರಿಗಳೊಂದಿಗೆ ಈ ವಿಷಯವನ್ನು ಹಂಚಿಕೊಂಡಿದ್ದಾರೆ ಎಂದು ನಮೂದಿಸಿದ್ದು ಈ ಎಲ್ಲಾ ದಾಖಲಾತಿಗಳು ಹಲವಾರು ಅನುಮಾನಕ್ಕೆ ಆಸ್ಪದ ನೀಡಿದ್ದು ವಿದ್ಯಾರ್ಥಿನಿಯು ಕಡಿಮೆ ಅಂಕ ಪಡೆದಿದ್ದಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆಯೇ.....? ಅಥವಾ ನಕಲು ಮಾಡುತ್ತಿದ್ದ ವಿಷಯಕ್ಕೆ ಶಾಲೆಯವರ ಅನುಚಿತ ವರ್ತನೆಯಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.....? ಅನುಮಾನಗಳು ಮೂಡುತ್ತಿದ್ದು ಇದರ ಜೊತೆ ಜೊತೆಗೆ ವಿದ್ಯಾರ್ಥಿನಿಯು ಮಾರ್ಚ್ 26ರಂದು ಆತ್ಮಹತ್ಯೆಗೆ ಶರಣಾಗಿದ್ದು ಸಹಜವಾಗಿ ಏಪ್ರಿಲ್ 10 ರಂದು ಪರೀಕ್ಷೆ ಪಲಿತಾಂಶ ಪ್ರಕಟಿಸುವುದು ಸಾಮಾನ್ಯವಾಗಿದ್ದು ಎಲ್ಲರಿಗೆ ತಿಳಿದ ವಿಷಯವಾಗಿರುತ್ತದೆ. ಆದರೆ ನಗರದ ಪ್ರತಿಷ್ಠಿತ ಶಾಲಾ ವಿದ್ಯಾಸಂಸ್ಥೆಯವರು ಮಾರ್ಚ್ 26ರಂದು ಪರೀಕ್ಷೆ ಫಲಿತಾಂಶ ಮಾಡಿದ್ದಾರೆಯೇ....? ಮಾಡಿದ್ದರೆ ಇಷ್ಟು ಮುಂಚಿತವಾಗಿ ಫಲಿತಾಂಶ ಪ್ರಕಟಿಸಲು ಕಾರಣವೇನು......?

ಅಥವಾ ವಿದ್ಯಾರ್ಥಿನಿಯ ಆತ್ಮಹತ್ಯೆ ವಿಚಾರವನ್ನು ಬೇರೆ ರೀತಿಯಲ್ಲಿ ಜನರಿಗೆ ಮನದಟ್ಟು ಮಾಡುವ ಸಲುವಾಗಿ ಮುಂಚಿತವಾಗಿ ಫಲಿತಾಂಶ ಪ್ರಕಟಿಸಿದ್ದಾರೆಯೇ...? ಎಂಬ ಅನುಮಾನಗಳು ಮೂಡುತ್ತಿದ್ದು. ಇದರ ಜೊತೆಗೆ ಪೊಲೀಸ್ ಇಲಾಖೆ ಸೇರಿದಂತೆ ಶಿಕ್ಷಣ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ, ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಪ್ರಕರಣಕ್ಕೆ ಸಂಬಂಧಪಟ್ಟಂತೆ ಮೌನ ವಹಿಸಿರುವ ಉದ್ದೇಶದ ಹಿಂದಿರುವ ಕಾರಣವಾದರೂ ಏನು......? ಎಂಬ ಹಲವಾರು ಅನುಮಾನಗಳು ಹುಟ್ಟುಕೊಳ್ಳುತ್ತಿವೆ.

ಇದೆಲ್ಲವನ್ನು ಗಮನಿಸಿದಾಗ ಪ್ರಕರಣವು ನೇರ ಹಾದಿಯಲ್ಲಿ ಸಾಗದೆ ಅಡ್ಡದಾರಿ ಹಿಡಿಯುತ್ತಿದೆ-ಯೇ.? ವಿದ್ಯಾರ್ಥಿಯ ಸಾವಿಗೆ ನ್ಯಾಯ ದೊರಕುತ್ತದೆಯೇ..? ಅಥವಾ ಪ್ರಕರಣ ಇಲ್ಲಿಗೆ ಅಂತ್ಯಗೊಳ್ಳುತ್ತಿದೆಯೇ.? ಎಂಬ ಹಲವಾರು ಅನುಮಾನಗಳು ಸಾರ್ವಜನಿಕ ವಲಯದಲ್ಲಿ ಮೂಡುತ್ತಿದ್ದು ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಸಿಗುತ್ತದೆ ಎಂದು ಕಾದು ನೋಡಬೇಕಾಗಿದೆ.

## ಜಾತಿ ಗಣತಿಯಲ್ಲಿ ಲಿಂಗಾಯತರಿಗೆ ಅನ್ಯಾಯ : ಸಂಗಮೇಶ ಎನ್ ಜವಾದಿ.



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ::ಜಾತಿಗಣತಿ ದೋಷಪೂರಿತದಿಂದ ಕೂಡಿದೆ ಎಂದು ವರದಿಯಾಗಿದೆ. ವರದಿಯಲ್ಲಿ ಬಹುಸಂಖ್ಯಾತ ಲಿಂಗಾಯತ ಧರ್ಮದವರಿಗೆ ಅನ್ಯಾಯವಾಗಿದೆ ಎಂದು ಸಾಹಿತಿ, ಪ್ರಗತಿಪರ ಚಿಂತಕರಾದ ಸಂಗಮೇಶ ಎನ್ ಜವಾದಿ ಅಸಮಾಧಾನ ವ್ಯಕ್ತಪಡಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು

ಸರ್ಕಾರ ಇನ್ನೊಮ್ಮೆ ಸಮೀಕ್ಷೆ ಮಾಡಿಸಬೇಕು. ಮತ್ತೊಮ್ಮೆ ಜಾತಿಗಣತಿ ವರದಿ ಸಿದ್ಧಪಡಿಸಬೇಕು ಎಂದು ಸರ್ಕಾರಕ್ಕೆ ಸಂಗಮೇಶ ಎನ್ ಜವಾದಿಯವರು ಒತ್ತಾಯಿಸಿದರು. ಜಾತಿಗಣತಿಯ ವರದಿ ಜನಸಾಮಾನ್ಯರಲ್ಲಿ ಸಂಶಯ ಹುಟ್ಟುಹಾಕಿದೆ. ಸುಮಾರು ಏಳೆಂಟು ವರ್ಷಗಳ ಹಿಂದೆ ಜಾತಿಗಣತಿ ಸಿದ್ಧಪಡಿಸಿದ್ದಾರೆ. ಆ ಜಾತಿ ಜನಗಣತಿ ವರದಿ ಸಮರ್ಪಕವಾಗಿ ಇಲ್ಲ. ಆ ವರದಿಯನ್ನು ಸಿದ್ಧಪಡಿಸಿದ ವ್ಯಕ್ತಿಗಳು ಕರ್ನಾಟಕ ಪ್ರತಿಯೊಬ್ಬ ವ್ಯಕ್ತಿಯನ್ನು ಸಂಪರ್ಕಿಸಿಲ್ಲವೆಂಬ ಆರೋಪವಿದೆ. ಕಾರಣ ಕೂಡಲೇ ಈ ವರದಿಯ ಸತ್ಯಾಂಶವನ್ನು ಅರಿಯಲು ಆದಷ್ಟು ಬೇಗನೆ ನಾಡಿನಾದ್ಯಂತ ಮನೆ ಮನೆಗಳಿಗೆ ತೆರಳಿ ಪುನಃ ಜಾತಿ ಗಣತಿ ನಡೆಸಬೇಕು. ಸತ್ಯಾಂಶವನ್ನು ನಾಡಿನ ಜನರಿಗೆ ತಿಳಿಸಬೇಕು ಎಂದು ಹೇಳಿದರು.

# ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆ ಜಾರಿಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.16–ಕುರಿಗಾಹಿಗಳ ರಕ್ಷಣೆಗೆ ಸರ್ಕಾರ ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆಯನ್ನು ಜಾರಿಗೆ ತರಬೇಕು ಎಂದು ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಉಪಾಧ್ಯಕ್ಷ ಮುತ್ತಪ್ಪ ಕೋಮಾರ ಆಗ್ರಹಿಸಿದ್ದಾರೆ. ಅವರು ಬುಧವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬೆಟ್ಟಗುಡ್ಡಗಳಲ್ಲಿ ಒಬ್ಬಂಟಿಯಾಗಿ ಹಗಲು ರಾತಿಯೆನ್ನದೆ ಚಳಿ, ಮಳೆ, ಬಿಸಿಲನ್ನು ಲೆಕ್ಕಿಸದೆ ತಮ್ಮ ಕಾಯಕದಲ್ಲಿ ಜೀವನ ನಡೆಸುತ್ತಿರುವ ಕುರಿಗಾಹಿಗಳ ರಕ್ಷಣೆಗೆ ಸರ್ಕಾರ ಮುಂದಾಗಬೇಕು ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಸಾಲಿನ ಬಜೆಟ್ ನಲ್ಲಿ ಕಾಯ್ದೆ ಜಾರಿ ಕುರಿತು ಪ್ರಸ್ತಾಪಿಸುವ ಭರವಸೆ ನೀಡಿದ್ದರು. ಆದರೆ ಅವರು ಈ ಬಗ್ಗೆ ಪ್ರಸ್ತಾಪಿಸದೆ ನುಡಿದಂತೆ ನಡೆಯಲಿಲ್ಲ ಎಂದ ಕೋಮಾರ, ಸರ್ಕಾರ ಶೀಘ್ರದಲ್ಲಿ ಕಾಯ್ದೆಯನ್ನು ಜಾರಿಗೆ ತರಬೇಕು ಇಲ್ಲದಿದ್ದರೇ ಸರ್ಕಾರದ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಹೇಳಿದರು. ಬಾದಾಮಿ ತಾಲೂಕಿನ ಉಗಲವಾಟ ಗ್ರಾಮದ ಕುರಿಗಾಹಿ ಶರಣಪ್ಪ ಜಮ್ಮನಕಟ್ಟಿ ಎಂಬಾತನನ್ನು ಕುರಿಗಳ್ಳರು ಕೊಲೆ ಮಾಡಿದ ಹಿನ್ನೆಲೆಯಲ್ಲಿ ಕುರಿಗಾಹಿಗಳ ಆತ್ಮರಕ್ಷಣೆಗೆ ಬಂದೂಕು ತರಬೇತಿ ನೀಡಬೇಕೆಂದು ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಮಾಡಿಕೊಳ್ಳಲಾಗಿತ್ತು. ಮನವಿಗೆ ಸ್ಪಂದಿಸಿದ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ 500 ಜನ ಕುರಿಗಾಹಿಗಳಿಗೆ ಒಂದು ವಾರ ಬಂದೂಕು ತರಬೇತಿ ನೀಡಿದ್ದು ಸ್ವಾಗತಾರ್ಹ ಎಂದು ಮುತ್ತಪ್ಪ ಕೋಮಾರ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಕಾಶೀನಾಥ ಹುಡೇದ, ಯಲ್ಲಪ್ಪ ಹೆಗಡೆ, ಬಸವರಾಜ ಧರ್ಮಂತಿ, ಸಿದ್ದಪ್ಪ ಬಳಗಾನೂರ, ಪರಶುರಾಮ ಮಂಟೂರ, ಈರಪ್ಪ ಹಂಚಿನಾಳ ಇದ್ದರು.

### ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ವಿಡಿಯೋ ಸಂವಾದ ಸಭೆ

# ಕಂದಾಯ ಪ್ರಕರಣಗಳ ತುರ್ತು ವಿಲೇವಾರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.16 –ಕಂದಾಯ ಇಲಾಖೆಯ ದರಕಾಸ್ತ ಪೋಡಿಗೆ ಸಂಬಂಧಿಸಿದ ಬಾಕಿ ಪ್ರಕರಣಗಳ ತುರ್ತು ವಿಲೇವಾರಿಗೆ ಕ್ರಮವಹಿಸುವಂತೆ ಕಂದಾಯ ಸಚಿವ ಕೃಷ್ಣಬೈರೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬುಧವಾರ ವಿಡಿಯೋ ಸಂವಾದ ಸಭೆಯ ಮೂಲಕ ಬಾಗಲಕೋಟೆ ಜಿಲ್ಲೆಯ ದರಖಾಸ್ತ ಪೋಡಿಗೆ ಸಂಬಂಧಿಸಿದ ಬಾಕಿ ಪ್ರಕರಣಗಳ ಪರಿಶೀಲನೆ ನಡೆಸಿದ ಅವರು, ಜಿಲ್ಲೆಗೆ ಸಂಬಂಧಿಸಿದ ಬಾಕಿ ಪ್ರಕರಣಗಳನ್ನು ತುರ್ತಾಗಿ ವಿಲೇವಾರಿ ಮಾಡಲು ಗುರಿ ಇಟ್ಟುಕೊಂಡು ಕೆಲಸ ಮಾಡುವಂತೆ ಸಲಹೆ ನೀಡಿದರು. ಪ್ರಕರಣಗಳನ್ನು ಇತ್ಯರ್ಥಪಡಿಸುವ ಕಾರ್ಯದಲ್ಲಿ ಯಾರಿಗೂ ತೊಂದ-ರೆಯಾಗದಂತೆ ನೋಡಿಕೊಳ್ಳಬೇಕು. ಜನರ ಪರವಾಗಿ ಕೆಲಸವಾಗುವಂತೆ ಮಾಡಲು ಸಚಿವರು ತಿಳಿಸಿದರು. ಪೋಡಿಮುಕ್ತ ಆಂದೋಲನ ಅಡಿಯಲ್ಲಿ ಕಾಟಾಚಾರದ ಕೆಲಸವಾಗಬಾರದು. ಬಿಟ್ಟು ಹೋದ ಪೋಡಿಗಳ ಮಾಹಿತಿಗಾಗಿ ಗ್ರಾಮವಾರು ಮಾಹಿತಿ ಕಲೆ ಹಾಕುವ ಕೆಲಸವಾಗಬೇಕು. ಪ್ರಕರಣಗಳ ಬೇಗನೇ ಇತ್ಯರ್ಥಕ್ಕೆ ಕ್ರಮವಹಿಸಿ ಬಾಕಿ ಕೆಲಸಗಳನ್ನು ಬೇಗನೇ ಇತ್ಯರ್ಥಪಡಿಸಿ ಸರಕಾರ-ಕ್ಕೆ ಹಾಗೂ ಇಲಾಖೆಗೆ ಒಳ್ಳೆಯ ಹೆಸರು ತರುವ ಕೆಲಸವಾಗಬೇಕು. ಎರಡು ತಿಂಗಳೊಳಗೆ ಪ್ರಗತಿ ಆಗಬೇಕು ಎಂದು ಭೈರೇಗೌಡ ತಿಳಿಸಿದರು. ಪ್ರಕರಣಗಳ ಬಗ್ಗೆ ಆಯಾ ತಾಲೂಕಿನ ತಹಶೀಲ್ದಾರರು ಮಾಹಿತಿ ನೀಡಿದರು.

ಸಭೆಯಲ್ಲಿ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರಕುಮಾರ ಕಠಾರಿಯಾ, ಕಂದಾಯ ಇಲಾಖೆ ಆಯುಕ್ತ ಪಿ.ಸುನೀಲಕುಮಾರ್, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಆಯುಕ್ತ ಜೆ.ಮಂಜುನಾಥ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಭೂದಾಖಲೆ ಉಪನಿರ್ದೇಶಕ ರವಿಕುಮಾರ ಎಂ. ಸೇರಿದಂತೆ ಜಿಲ್ಲೆಯ ಎಲ್ಲ ತಹಶೀಲ್ದಾರರು ಉಪಸ್ಥಿತರಿದ್ದರು.

## ದಿನಗೂಲಿ ನೌಕರರನ್ನು ಸಕ್ರಮಗೊಳಿಸುವ ಸಂಬಂಧ ಅನಾಮಧೇಯ ವ್ಯಕ್ತಿಗಳಿಂದ ಹಣ ವಸೂಲಿ: ಸಾರ್ವಜನಿಕರು ಎಚ್ಚರದಿಂದಿರಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.16–ಜಲಸಂಪನ್ಮೂಲ ಇಲಾಖೆಯಲ್ಲಿ ದಿನಗೂಲಿ ನೌಕರರನ್ನು ಸಕ್ರಮಗೊಳಿಸುವ ಸಂಬಂಧ ಅನಾಮಧೇಯ ವ್ಯಕ್ತಿಗಳು ಸರ್ಕಾರದ ಹೆಸರಿನಲ್ಲಿ ಮತ್ತು ಸರ್ಕಾರದ ಅಧಿಕಾರಿಗಳ ಹೆಸರಿನಲ್ಲಿ ನಕಲಿ ಅಧಿಸೂಚನೆ/ ಆದೇಶ/ ಪತ್ರಗಳನ್ನು ಹಂಚಿ ಸಾರ್ವಜನಿಕರಿಂದ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಆದ್ದರಿಂದ ಸಾರ್ವಜನಿಕರು ಈ ರೀತಿಯ ಯಾವುದೇ ಆಮಿಷಕ್ಕೆ ಒಳಗಾಗಬಾರದೆಂದು ಅಫಜಲಪುರ ಕರ್ನಾಟಕ ನೀರಾವರಿ ನಿಗಮ ನಿಯಮಿತದ ಭೀಮಾ ಏತ ನೀರಾವರಿ ಯೋಜನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ. ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರಡಿ ಜಲಸಂಪನ್ಮೂಲ ಇಲಾಖೆಯ ಅಧೀನಕ್ಕೊಳಪಡುವ ದಿನಗೂಲಿ ನೌಕರರನ್ನು ಸಕ್ರಮಗೊಳಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಆದ್ದ-ರಿಂದ ಸರ್ಕಾರ ಮತ್ತು ಸರ್ಕಾರದ ಅಧಿಕಾರಿಗಳ ಹೆಸರಿನಲ್ಲಿ ನಕಲಿ ಅಧಿಸೂಚನೆ/ಆದೇಶ/ಪತ್ರಗಳನ್ನು ಹೊರಡಿಸಿ ಬಡ ವ್ಯಕ್ತಿಗಳನ್ನು ನಂಬಿಸಿ ಅಮಾಯಕ ಮತ್ತು ಮುಗ್ಧ ಸಾರ್ವಜನಿಕರಿಂದ ಹಣ ವಸೂಲಿ ಮಾಡುತ್ತಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದ್ದು, ಆದ್ದರಿಂದ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕೆಂದು ಎಂದು ಅವರು ತಿಳಿಸಿದ್ದಾರೆ.

# ತಾತ್ಕಾಲಿಕವಾಗಿ ಲಿಡ್ಕರ್ ಮಾರಾಟ ಮಳಿಗೆ ಸ್ಥಗಿತ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.16–ಮಳಿಗೆಯ ದೈನಂದಿನ ನಿರ್ವಹಣಾ ವೆಚ್ಚ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಕಲಬುರಗಿ ನಗರದ ಸೂಪರ ಮಾರ್ಕೇಟ್‌ನ ಜನತಾ ಬಜಾರ ಕಾಂಪ್ಲೆಕ್ಸ್‌ನಲ್ಲಿರುವ ಲಿಡ್ಕರ್ ಮಾರಾಟ ಮಳಿಗೆಯನ್ನು ಆಂತರಿಕ ಕಾರಣಗಳಿಂದ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಕಲಬುರಗಿ ಜಿಲ್ಲಾ ಸಂಯೋಜಕರು ತಿಳಿಸಿದ್ದಾರೆ.

ಗ್ರಾಹಕರು ಆಸಕ್ತಿ ತೋರಿ ಲಿಡ್ಕರ್ ಉತ್ಪನ್ನಗಳನ್ನು ಖರೀದಿಸಿ ಸರ್ಕಾರದ ಸಂಸ್ಥೆಗೆ ಪ್ರೋತ್ಸಾಹ ನೀಡದ ಕಾರಣ ಮಳಿಗೆಯ ದೈನಂದಿನ ನಿರ್ವಹಣಾ ವೆಚ್ಚಗಳು ಹೆಚ್ಚಾಗಿರುತ್ತದೆ. ಬೇರೆ ಸ್ಥಳದಲ್ಲಿ ಮಳಿಗೆ ಹಾಕಲು ಕೇಂದ್ರ ಕಚೇರಿಯಿಂದ ಈಗಾಗಲೇ ನಿರ್ದೇಶನ ನೀಡಿದ್ದು, ಇದು ಮಂಡಳಿಯ ನಿರ್ಣಯವಾಗಿದ್ದು, ಆದ್ದರಿಂದ ಜಿಲ್ಲೆಯ ಬೇರೆ ಸ್ಥಳದಲ್ಲಿ ಮಳಿಗೆ ಹಾಕಲು ಜಾಗ ಹುಡುಕುತ್ತಿದ್ದು, ಇನ್ನೂ ಕೆಲವು ದಿನಗಳಲ್ಲಿ ಲಿಡ್ಕರ್ ಮಾರಾಟ ಮಳಿಗೆ ಪುನ: ಪ್ರಾರಂಭಿಸಲಾಗುವುದು. ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಅವರು ತಿಳಿಸಿದ್ದಾರೆ.

## ಗುತ್ತಿಗೆ/ಬಿಡ್‌ದಾರರು ಗುತ್ತಿಗೆ/ಬಿಡ್ ಮೊತ್ತ ಪಾವತಿಸಲು ಏಪ್ರಿಲ್ 30 ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.16–2025–26 ನೇ ಸಾಲಿನ ಕಲಬುರಗಿ ಜಿಲ್ಲೆಯ ಮೀನುಗಾರಿಕೆ ಇಲಾಖಾ ವ್ಯಾಪ್ತಿಯ ಕೆರೆಗಳ ಮೀನು ಪಾಶುವಾರು ಹಕ್ಕು ಗುತ್ತಿಗೆ/ಬಿಡ್‌ದಾರರು ಗುತ್ತಿಗೆ/ಬಿಡ್ ಮೊತ್ತ ಪಾವತಿಸಲು ಏಪ್ರಿಲ್ 30 ರಂದು ಕೊನೆಯ ದಿನವಾಗಿದೆ. ಗುತ್ತಿಗೆ/ಬಿಡ್ ಮೊತ್ತವನ್ನು ಸಂಬಂಧಪಟ್ಟ ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಚೇರಿಯಲ್ಲಿ ಪಾವತಿಸಕ್ಕದ್ದು, ತಪ್ಪಿದಲ್ಲಿ ಕೆರೆ-ಯ ಮೀನು ಪಾಶುವಾರು ಹಕ್ಕು ರದ್ಧತಿಗೆ ಕ್ರಮವಹಿಸಲಾಗುತ್ತದೆ ಎಂದು ಕಲಬುರಗಿ ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಿಕಾ ವರದಿಗಾರನ ಮೇಲೆ ಅರಣ್ಯಾಧಿಕಾರಿಯಿಂದ ಹಲ್ಲೆ: ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಏ.16: ಬೀದರ್ ವಿಮಾನ ನಿಲ್ದಾಣದ ಬಳಿಯ ಮುಖ್ಯ ರಸ್ತೆಯಲ್ಲಿ ಮಂಗಳವಾರ ರಾತ್ರಿ ವರದಿ ಮಾಡಲು ತೆರಳಿದ್ದ ಬೀದರ್ ಶಕ್ತಿ ಪತ್ರಿಕೆಯ ಜಿಲ್ಲಾ ವರದಿಗಾರ ರವಿ ಭೂಸೆಂಡ್ ಮೇಲೆ ಅರಣ್ಯಾಧಿಕಾರಿ ದಸ್ತಗೀರ ಮತ್ತವರ ತಂಡ ಹಲ್ಲೆ ಮಾಡಿದ್ದು ಖಂಡನೀಯ ಎಂದು ಚಿಟಗುಪ್ಪ ತಾಲೂಕು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ನವೀನ್ ಎನ್.ಗಂಜಿ ತಿಳಿಸಿದ್ದಾರೆ. ಮುಖ್ಯ ರಸ್ತೆಯಲ್ಲಿ ಅರಣ್ಯಾಧಿಕಾರಿಗಳು ರಾತ್ರಿ ಗಿಡ ನೆಡುತ್ತಿದ್ದಾರೆ ಎಂಬ ಮಾಹಿತಿ ಆಧರಿಸಿ ವರದಿ ಮಾಡಲು ತೆರಳಿ ಘಟನೆಯ ವಿಡಿಯೋ ಚಿತ್ರೀಕರಿಸುತ್ತಿದ್ದ ರವಿಯ



ಮೇಲೆ ಅರಣ್ಯಾಧಿಕಾರಿ ದಸ್ತಗಿರ್ ವಿಡಿಯೋ ಏಕೆ ಮಾಡುತ್ತಿದ್ದೀಯಾ ಎಂದು ಹೇಳಿ ಅವ್ಯಾಚ್ಚ ಶಬ್ದಗಳಿಂದ ನಿಂದಿಸಿ ಹಲ್ಲೆ ನಡೆಸಿದ್ದಾರೆ. ಅಲ್ಲದೆ ಖಾಸಗಿ ವಾಹನದಲ್ಲಿ ಅಕ್ರಮವಾಗಿ ರವಿಯನ್ನು ಅರಣ್ಯ ಭವನಕ್ಕೆ ತೆಗೆದುಕೊಂಡು ಹೋಗಿದ್ದಾರೆ. ವಿಡಿಯೋ ಚಿತ್ರೀಕರಣ ಮತ್ತು ವರದಿಗಾರಿಕೆಯ ಬಗ್ಗೆ ಅರಣ್ಯ ಅಧಿಕಾರಿಗಳಿಗೆ ಅಕ್ಷೇಪವಿದ್ದಲ್ಲಿ ಪೊಲೀಸರನ್ನು ಕರೆಯಿಸಿ ಅವರ ವಶಕ್ಕೆ ನೀಡಬಹುದಿತ್ತು. ಅಲ್ಲದೆ ವಿಡಿಯೋ ಚಿತ್ರೀಕರಿಸಿದ್ದು ಸಾರ್ವಜನಿಕ ರಸ್ತೆಯಲ್ಲಿ. ನಿಯಮಗಳನ್ನು ಗಾಳಿಗೆ ತೂರಿ ವರದಿಗಾರನ ಮೇಲೆ ಹಲ್ಲೆ ಮಾಡಿದ ಅರಣ್ಯಾಧಿಕಾರಿ ದಸ್ತಗಿರ್ ಹಾಗು ಇತರ ಅಧಿಕಾರಿ ಮತ್ತವರ ಸಿಬ್ಬಂದಿಗಳನ್ನು ಜಿಲ್ಲಾ ಉಸ್ತುವಾರಿ ಮತ್ತು ಅರಣ್ಯ ಸಚಿವರಾದ ಈಶ್ವರ್ ಖಂಡ್ರೆ ತಕ್ಷಣ ಅಮಾನತ್ತು ಮಾಡಬೇಕು ಎಂದು ನವೀನ್ ಗಂಜಿ ಅಗ್ರಹಿಸಿದ್ದಾರೆ.

# ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಿಂದ ಹಜ್ಜ್‌ಗೆ ತೆರಳುವ ಯಾತ್ರಾರ್ಥಿಗಳಿಗೆ ಲಸಿಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಏ. 16: ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಯಿಂದ ಹಜ್ಜ್‌ಗೆ ತೆರಳುವ 513 ಯಾತ್ರಾರ್ಥಿಗಳಿಗೆ ಕಲಬುರಗಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಖಾನಾಪುರ ವ್ಯಾಪ್ತಿಗೊಳಪಡುವ ಮಜ್ಲಿಸ್ ರಹಬರ್–ಎ–ಹುಜ್ಜಾಜ್ ಹಜ್ ಕಮಿಟಿ ಹಜ್ ಯಾತ್ರಾರ್ಥಿಗಳಿಗೆ ("HAJPILGRIMS-2025) ಲಸಿಕಾ ಶಿಬಿರವನ್ನು ಬುಧವಾರ ಕಲಬುರಗಿಯ ನಯಾ ಮೊಹಲ್ಲಾದಲ್ಲಿ ಹಮ್ಮಿಕೊಳ್ಳಲಾಯಿತು. ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಆರ್ ಸಿ ಎಚ್ ಅಧಿಕಾರಿ ಡಾ. ಸಿದ್ದು ಪಾಟೀಲ್, ತಜ್ಞ ವೈದ್ಯರಾದ ಡಾ. ಉಮಾ ಕಾಂತ್, ಡಾ. ಕೈಸರ್ ಆಯೇಷಾ ಫಾತಿಮಾ, ಡಾ.ಶಿವಶಂಕರ್, ನಗರ ಪ್ರಾ ಆ ಕೇಂದ್ರ ಮಕ್ತಾಂಪುರ್ ಮತ್ತು ಖಾನಾಪುರದ ಆಡಳಿತ ವೈದ್ಯಾಧಿಕಾರಿಗಳು ಹಾಗೂ ನಮ್ಮ ಕ್ಲಿನಿಕ್ ಸಿಬ್ಬಂದಿಗಳು, ಜಿಲ್ಲಾ ಆರ್ ಸಿ ಎಚ್ ವಿಭಾಗದ ಮೇಲ್ವಿಚಾರಣಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಇದು ಜಾತಿಗಣತಿಯಲ್ಲ, ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ; ಸಿಎಂ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.16:ಇದು ಜಾತಿಗಣತಿ ಅಲ್ಲ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ. ಇದರಿಂದ ಯಾರಿಗೂ ಅನ್ಯಾಯವಾಗಲು ಅವಕಾಶ ನೀಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಹೇಳಿದ್ದಾರೆ.

ವಿಭಾಗ ಮಟ್ಟದ ಉದ್ಯೋಗ ಮೇಳದ ಉದ್ಘಾಟನೆ ಸಮಾರಂಭದಲ್ಲಿ ಪಾಲ್ಗೊಳ್ಳಲು ನಗರಕ್ಕೆ ಬಂದ ಸಂದರ್ಭದಲ್ಲಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರರೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟ ಸಭೆಯಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಸಚಿವರಿಗೆ ಅವಕಾಶ ನೀಡಲಾಗುವುದು. ಇದು ಜನಗಣತಿ ಅಲ್ಲ. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಅಷ್ಟೇ. ಆದರೂ, ಯಾರಿಗೂ ಅನ್ಯಾಯವಾಗಲು ಅವಕಾಶ ನೀಡುವುದಿಲ್ಲ. ಒಕ್ಕಲಿಗ ಸಮುದಾಯದ ಸಚಿವರು, ಶಾಸಕರ ಅಭಿಪ್ರಾಯಗಳನ್ನೂ ಆಲಿಸಲಾಗುವುದು ಎಂದು ಹೇಳಿದರು.

ಉದ್ಯೋಗಮೇಳಗಳನ್ನು ಏರ್ಪಡಿಸುವ ಮೂಲಕ ಯುವಜನತೆಗೆ ಉದ್ಯೋಗ ನೀಡುವುದು ನಮ್ಮ ಸರ್ಕಾರದ ಬದ್ಧತೆ. ವಿಭಾಗೀಯ ಮಟ್ಟದ ಉದ್ಯೋಗ ಮೇಳವನ್ನು ಕಲಬುರ್ಗಿಯಲ್ಲಿ ಇಂದು ಏರ್ಪಡಿಸಲಾಗಿದೆ. ಮೈಸೂರು ಹಾಗೂ ಹುಬ್ಬಳ್ಳಿ, ಧಾರವಾಡದಲ್ಲಿಯೂ ಉದ್ಯೋಗ ಮೇಳವನ್ನು ಏರ್ಪಡಿಸಲಾಗುತ್ತಿದೆ. ಯುವನಿಧಿ ಯೋಜನೆಯನ್ನು ಜಾರಿ ಮಾಡಿದ್ದು, ನಮಗೆ ನಿರುದ್ಯೋಗದ ಸಮಸ್ಯೆ ನಿವಾರಣೆಯ ಉದ್ದೇಶವಿದೆ. ಉದ್ಯೋಗವನ್ನು ಕೊಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ತಿಳಿಸಿದರು.

ನಾಳೆ ಸಾಮಾಜಿಕ, ಆರ್ಥಿಕ ಸಮೀಕ್ಷೆಯ ಕುರಿತು ಪ್ರತ್ಯೇಕವಾಗಿ ಸಚಿವ ಸಂಪುಟ ಸಭೆಯನ್ನು ಕರೆಯಲಾಗಿದ್ದು, ಈ ಬಗ್ಗೆ ಚರ್ಚೆ ಮಾಡಲಾಗುವುದು. ಶಾಸಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ನಾಳೆ ಅಂತಿಮವಾಗಿ ತೀರ್ಮಾನ ಮಾಡಲಾಗುವುದು. ಸಾಮಾಜಿಕ, ಆರ್ಥಿಕ ಸಮೀಕ್ಷೆ ಇದಾಗಿದ್ದು, ಯಾವ ಸಮುದಾಯದವರಿಗೂ ಅನ್ಯಾಯವಾಗಲು ನಾವು ಬಿಡುವುದಿಲ್ಲ.

ದಾವಣಗೆರೆಯಲ್ಲಿ ಅನೈತಿಕ ಸಂಬಂಧದ ಆರೋಪದ ಮೇಲೆ ನಡುರಸ್ತೆಯಲ್ಲಿ ಮಹಿಳೆಯ ಮೇಲೆ ಹಲ್ಲೆ ನಡೆಸಿರುವುದು ಅಮಾನವೀಯ, ಅಪರಾಧ. ಯಾರೇ ತಪ್ಪು ಮಾಡಿದರೂ ಕೂಡ ಕ್ರಮ ಖಚಿತ, ಕಾನೂನು ಉಲ್ಲಂಘಿಸಿದರೆ ಯಾರು ಎಷ್ಟೇ ಪ್ರಬಲವಾಗಿದ್ದರೂ, ಬಲಿ ಹಾಕುತ್ತೇವೆ ಎಂದರು.

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ನಮ್ಮ ನಾಯಕಿ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿಯವರ ಮೇಲೆ ಚಾರ್ಜ್ ಶೀಟ್ ಹಾಕಿದ್ದಾರೆ. ಬಿಜೆಪಿಯವರು ರಾಜಕೀಯ ಉದ್ದೇಶದಿಂದ ಇದನ್ನು ಮಾಡುತ್ತಿದ್ದಾರೆ. ನ್ಯಾಷನಲ್ ಹೆರಾಲ್ಡ್ ಪತ್ರಿಕೆ ನಿನ್ನೆ ಮೊನ್ನೆ ಪ್ರಾರಂಭವಾಗಿಲ್ಲ. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಯವರ ಆಸ್ತಿ ಮುಟ್ಟುಗೋಲು ಹಾಕುವುದು, ಚಾರ್ಜ್ ಶೀಟ್ ಹಾಕುವುದು ರಾಜಕೀಯ ದ್ವೇಷದಿಂದ ಮಾಡುತ್ತಿದ್ದಾರೆ ಅಷ್ಟೆ ಎಂದು ತಿಳಿಸಿದರು.

# ಹಲವಾರು ಅನುಮಾನ ಮೂಡಿಸುತ್ತಿರುವ ವಿದ್ಯಾರ್ಥಿನಿ ಆತ್ಮಹತ್ಯೆ ಪ್ರಕರಣ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಏ.16: ನಗರದಲ್ಲಿ ಅತ್ಯಂತ ಸುಸಜ್ಜಿತ ಹಾಗೂ ಉತ್ತಮ ಶಿಕ್ಷಣ ಹೊಂದಿರುವ ಶಾಲೆ ಎಂದು ಹೆಸರುವಾಸಿಯಾಗಿರುವ ಹೊಸಪೇಟೆ ರಸ್ತೆಯಲ್ಲಿರುವ ಎಸ್ ಎಫ್ ಎಸ್ ಶಾಲೆಯ ಎಂಟನೇ ತರಗತಿ ವಿದ್ಯಾರ್ಥಿನಿ ನಿಹಾರಿಕಾ 26/03/2025ರಂದು ಜಿಲ್ಲಾ ಆಸ್ಪತ್ರೆಯ ಹಿಂದುಗಡೆ ಇರುವ ಸರ್ಕಾರಿ ವಸತಿ ಗೃಹದಲ್ಲಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿದೆ ಎಂಬ ಕಾರಣ–ಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ವಿಷಯ ಸಾರ್ವಜನಿಕ ವಲಯದಲ್ಲಿ ಹರಿದಾಡಿದ್ದು ಹಲವಾರು ಪತ್ರಿಕೆಯಲ್ಲೂ ಸಹ ಇದೇ ರೀತಿ ಪ್ರಕಟಗೊಂಡಿರುತ್ತದೆ. ಆದರೆ ಮಕ್ಕಳ ರಕ್ಷಣಾ ಆಯೋಗದವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನೀಡಿರುವ ಮನವಿಯಲ್ಲಿ ಮೇಲೆ ಕಡಿಮೆ ಹಂತ ಬಂದಿದ್ದಕ್ಕೆ 8ನೇ ತರಗತಿ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ನಮೂದಿಸಿದ್ದು ಕೆಳಗಡೆ ಪಾಲಕರ ಹೇಳಿಕೆ ನಮೂದಿಸಿದ್ದು ಅದರಲ್ಲಿ ಪೋಷಕರು ತಮ್ಮ ಮಗಳು ಉತ್ತಮವಾಗಿ ವಿದ್ಯಾಭ್ಯಾಸ ಮಾಡುವುದಲ್ಲದೆ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಸಹ ಗಳಿಸುತ್ತಿದ್ದಳು ಆದರೆ ಶಾಲೆಯವರು ಯಾವ ಕಾರಣಕ್ಕಾಗಿ ನಮ್ಮ ಮಗಳು ಪರೀಕ್ಷೆಯಲ್ಲಿ ನಕಲು




ಮಾಡುತ್ತಿದ್ದಳು ಎಂದು ತಿಳಿಸಿದ್ದಾರೆ ಎಂಬುದರ ಬಗ್ಗೆ ಮಾಹಿತಿ ಇಲ್ಲ ಆ ದಿನದಂದು ಪೋಷಕರು ಶಾಲೆಯ ಬಳಿ ಹೋಗಿ ಶಾಲೆಯ ಶಿಕ್ಷಕರು ಮತ್ತು ಪ್ರಾಂಶುಪಾಲರನ್ನು ಭೇಟಿ ಮಾಡಲು ಪ್ರಯತ್ನಿಸಿದರು ಅದು ಸಾಧ್ಯವಾಗಲೇ ಇಲ್ಲ ಎಂದು ತಿಳಿಸಿದ್ದು. ಮೃತ ವಿದ್ಯಾರ್ಥಿನಿಯ ಪೋಷಕರು ಸದರಿ ಘಟನೆಗೆ ಸಂಬಂಧಿಸಿದಂತೆ ತಮ್ಮ ಮಗಳನ್ನು ವಿಚಾರಿಸಿದಾಗ ತನ್ನನ್ನು ನಕಲು ಮಾಡುತ್ತಿದ್ದೀಯಾ ಎಂಬ ಕಾರಣಕ್ಕೆ ಒಂದು ಗಂಟೆಗಳ ಕಾಲ ಪ್ರತ್ಯೇಕ ಕೊಠಡಿಯಲ್ಲಿ ಕೂಡಿಹಾಕಿದ್ದು ಹಾಗೂ ನನಗೆ ಮಾನಸಿಕವಾಗಿ ಸಾಕಷ್ಟು ಹಿಂಸೆ ನೀಡಿದ್ದಾರೆ ಎಂದು ತಿಳಿಸಿರುತ್ತಾರೆ. ಆದರೆ ನಾನು ಯಾವುದೇ ನಕಲು ಮಾಡಿರುವುದಿಲ್ಲ ಎಂಬ ವಿಷಯವನ್ನು ಪೋಷಕರಿಗೆ ತಿಳಿಸುತ್ತಾಳೆ ಎಂದು ಪೋಷಕರು ಆಯೋಗದ ಸದಸ್ಯರಿಗೆ ತಿಳಿಸಿದ್ದಾರೆ ಎಂದು ಮಕ್ಕಳ ರಕ್ಷಣಾ ಆಯೋಗದ ಸದಸ್ಯರು ಹಾಗೂ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಪೊಲೀಸ್ ನಿರೀಕ್ಷಕರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಮಕ್ಕಳ ರಕ್ಷಣಾಧಿಕಾರಿಗಳೊಂದಿಗೆ ಈ ವಿಷಯವನ್ನು ಹಂಚಿಕೊಂಡಿದ್ದಾರೆ ಎಂದು ನಮೂದಿಸಿದ್ದು ಈ ಎಲ್ಲಾ ದಾಖಲಾತಿಗಳು ಹಲವಾರು ಅನುಮಾನಕ್ಕೆ ಆಸ್ಪದ ನೀಡಿದ್ದು ವಿದ್ಯಾರ್ಥಿನಿಯು ಕಡಿಮೆ ಅಂಕ ಪಡೆದಿದ್ದಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆಯೇ.....? ಅಥವಾ ನಕಲು ಮಾಡುತ್ತಿದ್ದ ವಿಷಯಕ್ಕೆ ಶಾಲೆಯವರ ಅನುಚಿತ ವರ್ತನೆಯಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.....? ಅನುಮಾನಗಳು ಮೂಡುತ್ತಿದ್ದು ಇದರ ಜೊತೆ ಜೊತೆಗೆ ವಿದ್ಯಾರ್ಥಿನಿಯು ಮಾರ್ಚ್ 26ರಂದು ಆತ್ಮಹತ್ಯೆಗೆ ಶರಣಾಗಿದ್ದು ಸಹಜವಾಗಿ ಏಪ್ರಿಲ್ 10 ರಂದು ಪರೀಕ್ಷೆ ಪಲಿತಾಂಶ ಪ್ರಕಟಿಸುವುದು ಸಾಮಾನ್ಯವಾಗಿದ್ದು ಎಲ್ಲರಿಗೆ ತಿಳಿದ ವಿಷಯವಾಗಿರುತ್ತದೆ. ಆದರೆ ನಗರದ ಪ್ರತಿಷ್ಠಿತ ಶಾಲಾ ವಿದ್ಯಾಸಂಸ್ಥೆಯವರು ಮಾರ್ಚ್ 26ರಂದು ಪರೀಕ್ಷೆ ಫಲಿತಾಂಶ ಮಾಡಿದ್ದಾರೆಯೇ....? ಮಾಡಿದ್ದರೆ ಇಷ್ಟು ಮುಂಚಿತವಾಗಿ ಫಲಿತಾಂಶ ಪ್ರಕಟಿಸಲು ಕಾರಣವೇನು......?

ಅಥವಾ ವಿದ್ಯಾರ್ಥಿನಿಯ ಆತ್ಮಹತ್ಯೆ ವಿಚಾರವನ್ನು ಬೇರೆ ರೀತಿಯಲ್ಲಿ ಜನರಿಗೆ ಮನದಟ್ಟು ಮಾಡುವ ಸಲುವಾಗಿ ಮುಂಚಿತವಾಗಿ ಫಲಿತಾಂಶ ಪ್ರಕಟಿಸಿದ್ದಾರೆಯೇ...? ಎಂಬ ಅನುಮಾನಗಳು ಮೂಡುತ್ತಿದ್ದು. ಇದರ ಜೊತೆಗೆ ಪೊಲೀಸ್ ಇಲಾಖೆ ಸೇರಿದಂತೆ ಶಿಕ್ಷಣ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ, ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಪ್ರಕರಣಕ್ಕೆ ಸಂಬಂಧಪಟ್ಟಂತೆ ಮೌನ ವಹಿಸಿರುವ ಉದ್ದೇಶದ ಹಿಂದಿರುವ ಕಾರಣವಾದರೂ ಏನು......? ಎಂಬ ಹಲವಾರು ಅನುಮಾನಗಳು ಹುಟ್ಟುಕೊಳ್ಳುತ್ತಿವೆ.

ಇದೆಲ್ಲವನ್ನು ಗಮನಿಸಿದಾಗ ಪ್ರಕರಣವು ನೇರ ಹಾದಿಯಲ್ಲಿ ಸಾಗದೆ ಅಡ್ಡದಾರಿ ಹಿಡಿಯುತ್ತಿದೆಯೇ.? ವಿದ್ಯಾರ್ಥಿಯ ಸಾವಿಗೆ ನ್ಯಾಯ ದೊರಕುತ್ತದೆ–ಯೇ..? ಅಥವಾ ಪ್ರಕರಣ ಇಲ್ಲಿಗೆ ಅಂತ್ಯಗೊಳ್ಳುತ್ತಿದೆಯೇ.? ಎಂಬ ಹಲವಾರು ಅನುಮಾನಗಳು ಸಾರ್ವಜನಿಕ ವಲಯದಲ್ಲಿ ಮೂಡುತ್ತಿದ್ದು ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಸಿಗುತ್ತದೆ ಎಂದು ಕಾದು ನೋಡಬೇಕಾಗಿದೆ.

# ಮದ್ದರಕಿ ಬಳಿ ರಸ್ತೆ ಅಪಘಾತಕ್ಕಕೊಳಗಾದ ಸಂತ್ರಸ್ತರಿಗೆ ಪರಿಹಾರಕ್ಕೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ.16:ಶಹಾಪೂರ ತಾಲೂಕಿನ ಮದ್ದರಕಿ ಗ್ರಾಮದ ಹತ್ತಿರ ಭೀಕರ ರಸ್ತೆ ಅಪಘಾತದಲ್ಲಿ ದುರ್ಮರಣ ಹೊಂದಿದ ಯಾದಗಿರಿ ತಾಲೂಕಿನ ವರ್ಕನಳ್ಳಿ ಗ್ರಾಮದ 6 ಜನರಿಗೆ ತಲಾ ಒಬ್ಬರಿಗೆ ರೂ. 10.00 ಲಕ್ಷ ಪರಿಹಾರ ನೀಡಬೇಕು ಎಂದು ಯಾದಗಿರಿ ಜಿಲ್ಲಾ ವಾಲ್ಮೀಕಿ ನಾಯಕ ಸಂಘದವತಿಯಿಂದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಇದೇ ಮಾತನಾಡಿದ ಜಿಲ್ಲಾಧ್ಯಕ್ಷ ಗೌಡಪ್ಪಗೌಡ ಆಲ್ದಾಳ ಯಾದಗಿರಿ ತಾಲೂಕಿನ ವರ್ಕನಳ್ಳಿ ಗ್ರಾಮದ ರಸ್ತೆ ಅಪಘಾತದ ದುರಂತದಲ್ಲಿ ಸಾವಿಗೀಡಾದ ವಾಲ್ಮೀಕಿ ಜನಾಂಗದ ಚಾಲಕ ಶರಣಪ್ಪ ತಂ ಹಣಮಂತ, ಸೋಮವ್ವಗಂ/ಹಣಮಂತ, ತಂಗಮ್ಮ ಗಂ/ ಹುಲಿಯಪ್ಪ, ಸುನೀತಾ ತಂ/ ಮಲ್ಲೇಶಪ್ಪ, ಹಣಮಂತಿ ಗಂ/ ಮಲ್ಲಯ, ಬಾಲಮ್ಮ ಗಂ/ ಹಣಮಂತ ಮೃತ ಕುಟುಂಬದವರಿಗೆ ತಲಾ ರೂ. 10.00 ಲಕ್ಷ ಪರಿಹಾರ ಹಾಗೂ 10 ಕ್ಕಿಂತ ಹೆಚ್ಚು ಜನರು ಕೈ–ಕಾಲು ಮುರಿದುಕೊಂಡು ಅಂಗವಿಕಲರಾಗಿರುವವರಿಗೆ ವೈದ್ಯಕೀಯ ವೆಚ್ಚಕ್ಕಾಗಿ ರೂ. 3.00 ಲಕ್ಷ ಪರಿಹಾರ ಕೂಡಲೇ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಶಹಾಪೂರ ತಾಲೂಕಿನ ಮದ್ರಿಕಿ ಗ್ರಾಮದ ಹತ್ತಿರ ಬಸ್ ಮತ್ತು



ಮಹೀಂದ್ರಾ ಪಿಕಪ್ ವಾಹನ ಪರಸ್ಪರ ಡಿಕ್ಕಿ ಹೊಡೆದು. 6 ಜನ ದುರ್ಮರಣ ಹೊಂದಿದ್ದು ಯಾದಗಿರಿ ತಾಲೂಕಿನ ವರ್ಕನಳ್ಳಿ ಗ್ರಾಮದ ಪರಿಶಿಷ್ಟ ಪಂಗಡದ (ಬೇಡ ಜನಾಂಗದ) ತೀರಾ ಬಡತನದ ಕುಟುಂಬದಲ್ಲಿ ದುಡಿಯುವ ವ್ಯಕ್ತಿಗಳಾಗಿದ್ದು, ಹಾಗೂ 10 ಜನರಿಗಿಂತ ಹೆಚ್ಚು ಜನರು ಕೈ–ಕಾಲುಗಳು ಮುರಿದು ಹೋಗಿದ್ದು, ಶರಣಬಸಪ್ಪಗೌಡ ದರ್ಶನಾಪೂರ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಯಾದಗಿರಿ ಮತಕ್ಷೇತ್ರದ ಶಾಸಕರಾದ ಚೆನ್ನಾರೆಡ್ಡಿ ಪಾಟೀಲ್ ತುನ್ನೂರುರವರು ಹಾಗೂ ಸಾರಿಗೆ ಸಚಿವರು ಕೂಡಾ ಮಾನ್ಯ ಮುಖ್ಯಮಂತ್ರಿಯವರಿಗೆ ಸಂಪರ್ಕಿಸಿ ಕೂಡಲೇ ಪರಿಹಾರ ಘೋಷಣೆ ಮಾಡಬಹುದಾಗಿತ್ತು. ಸರ್ಕಾರ ದಿವ್ಯ ನಿರ್ಲಕ್ಷ್ಯತನ ಮಾಡಲಾಗಿದೆ ಎಂದು ಆಕ್ರೋಶವ್ಯಕ್ತಪಡಿಸಿದರು.

ಪರಿಶಿಷ್ಟಪಂಗಡದ ಮೀಸಲಾತಿಯಲ್ಲಿ ಗೆದ್ದಿರುವ ಹಾಲಿ ಮತ್ತು ಮಾಜಿ ಶಾಸಕರು ಹಾಗೂ ಹಾಲಿ ಮತ್ತು ಮಾಜಿ ಸಂಸದರು ಈ ದುರದಂತದ ಬಗ್ಗೆ ತುಟಿ ಬಿಚ್ಚದೇ ನಿರ್ಲಕ್ಷ್ಯತನ ವಹಿಸಿರುವುದು ದುರದೃಷ್ಟಕರ ನಡೆ, ನಾಚಿಕೆಗೇಡಿತನ ಸಂಗತಿಯಾಗಿದೆ. ಕನಿಷ್ಠ ಸೌಜನ್ಯಕ್ಕಾದರೂ ಮೃತ ಕುಟುಂಬಸ್ಥರಿಗೆ ಧೈರ್ಯ ತುಂಬುವ, ಸಾಂತ್ವನದ ಕೆಲಸ ಮಾಡಲಿಲ್ಲ. ಮತ್ತು ಜಿಲ್ಲಾಡಳಿತವೂ ಕೂಡಾ ಮೌನಕ್ಕೆ ಶರಣಾಗಿರುವುದು ಆಶ್ಚರ್ಯವಾಗಿದೆ. ಮೃತರ ಕುಟುಂಬಗಳಿಗೆ ಪರಿಹಾರ ಘೋಷಣೆ ಮಾಡದೇ ಇರುವ ರಾಜ್ಯ ಸರ್ಕಾರದ ನಡೆಯನ್ನು ತೀವ್ರವಾಗಿ ಖಂಡಿಸುತ್ತೇವೆ. ಬೇರೆ–ಬೇರೆ ಕಡೆ ಇಂತಹ ದುರ್ಘಟನೆ ಸಂಭವಿಸಿದಾಗ ಸರ್ಕಾರಗಳು ಕೂಡಲೇ ಸ್ಪಂದಿಸಿ, ಪರಿಹಾರ ಘೋಷಣೆ ಮಾಡಿರುತ್ತದೆ. ವಾಲ್ಮೀಕಿ ಸಮಾಜದ ಮುಗ್ಧ ಜನರನ್ನು ಮತ ಬ್ಯಾಂಕಾಗಿ ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಬಡವರ ಬಗ್ಗೆ ಕಷ್ಟದ ಪರಿಸ್ಥಿತಿಯಲ್ಲಿ ಸಹಾಯಕ್ಕೆ ಬರದಿದ್ದರೆ ನೀವುಗಳು ಜನಪ್ರತಿನಿಧಿಯಾಗಿ ಆಯ್ಕೆಯಾಗಿರುವುದು ಯಾವ ಕಾರಣಕ್ಕೆ ಎಂದು ಪ್ರಶ್ನಿಸಿದರು.

ಮುಖ್ಯಮಂತ್ರಿಗಳು ಜಿಲ್ಲಾ ಉಸ್ತುವಾರಿ ಸಚಿವರಿಂದ, ಜಿಲ್ಲಾಡಳಿತದಿಂದ ಮಾಹಿತಿ ಪಡೆದು ಸರ್ಕಾರ ಪರಿಹಾರ ಘೋಷಣೆ ಮಾಡಬಹುದಾಗಿತ್ತು. ಇಂತಹ ತಾರತಮ್ಯ ನೀತಿಯನ್ನು ವಾಲ್ಮೀಕಿ ಸಮಾಜ ತೀವ್ರವಾಗಿ ಖಂಡಿಸುತ್ತದೆ ಎಂದರು.

ಸರ್ಕಾರದ ನಿರ್ಲಕ್ಷ್ಯತನವನ್ನು ಖಂಡಿಸಿ ಮುಂದಿನ ಹೋರಾಟಕ್ಕೆ ಅಣಿಯಾಗಬೇಕಾಗುತ್ತದೆ ಎಂದು ತಿಳಿಸುತ್ತಾ ಕೂಡಲೇ ಪರಿಹಾರ ಘೋಷಣೆ ಮಾಡಲು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಾಲ್ಮೀಕಿ ಸಮಾಜ ಉ.ಕ. ರಾಜ್ಯಧ್ಯಕ್ಷರಾದ ಮಾರೆಪ್ಪ ನಾಯಕ ಮೊಗದಂಪುರ, ಯಾದಗಿರಿ ಜಿಲ್ಲಾ ಪ್ರಧಾನಕಾರ್ಯದರ್ಶಿ ಸಿದ್ದಲಿಂಗಪ್ಪ ನಾಯಕ, ತಾಲೂಕು ಅಧ್ಯಕ್ಷರಾದ ಸಾಹೇಬಗೌಡ ನಾಯಕ ಗೌಡಗೇರಾ, ಮರೆಪ್ಪ ಪ್ಯಾಟಿ ಶಹಾಪೂರ, ಭೀಮಣ್ಣಗೌಡ ಸುರಪೂರ, ಚಂದ್ರಕಾಂತ ಹತ್ತಿಕುಣಿ, ಮಲ್ಲಿಕಾರ್ಜುನ, ಹಣಮಂತ ಖಾನಳ್ಳಿ, ಶರಣಪ್ಪ ಜಾಕನಳ್ಳಿ, ಶ್ರೀನಿವಾಸ ದೊರೆ, ನಾಗರಾಜ ನಾಯಕ ಪ್ಯಾಟ್ಲಿ, ಭೀಮು ನಾಯಕ ಮಲ್ಲಿಬಾವಿ, ಸಂಜೀವ ನಾಯಕ, ವಿಜಯಕುಮಾರ ನಾಯಕ ಚಿಟ್ಟಿ, ಶೇಖರ ದೊರೆ ಕಕ್ಕಸಗೇರಾ, ತಿರುಪತಿ ಯಳ್ಜಿಂತಿ, ಮಂಜು ನಾಯಕ ಬೈರಿಮಡ್ಡಿ, ಬಸವರಾಜ ಗೊಂದೆನೋರು, ಭೀಮರಾಯ ರಾಮಸಮುದ್ರ, ಈಶಪ್ಪ ಹೆಡಗಿಮದ್ರಾ, ಸಿದ್ದಪ್ಪ ಕ್ಯಾಸಪನಹಳ್ಳಿ, ವಿಶ್ವನಾಥ ಠಾಣಗುಂದಿ, ಸಾಬು ನೀಲಹಳ್ಳಿ, ಕಾಶಪ್ಪ ಅಬ್ಬೆತುಮಕೂರು, ಮೋನಪ್ಪ ಯಾದಗಿರಿ, ಹಣಮಂತ ಬಾಲಚೇಡ, ಭೀಮರಾಯ ಮಲ್ಹಾರ, ಆಂಜನೇಯ ಮಲ್ಹಾರ, ಆಂಜನೇಯ ವರ್ಕನಳ್ಳಿ, ಅಂಬು ನಾಯಕ ಹತ್ತಿಕುಣಿ, ದೇವರಾಜ ವರ್ಕನಳ್ಳಿ, ಮಲ್ಲಿಕಾರ್ಜುನ ಬುದೂರು, ಭೀಮಣ್ಣ ವರ್ಕನಳ್ಳಿ, ರಾಮಣ್ಣ ಗೌಡಗೇರಾ, ಅಂಬಣ್ಣ ಗೌಡಗೇರಾ, ಮಲ್ಲಿಕಾರ್ಜುನ ನೀಲಹಳ್ಳಿ, ಮಂಜುನಾಥ ಬಳಿಚಕ್ರ ಸೇರಿದಂತೆ ಇತರರಿದ್ದರು.

# ಉದ್ಯೋಗ ಪಡೆಯುವುದಷ್ಟೇ ಅಲ್ಲ, ಉದ್ಯೋಗ ಸೃಷ್ಟಿಸುವುದು ನಿಮ್ಮ ಜೀವನದ ಗುರಿಯಾಗಲಿ: ಡಿಸಿಎಂ ಡಿ.ಕೆ. ಶಿವಕುಮಾರ್

ಕಲಬುರಗಿ:ಏ.16:"ಉದ್ಯೋಗ ಪಡೆಯುವುದಷ್ಟೇ ಅಲ್ಲ, ಉದ್ಯೋಗ ಸೃಷ್ಟಿಸುವುದು ನಿಮ್ಮ ಜೀವನದ ಗುರಿಯಾಗಲಿ" ಡಿಸಿಎಂ ಡಿ.ಕೆ. ಶಿವಕುಮಾರ್ ಕಿವಿಮಾತು ಹೇಳಿದರು.

ಕಲಬುರ್ಗಿಯ ಕೆಸಿಟಿ ಕಾಲೇಜು ಕ್ಯಾಂಪಸ್ ನಲ್ಲಿ ಬುಧವಾರ ನಡೆದ ಬೃಹತ್ ಉದ್ಯೋಗ ಮೇಳದ ಉದ್ಘಾಟನಾ ಸಮಾರಂಭದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು.

"ನಿಮ್ಮ ಜೀವನ ನಡೆಯಲು ನಿಮಗೆ ಉದ್ಯೋಗ ಬೇಕು ನಿಜ. ಆದರೆ ನೀವು ಉದ್ಯೋಗ ಮಾಡುವುದಕ್ಕಿಂತ ನೀವೇ ಹತ್ತಾರು ಜನರಿಗೆ ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯುವತ್ತ



ಗಮನಹರಿಸಿ. ಆಗ ಮಾತ್ರ ನೀವು ಯಶಸ್ವಿಯಾಗಲು ಸಾಧ್ಯ. ಉದ್ಯೋಗ ಸಿಗಲಿಲ್ಲ ಎಂದು ನೀವು ಎಂದಿಗೂ ಎದೆಗುಂದಬೇಡಿ. ಜೀವನದಲ್ಲಿ ಒಂದಲ್ಲಾ ಒಂದು ಅವಕಾಶ ಸಿಕ್ಕೇ ಸಿಗುತ್ತದೆ. ಸಿಕ್ಕ ಅವಕಾಶ ಸರಿಯಾಗಿ ಬಳಸಿಕೊಳ್ಳಿ. ಕೌಶಲ್ಯ ಆಧಾರಿತ ಉದ್ಯೋಗ ಮಾಡಿದರೆ ಉತ್ತಮ ಜೀವನ ಸಾಗಿಸಬಹುದು. ನೀವು ಯಾವುದೇ ಕೆಲಸ ಮಾಡಿದರು ಆತ್ಮಗೌರವ ಇರಬೇಕು. ಇಲ್ಲಿ ಅನೇಕರು ಉದ್ಯೋಗಕ್ಕಾಗಿ ಬಂದಿದ್ದೀರಿ. ನೀವು ನಿಮ್ಮ ಜೀವನದಲ್ಲಿ ಸಾವಿರಾರು ಮೆಟ್ಟಿಲು ಹತ್ತುವ ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳಿ. ನಿಮ್ಮ ಜೀವನದಲ್ಲಿ ಅನುಭವ ಸಿಕ್ಕಷ್ಟು ನಿಮ್ಮ ಬದುಕು, ಭವಿಷ್ಯ ಗಟ್ಟಿಯಾಗುತ್ತದೆ. ನಿಮ್ಮ ಬದುಕಿಗೆ ಉತ್ತಮ ಅನುಭವ ಪಡೆದುಕೊಳ್ಳಿ" ಎಂದು ತಿಳಿಸಿದರು.

"ಮಲ್ಲಿಕಾರ್ಜುನ ಖರ್ಗೆ ಅವರು ಯುಪಿಎ ಅವಧಿಯಲ್ಲಿ ಕಾರ್ಮಿಕ ಸಚಿವರಾಗಿದ್ದರು. ದೇಶದಲ್ಲಿ ಅನೇಕ ಕಾರ್ಮಿಕ ಸಚಿವರು ಬಂದು ಹೋಗಿದ್ದಾರೆ. ಆದರೆ ಆಸ್ಕರ್ ಫರ್ನಾಂಡೀಸ್ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರು ಕೈಗೊಂಡ ತೀರ್ಮಾನ ಬೇರೆ ಯಾರೂ ಕೈಗೊಂಡಿಲ್ಲ. ಕಲ್ಬುರ್ಗಿಯ ಇಎಸ್ಐ ಆಸ್ಪತ್ರೆ ಇದಕ್ಕೆ ಸಾಕ್ಷಿಯಾಗಿದೆ. ಆ ಮೂಲಕ ಬಡ ಕಾರ್ಮಿಕರ ಮಕ್ಕಳ ಆರೋಗ್ಯಕ್ಕೆ ನೆರವಾಗಿದ್ದಾರೆ. 371 ಜೆ ಮೂಲಕ ಈ ಭಾಗದ ಮಕ್ಕಳಿಗೆ ಉದ್ಯೋಗ ಹಾಗೂ ಶೈಕ್ಷಣಿಕವಾಗಿ ಉತ್ತೇಜನ ನೀಡಿದ್ದಾರೆ" ಎಂದರು. ಈ ಭಾಗದ ಯುವಕರಿಗೆ ಉದ್ಯೋಗ ದೊರಕಿಸಿಕೊಡಬೇಕು ಎಂದು ಮಲ್ಲಿಕಾರ್ಜುನ ಖರ್ಗೆ ಅವರ ಮಾರ್ಗದರ್ಶನದಲ್ಲಿ ನಮ್ಮ ಸರ್ಕಾರ ಈ ಕಾರ್ಯಕ್ರಮ ಹಮ್ಮಿಕೊಂಡಿದೆ. ನಮ್ಮ ಸರ್ಕಾರ ಐದು ಗ್ಯಾರಂಟಿ ಯೋಜನೆಗಳ ಜತೆಗೆ ಎಲ್ಲಾ ವರ್ಗದ ರಕ್ಷಣೆ ಮಾಡಲು ಕಾರ್ಯಕ್ರಮ ರೂಪಿಸಿಕೊಂಡು ಬಂದಿದೆ ಎಂದರು.

ಇದು ಐತಿಹಾಸಿಕ ಕಾರ್ಯಕ್ರಮ. ಕಲ್ಯಾಣ ಕರ್ನಾಟಕದ 26 ಸಾವಿರ ಜನ ನಿರುದ್ಯೋಗಿ ಯುವಕರಿಗೆ ಉದ್ಯೋಗ ಕೊಡಿಸಲು ಮುಂದಾಗಿರುವ ಸಚಿವ ಶರಣಪ್ರಕಾಶ್ ಪಾಟೀಲ್ ಹಾಗೂ ಅವರ ತಂಡಕ್ಕೆ ಸರ್ಕಾರ ಪರವಾಗಿ ಹಾಗೂ ವೈಯಕ್ತಿಕವಾಗಿ ಅಭಿನಂದನೆ ಸಲ್ಲಿಸುತ್ತೇನೆ. ಕೌಶಲ್ಯ ದೀಪವಿದ್ದಂತೆ. ನೀವು ಒಮ್ಮೆ ಕಲಿತರೆ ಜೀವನ ಪರ್ಯಂತ ನಿಮ್ಮ ಜೀವನದ ದಾರಿ ಬೆಳಗುತ್ತಿರುತ್ತದೆ. ಈ ಇಲಾಖೆಯ ಜವಾಬ್ದಾರಿ ವಹಿಸಿರುವ ಸಚಿವರು ಯಶಸ್ವಿಯಾಗಿ ಮುನ್ನಡೆಸುತ್ತಿದ್ದಾರೆ" ಎಂದು ಶ್ಲಾಘಿಸಿದರು.

# ನ್ಯಾಯದಾನದಲ್ಲಿ ಕರ್ನಾಟಕ ಪೊಲೀಸರು ರಾಷ್ಟದಲ್ಲೇ ಅಗ್ರಸ್ಥಾನದಲ್ಲಿ: ಸಿಎಂ ಶ್ಲಾಘನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.16:ನ್ಯಾಯದಾನ ನೀಡಿಕೆಯಲ್ಲಿ ಕರ್ನಾಟಕ ಪೊಲೀಸರು ದೇಶದಲ್ಲೇ ಅಗ್ರಸ್ಥಾನದಲ್ಲಿದ್ದಾರೆ ಎಂದು ಟಾಟಾ ಟ್ರಸ್ಟ್ ವರದಿ ಹೇಳಿದೆ. ಮಂಗಳವಾರ ಬಿಡುಗಡೆಯಾದ ಐಜೆಆರ್ 2025 ನಾಲ್ಕನೇ ಆವೃತ್ತಿಯಲ್ಲಿ, ದೇಶದ ವಿವಿಧ ರಾಜ್ಯಗಳಲ್ಲಿನ ಪೊಲೀಸ್ ವ್ಯವಸ್ಥೆ, ನ್ಯಾಯ ವಿತರಣೆ, ಜೈಲು ನಿರ್ವಹಣೆ ಮತ್ತು ಕಾನೂನು ನೆರವಿನ ಅಂಶಗಳನ್ನು ಪರಿಗಣಿಸಿ ಈ ವರದಿ ತಯಾರಿಸಲಾಗಿದೆ.

ಕರ್ನಾಟಕವು 18 ದೊಡ್ಡ ಮತ್ತು ಮಧ್ಯಮ ಗಾತ್ರದ ರಾಜ್ಯಗಳಲ್ಲಿ ಮೊದಲ ಸ್ಥಾನದಲ್ಲಿದೆ. ಕಳೆದ ಆವೃತ್ತಿಯಿಂದ ತನ್ನ ಸ್ಥಾನವನ್ನು ಉಳಿಸಿಕೊಂಡಿದೆ. ಪೊಲೀಸ್ ಮತ್ತು ನ್ಯಾಯಾಂಗ ಎರಡರಲ್ಲೂ ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಗಳಿಗೆ ಮೀಸಲಾತಿ ಕೋಟಾ ಪೂರೈಸಿರುವ ಏಕೈಕ ರಾಜ್ಯ ಕರ್ನಾಟಕವಾಗಿದೆ. ಎಲ್ಲಾ ದೊಡ್ಡ ರಾಜ್ಯಗಳಲ್ಲಿ ಶೇ. 1.2 ರಷ್ಟು ಕಡಿಮೆ ಅಧಿಕಾರಿ ಮಟ್ಟದ ಖಾಲಿ ಹುದ್ದೆಗಳನ್ನು ಹೊಂದಿರುವ ರಾಜ್ಯ ಕರ್ನಾಟಕವಾಗಿದೆ.

ಕರ್ನಾಟಕದ ನಂತರ ಆಂಧ್ರಪ್ರದೇಶ, ತೆಲಂಗಾಣ, ಕೇರಳ ಮತ್ತು ತಮಿಳುನಾಡು ರಾಜ್ಯಗಳಿವೆ. ಅಗ್ರ ಶ್ರೇಯಾಂಕದ ರಾಜ್ಯವಾಗಿದ್ದರೂ, ಜೈಲುಗಳು, ಕಾನೂನು ನೆರವು ಮತ್ತು ಪೊಲೀಸ್ ಇಲಾಖೆಯಲ್ಲಿ ಮಹಿಳೆಯರ ನೇಮಕ ವಿಚಾರದಲ್ಲಿ ಕರ್ನಾಟಕದ ಸಾಧನೆ ಹಿಂದುಳಿದಿದೆ.

ಕರ್ನಾಟಕದಲ್ಲಿ ಶೇ. 80ರಷ್ಟು ವಿಚಾರಣಾಧೀನ ಕೈದಿಗಳು:ಐಜೆಆರ್ 2025 ರ ಪ್ರಕಾರ, "ಕರ್ನಾಟಕ ಜೈಲುಗಳಲ್ಲಿ ಶೇ. 80 ರಷ್ಟು ವಿಚಾರಣಾಧೀನ ಕೈದಿಗಳಿದ್ದಾರೆ. ಇದು 2015 ರಿಂದ ಅತ್ಯಧಿಕವಾಗಿದೆ. ಗ್ರಾಮ ಮಟ್ಟದಲ್ಲಿ ಕಾನೂನು ನೆರವಿನ ಕೊರತೆ ಇದಕ್ಕೆ ಕಾರಣವಿರಬಹುದು. ಗ್ರಾಮ ಮಟ್ಟದಲ್ಲಿ ಕಾನೂನು ಸೇವಾ ಕೇಂದ್ರಗಳ ಸಂಖ್ಯೆಯು 157 ರಿಂದ ಈಗ 32 ಕ್ಕೆ ಇಳಿದಿದೆ" ಎಂದು ವರದಿ ಹೇಳುತ್ತದೆ. ರಾಜ್ಯದಲ್ಲಿ ಪೊಲೀಸರ ನೇಮಕಾತಿಯಲ್ಲಿ ಮಹಿಳೆಯರ ಪಾಲನ್ನು ಶೇ. 25 ಇದೆ. ಆದರೆ ವಾಸ್ತವದಲ್ಲಿ ಕರ್ನಾಟಕ ಪೊಲೀಸರಲ್ಲಿ ಪುರುಷ ಪ್ರಾಬಲ್ಯವಿದೆ. ಪೊಲೀಸರಲ್ಲಿ ಶೇ. 9 ರಷ್ಟು ಮತ್ತು ಅಧಿಕಾರಿ ಮಟ್ಟದಲ್ಲಿ ಶೇ. 6 ರಷ್ಟು ಮಹಿಳೆಯರಿದ್ದಾರೆ ಎಂದು ವರದಿ ಹೇಳಿದೆ. ವಿಪರ್ಯಾಸವೆಂದರೆ, ಒಂದೇ ಒಂದು ರಾಜ್ಯ ಅಥವಾ ಕೇಂದ್ರಾಡಳಿತ ಪ್ರದೇಶದಲ್ಲಿ ಪೊಲೀಸ್ ಇಲಾಖೆಯಲ್ಲಿ ಮಹಿಳೆಯರಿಗೆ ಮೀಸಲಾದ ಕೋಟಾವನ್ನು ಭರ್ತಿ ಮಾಡಿಲ್ಲ. ವರದಿಯ ಪ್ರಕಾರ, 2.4 ಲಕ್ಷ ಮಹಿಳಾ ಪೊಲೀಸರ ಪೈಕಿ 960 ಮಂದಿ ಮಾತ್ರ ಐಪಿಎಸ್‌ನಲ್ಲಿದ್ದರೆ, 24,322 ಐಪಿಎಸ್ ಅಧಿಕಾರಿಯೇತರ ಹುದ್ದೆಗಳಾದ ಸಬ್ ಇನ್ಸ್‌ಪೆಕ್ಟರ್, ಇನ್ಸ್‌ಪೆಕ್ಟರ್ ಮತ್ತು ಉಪ ಪೊಲೀಸ್ ವರಿಷ್ಠಾಧಿಕಾರಿ ಹುದ್ದೆಯಲ್ಲಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.